ಬುಧವಾರ
10 ಜೂನ್, 2026
ಸಂಪುಟ 02 । ಸಂಚಿಕೆ 5
04 ಪುಟಗಳು । ಬೆಲೆ 5.00 ರೂ
Mob: 9538786812
Office: 9480847498

PRGI/RNI: KNKAN/25/A1348

ಕನ್ನಡ ದಿನಪತ್ರಿಕೆ

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ



ಸಂಪಾದಕರು
ಅಭಿಷೇಕ್ ಡಿ.ಆರ್

## ರಸ್ತೆ ಗುಂಡಿ, ಕಸದ ರಾಶಿ; 'ಬ್ರೋಕನ್ ಬೆಂಗಳೂರು' ಎಂದು ಸರ್ಕಾರದ ವಿರುದ್ಧ ಬಿಜೆಪಿ ವಾಗ್ದಾಳಿ

### 5 ಸಾವಿರಕ್ಕೂ ಅಧಿಕ ರಸ್ತೆ ಗುಂಡಿ, ಕಸದ ರಾಶಿ ತೆರವಿನಲ್ಲಿ ವೈಫಲ್ಯ ಆರೋಪ; 2,000 ಕೋಟಿ ಅನುದಾನದ ಲೆಕ್ಕ ಕೇಳಿದ ಆರ್. ಅಶೋಕ್

**ಬೆಂಗಳೂರು:** ಮುಂಗಾರು ಮಳೆ ಆರಂಭವಾಗುತ್ತಿದ್ದಂತೆಯೇ ರಾಜ್ಯ ರಾಜಧಾನಿ ಬೆಂಗಳೂರಿನ ಮೂಲಸೌಕರ್ಯ ಸಮಸ್ಯೆಗಳು ಮತ್ತೆ ಮುನ್ನೆಲೆಗೆ ಬಂದಿದ್ದು, ಈ ವಿಚಾರವನ್ನು ಮುಂದಿಟ್ಟುಕೊಂಡು ಪ್ರತಿಪಕ್ಷ ಬಿಜೆಪಿ ರಾಜ್ಯ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದೆ. ನಗರದಲ್ಲಿ ರಸ್ತೆ ಗುಂಡಿಗಳು, ಕಸದ ಸಮಸ್ಯೆ, ನೀರು ನಿಲ್ಲುವ ಪ್ರದೇಶಗಳು ಹಾಗೂ ಅಪೂರ್ಣ ಕಾಮಗಾರಿಗಳ ಬಗ್ಗೆ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿರುವ ಬಿಜೆಪಿ, ತಕ್ಷಣ ಕ್ರಮ ಕೈಗೊಳ್ಳದಿದ್ದರೆ ಉಗ್ರ ಹೋರಾಟ ನಡೆಸುವುದಾಗಿ ಎಚ್ಚರಿಕೆ ನೀಡಿದೆ.

ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್. ಅಶೋಕ್ ಅವರು ಸಾಮಾಜಿಕ ಜಾಲತಾಣದ ಮೂಲಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ವಿರುದ್ಧ ತೀವ್ರ ಟೀಕೆ ಮಾಡಿದ್ದಾರೆ. "ಇದು ಬ್ರ್ಯಾಂಡ್ ಬೆಂಗಳೂರು ಅಲ್ಲ, ಡಿ.ಕೆ. ಶಿವಕುಮಾರ್ ಹಾಗೂ ಕೃಷ್ಣ ಬೈರೇಗೌಡರ ಜುಗಲ್‌ಬಂದಿಯ ಬ್ರೋಕನ್ ಬೆಂಗಳೂರು" ಎಂದು ವ್ಯಂಗ್ಯವಾಡಿರುವ ಅವರು, ಮುಂಗಾರು ಮಳೆಯ ಮೊದಲ ಹಂತದಲ್ಲೇ ನಗರದ ಮೂಲಸೌಕರ್ಯದ ನೈಜ ಸ್ಥಿತಿ ಬಹಿರಂಗವಾಗಿದೆ ಎಂದು ಆರೋಪಿಸಿದ್ದಾರೆ.

ನಗರದಲ್ಲಿ ಸಾವಿರಾರು ರಸ್ತೆ ಗುಂಡಿಗಳು ವಾಹನ ಸವಾರರ ಜೀವಕ್ಕೆ ಅಪಾಯವಾಗಿವೆ. ಮಳೆ ಬಂದಾಗ ಗುಂಡಿಗಳು ನೀರಿನಿಂದ ತುಂಬಿ ಕಾಣಿಸದೇ ಹೋಗುವುದರಿಂದ ಅಪಘಾತಗಳ ಪ್ರಮಾಣ ಹೆಚ್ಚುತ್ತಿದೆ. ವಿಶೇಷವಾಗಿ ಬೈಕ್ ಸವಾರರು ಜೀವವನ್ನು ಕೈಯಲ್ಲಿ ಹಿಡಿದು ರಸ್ತೆಗಿಳಿಯುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಸರ್ಕಾರದ ಅಂಕಿ-ಅಂಶಗಳ ಪ್ರಕಾರ 5,000ಕ್ಕೂ ಹೆಚ್ಚು ರಸ್ತೆ ಗುಂಡಿಗಳು ಗುರುತಿಸಲಾಗಿದ್ದರೂ, ಅವುಗಳನ್ನು ಮುಚ್ಚುವ ಕಾರ್ಯ ಸಮರ್ಪಕವಾಗಿ ನಡೆಯುತ್ತಿಲ್ಲ ಎಂದು ಅಶೋಕ್ ಆರೋಪಿಸಿದ್ದಾರೆ.



ಮಳೆಗಾಲ ಆರಂಭವಾಗುವ ಮುನ್ನ ರಸ್ತೆ ದುರಸ್ತಿ ಕಾಮಗಾರಿಗಳನ್ನು ಪೂರ್ಣಗೊಳಿಸಬೇಕಾಗಿತ್ತು. ಆದರೆ ಈಗಲೂ ಕೇವಲ ಶೇ.20ರಷ್ಟು ಕಾಮಗಾರಿ ಮಾತ್ರ ಪೂರ್ಣಗೊಂಡಿದ್ದು, ಉಳಿದ ಶೇ.80ರಷ್ಟು ಕಾಮಗಾರಿ ನೆನೆಗುದಿಗೆ ಬಿದ್ದಿದೆ. ಇದರಿಂದ ಸಾರ್ವಜನಿಕರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ರಸ್ತೆ ಗುಂಡಿಗಳಿಂದ ಸಂಭವಿಸುವ ಅಪಘಾತಗಳಲ್ಲಿ ಪ್ರಾಣ ಕಳೆದುಕೊಳ್ಳುವ ಬಡವರ ಜೀವಕ್ಕೆ ಯಾರು ಹೊಣೆ ಎಂದು ಅವರು ಪ್ರಶ್ನಿಸಿದ್ದಾರೆ.

ರಸ್ತೆ ಸಮಸ್ಯೆಯ ಜೊತೆಗೆ ನಗರದ ಸ್ವಚ್ಛತೆ ವಿಚಾರದಲ್ಲಿಯೂ ಸರ್ಕಾರ ಸಂಪೂರ್ಣ ವಿಫಲವಾಗಿದೆ ಎಂದು ಬಿಜೆಪಿ ಆರೋಪಿಸಿದೆ. ನಗರದ ಹಲವೆಡೆ ಕಸದ ರಾಶಿಗಳು ಬಿದ್ದಿದ್ದು, ಮಳೆ ನೀರಿನೊಂದಿಗೆ ಕೊಳೆತು ದುರ್ವಾಸನೆ ಬೀರುತ್ತಿವೆ. ಕಸದ ಸರಿಯಾದ ವಿಲೇವಾರಿ

ಆಗದ ಕಾರಣ ಸಾಂಕ್ರಾಮಿಕ ರೋಗಗಳು ಹರಡುವ ಭೀತಿ ಎದುರಾಗಿದೆ. ಮಳೆಗಾಲದಲ್ಲಿ ಡೆಂಗ್ಯೂ, ಮಲೇರಿಯಾ ಸೇರಿದಂತೆ ವಿವಿಧ ಸೋಂಕುಗಳು ಹೆಚ್ಚಾಗುವ ಆತಂಕವೂ ವ್ಯಕ್ತವಾಗಿದೆ.

ನಗರದ ಕೆಲವು ಪ್ರದೇಶಗಳಲ್ಲಿ ಸ್ವಚ್ಛತಾ ಸಿಬ್ಬಂದಿಯೇ ರಸ್ತೆ ಬದಿಯಲ್ಲಿ ಕಸ ಸುರಿಯುತ್ತಿರುವ ದೃಶ್ಯಗಳು ಸಿಸಿಟಿವಿಯಲ್ಲಿ ಸೆರೆಯಾಗಿದ್ದರೂ, ಸಂಬಂಧಪಟ್ಟ ಇಲಾಖೆ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಅಶೋಕ್ ಆರೋಪಿಸಿದ್ದಾರೆ. ಕಸ ನಿರ್ವಹಣೆ ಹೊಣೆ ಹೊತ್ತಿರುವ ಸಂಸ್ಥೆಗಳು ತಮ್ಮ ಜವಾಬ್ದಾರಿಯನ್ನು ನಿರ್ವಹಿಸುವಲ್ಲಿ ವಿಫಲವಾಗಿವೆ ಎಂದು ಅವರು ಟೀಕಿಸಿದ್ದಾರೆ.

ವಿಟ್ಟಸಂದ್ರ ಪ್ರದೇಶದಲ್ಲಿ ಸ್ಥಳೀಯ ನಿವಾಸಿಗಳ ತೀವ್ರ ವಿರೋಧದ ನಡುವೆಯೂ ಕಸ ವರ್ಗಾವಣೆ ಕೇಂದ್ರ ಸ್ಥಾಪಿಸಲು ಸರ್ಕಾರ ಮುಂದಾಗಿದೆ ಎಂದು ಆರೋಪಿಸಿರುವ ಅಶೋಕ್, ಜನರ ಅಭಿಪ್ರಾಯವನ್ನು ನಿರ್ಲಕ್ಷಿಸಿ ಸರ್ಕಾರ ಏಕಪಕ್ಷೀಯವಾಗಿ ನಿರ್ಧಾರಗಳನ್ನು ತೆಗೆದುಕೊಳ್ಳುತ್ತಿದೆ ಎಂದು ಹೇಳಿದ್ದಾರೆ. ಕಸದ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳುವ ಬದಲು ಜನರ ಮೇಲೆ ಹೆಚ್ಚುವರಿ ಹೊರೆ ಹಾಕಲಾಗುತ್ತಿದೆ ಎಂದು ಅವರು ದೂರಿದ್ದಾರೆ.

ಬೆಂಗಳೂರು ಅಭಿವೃದ್ಧಿಗೆ ಸರ್ಕಾರ ಸಾವಿರಾರು ಕೋಟಿ ರೂಪಾಯಿ ಅನುದಾನ ಬಿಡುಗಡೆ ಮಾಡಿರುವುದಾಗಿ ಹೇಳಿಕೊಳ್ಳುತ್ತಿದೆ. ಆದರೆ ನೆಲಮಟ್ಟದಲ್ಲಿ ಯಾವುದೇ ಅಭಿವೃದ್ಧಿ ಕಾಣಿಸುತ್ತಿಲ್ಲ ಎಂದು ಪ್ರತಿಪಕ್ಷ ನಾಯಕ ಪ್ರಶ್ನಿಸಿದ್ದಾರೆ. ಇತ್ತೀಚೆಗೆ ಬೆಂಗಳೂರು ಅಭಿವೃದ್ಧಿಗಾಗಿ ಬಿಡುಗಡೆ ಮಾಡಲಾಗಿದೆ ಎನ್ನಲಾದ ಸುಮಾರು 2,000 ಕೋಟಿ ಅನುದಾನದ ಕುರಿತು ಅನುಮಾನ ವ್ಯಕ್ತಪಡಿಸಿರುವ ಅವರು, "ಅಷ್ಟೊಂದು ಹಣ ಬಿಡುಗಡೆಯಾಗಿದೆ ಎನ್ನುವುದಾದರೆ ರಸ್ತೆ ಗುಂಡಿಗಳು ಇನ್ನೂ ಏಕೆ ಮುಚ್ಚಿಲ್ಲ? ಅಪೂರ್ಣ ಕಾಮಗಾರಿಗಳು ಏಕೆ ಪೂರ್ಣಗೊಂಡಿಲ್ಲ? ಆ ಹಣ ಎಲ್ಲಿಗೆ ಹೋಗಿದೆ?" ಎಂದು ಸರ್ಕಾರವನ್ನು ಪ್ರಶ್ನಿಸಿದ್ದಾರೆ.

ಬೆಂಗಳೂರು ಅಭಿವೃದ್ಧಿ ಖಾತೆ ನಿರ್ವಹಣೆ ವಿಚಾರದಲ್ಲಿಯೂ ಸಚಿವ ಕೃಷ್ಣ ಬೈರೇಗೌಡ ವಿರುದ್ಧ ವಾಗ್ದಾಳಿ ನಡೆಸಿರುವ ಅಶೋಕ್, ಸಚಿವರಿಗೆ ಈ ಖಾತೆಯ ಬಗ್ಗೆ ಆಸಕ್ತಿ ಇಲ್ಲ ಎಂಬ ಭಾವನೆ ಜನರಲ್ಲಿ ಮೂಡಿದೆ ಎಂದು ಆರೋಪಿಸಿದ್ದಾರೆ. "ಖಾತೆ ಇಷ್ಟವಿಲ್ಲದಿದ್ದರೆ ರಾಜೀನಾಮೆ ನೀಡಿ. ಆದರೆ ಒಂದೂವರೆ ಕೋಟಿ ಬೆಂಗಳೂರಿಗರನ್ನು ನಿಮ್ಮ ಅಸಮಾಧಾನಕ್ಕೆ ಬಲಿ ಕೊಡಬೇಡಿ" ಎಂದು ಅವರು ತೀಕ್ಷ್ಣವಾಗಿ ಪ್ರತಿಕ್ರಿಯಿಸಿದ್ದಾರೆ.

ರಾಜ್ಯ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಅಭಿವೃದ್ಧಿ ಕಾರ್ಯಗಳಿಗಿಂತ ಅಧಿಕಾರಿಗಳ ವರ್ಗಾವಣೆ, ಆಡಳಿತಾತ್ಮಕ ಗೊಂದಲ ಹಾಗೂ ಕಮಿಷನ್ ರಾಜಕಾರಣಕ್ಕೆ ಹೆಚ್ಚು ಆದ್ಯತೆ ನೀಡುತ್ತಿದೆ ಎಂದು ಬಿಜೆಪಿ ಆರೋಪಿಸಿದೆ. ಬೆಂಗಳೂರಿನಂತಹ ಜಾಗತಿಕ ನಗರಕ್ಕೆ ಅಗತ್ಯವಿರುವ ಮೂಲಸೌಕರ್ಯ ಅಭಿವೃದ್ಧಿ, ರಸ್ತೆ ನಿರ್ವಹಣೆ, ಮಳೆ ನೀರು ನಿರ್ವಹಣೆ ಹಾಗೂ ಕಸದ ವಿಲೇವಾರಿ ವ್ಯವಸ್ಥೆಗಳಲ್ಲಿ ಸರ್ಕಾರ ಸಂಪೂರ್ಣ ವಿಫಲವಾಗಿದೆ ಎಂದು ಅಶೋಕ್ ಹೇಳಿದ್ದಾರೆ.

ಮುಂಗಾರು ಮಳೆ ಇನ್ನಷ್ಟೇ ಆರಂಭವಾಗಿದ್ದು, ಈಗಲೇ ನಗರದ ಹಲವೆಡೆ ರಸ್ತೆಗಳು ಹದಗೆಟ್ಟಿವೆ. ಮುಂದಿನ ದಿನಗಳಲ್ಲಿ ಭಾರೀ ಮಳೆಯಾದರೆ ಪರಿಸ್ಥಿತಿ ಮತ್ತಷ್ಟು ಹದಗೆಡುವ ಸಾಧ್ಯತೆ ಇದೆ ಎಂದು ಅವರು ಎಚ್ಚರಿಸಿದ್ದಾರೆ. ತಕ್ಷಣ ರಸ್ತೆ ಗುಂಡಿಗಳನ್ನು ಮುಚ್ಚುವುದು, ಕಸದ ಸಮಸ್ಯೆ ನಿವಾರಣೆ, ಮಳೆ ನೀರು ಹರಿವಿಗೆ ಸೂಕ್ತ ವ್ಯವಸ್ಥೆ ಕಲ್ಪಿಸುವುದು ಸೇರಿದಂತೆ ತುರ್ತು ಕ್ರಮಗಳನ್ನು ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

ಇಲ್ಲದಿದ್ದರೆ ಬಿಜೆಪಿ ವತಿಯಿಂದ ವಿಧಾನಸೌಧಕ್ಕೆ ಮುತ್ತಿಗೆ ಹಾಕಿ ಉಗ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿರುವ ಆರ್. ಅಶೋಕ್, ಬೆಂಗಳೂರಿನ ಜನರ ಸಮಸ್ಯೆಗಳಿಗೆ ಸರ್ಕಾರ ಉತ್ತರ ನೀಡಲೇಬೇಕು ಎಂದು ಒತ್ತಾಯಿಸಿದ್ದಾರೆ. ಮುಂಗಾರು ಆರಂಭವಾಗುತ್ತಿದ್ದಂತೆ ರಾಜಧಾನಿಯ ಮೂಲಸೌಕರ್ಯ ವಿಚಾರ ಮತ್ತೆ ರಾಜಕೀಯ ವಾಕ್ಸಮರಕ್ಕೆ ಕಾರಣವಾಗಿದ್ದು, ಸರ್ಕಾರ ಮತ್ತು ಪ್ರತಿಪಕ್ಷಗಳ ನಡುವಿನ ಆರೋಪ-ಪ್ರತ್ಯಾರೋಪಗಳು ಮತ್ತಷ್ಟು ತೀವ್ರಗೊಳ್ಳುವ ಸಾಧ್ಯತೆ ಕಂಡುಬಂದಿದೆ.

## ದೇವೇಗೌಡರಿಗೆ ರಾಜ್ಯಸಭಾ ಟಿಕೆಟ್ ಕೈತಪ್ಪಿದ್ದೇಕೆ?: ಅಸಲಿ ಸತ್ಯ ಬಹಿರಂಗಪಡಿಸಿದ ಕುಮಾರಸ್ವಾಮಿ

### "ದೇವೇಗೌಡರಿಗೆ ಟಿಕೆಟ್ ಕೈತಪ್ಪಿಲ್ಲ, ಅರ್ಜಿಯೇ ಹಾಕಿರಲಿಲ್ಲ: ಕಾಂಗ್ರೆಸ್ ವಿರುದ್ಧ ಹೆಚ್‌ಡಿಕೆ ಕಿಡಿ"



**ಮಂಡ್ಯ:** ರಾಜ್ಯಸಭಾ ಚುನಾವಣೆಗೆ ಎನ್‌ಡಿಎ ಅಭ್ಯರ್ಥಿಯಾಗಿ ಒಬಿಸಿ ಸಮುದಾಯದ ಹಿರಿಯ ನಾಯಕ ಪ್ರೊ. ಎಂ. ನಾಗರಾಜ್ ಅವರ ಹೆಸರನ್ನು ಬಿಜೆಪಿ ಘೋಷಿ ಸಿದ ಬೆನ್ನಲ್ಲೇ ರಾಜ್ಯ ರಾಜಕೀಯದಲ್ಲಿ ಹೊಸ ಚರ್ಚೆಗಳು ಆರಂಭವಾಗಿವೆ. ವಿಶೇಷವಾಗಿ ಜೆಡಿಎಸ್ ವರಿಷ್ಠ ಹಾಗೂ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರಿಗೆ ರಾಜ್ಯಸಭಾ ಟಿಕೆಟ್ ಕೈತಪ್ಪಿರುವ ಕುರಿತು ಕಾಂಗ್ರೆಸ್ ನಾಯಕರು ಬಿಜೆಪಿ-ಜೆಡಿಎಸ್ ಮೈತ್ರಿಯನ್ನು ತೀವ್ರವಾಗಿ ಟೀಕಿಸಿದ್ದರು. ಎಐಸಿಸಿ ಪ್ರಧಾನ ಕಾರ್ಯದರ್ಶಿ ಹಾಗೂ ಕರ್ನಾಟಕ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಸೇರಿದಂತೆ ಹಲವು ಕಾಂಗ್ರೆಸ್ ಮುಖಂಡರು ಈ ವಿಚಾರವನ್ನು ಪ್ರಸ್ತಾಪಿಸಿ ಮೈತ್ರಿ ಪಕ್ಷಗಳ ವಿರುದ್ಧ ವಾಗ್ದಾಳಿ ನಡೆಸಿದ್ದರು.

ಈ ಬೆಳವಣಿಗೆಗಳ ಮಧ್ಯೆ ದೇವೇ ಗೌಡರಿಗೆ ರಾಜ್ಯಸಭಾ ಟಿಕೆಟ್ ಸಿಗದಿರುವುದರ ಹಿಂದಿನ ನಿಜವಾದ ಕಾರಣವನ್ನು ಕೇಂದ್ರ ಸಚಿವ ಹಾಗೂ ಜೆಡಿಎಸ್ ರಾಜ್ಯಾಧ್ಯಕ್ಷ ಹೆಚ್.ಡಿ. ಕುಮಾರಸ್ವಾಮಿ ಬಹಿರಂಗಪಡಿಸಿದ್ದಾರೆ. ಮಂಡ್ಯ ತಾಲೂಕಿನ ತಗ್ಗಹಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯಸಭಾ ಟಿಕೆಟ್ ವಿಚಾರದಲ್ಲಿ ಕಾಂಗ್ರೆಸ್ ಮಾಡುತ್ತಿರುವ ಆರೋಪಗಳಿಗೆ ತೀಕ್ಷ್ಣವಾಗಿ ಪ್ರತಿಕ್ರಿಯಿಸಿದರು.

ದೇವೇಗೌಡರು ರಾಜ್ಯಸಭಾ ಸ್ಥಾನಕ್ಕಾಗಿ ಅರ್ಜಿಯನ್ನೇ ಸಲ್ಲಿಸಿರಲಿಲ್ಲ ಎಂದು ಸ್ಪಷ್ಟಪಡಿಸಿದ ಕುಮಾರಸ್ವಾಮಿ, ಈ ವಿಚಾರದಲ್ಲಿ ಕಾಂಗ್ರೆಸ್ ಅನಗತ್ಯ ಗೊಂದಲ ಸೃಷ್ಟಿಸಲು ಪ್ರಯತ್ನಿಸುತ್ತಿದೆ ಎಂದು ಆರೋಪಿಸಿದರು. ಈಗ ದೇವೇಗೌಡರ ಬಗ್ಗೆ ಕಾಂಗ್ರೆಸ್ ನಾಯಕರಿಗೆ ಅನುಕಂಪ ಬಂದಂತಾಗಿದೆ. ಆದರೆ, ಇದೇ ಕಾಂಗ್ರೆಸ್ ಹಿಂದೆ ದೇವೇಗೌಡರ ವಿರುದ್ಧ ಯಾವ ರೀತಿಯ ರಾಜಕೀಯ ಮಾಡಿತ್ತು ಎಂಬುದನ್ನು ಜನ ಮರೆತಿಲ್ಲ ಎಂದು ಹೇಳಿದರು.



ಬಿಜೆಪಿ-ಜೆಡಿಎಸ್ ಮೈತ್ರಿ ಬಲವಾಗಿ ಮುಂದುವರಿ ಯುತ್ತಿರುವುದರಿಂದ ಕಾಂಗ್ರೆಸ್‌ಗೆ ಆತಂಕ ಶುರುವಾಗಿದೆ. ಇದೇ ಕಾರಣಕ್ಕೆ ಮೈತ್ರಿ ಪಕ್ಷಗಳ ನಡುವೆ ಬಿರುಕು ಮೂಡಿಸಲು ಕಾಂಗ್ರೆಸ್ ನಿರಂತರ ಪ್ರಯತ್ನ ನಡೆಸುತ್ತಿದೆ ಎಂದು ಕುಮಾರಸ್ವಾಮಿ ಆರೋಪಿಸಿದರು. ದೇವೇಗೌಡರು ಎಂದಿಗೂ ಅಧಿಕಾರದ ಆಸೆಗಾಗಿ ಯಾರ ಮನೆ ಬಾಗಿಲಿಗೂ ಹೋಗಿಲ್ಲ. ಸ್ವಾಭಿಮಾನಕ್ಕೆ ಧಕ್ಕೆಯಾದ ಸಂದರ್ಭದಲ್ಲಿ ಅವರು ಪ್ರಧಾನಮಂತ್ರಿ ಹುದ್ದೆಯನ್ನೇ ತ್ಯಜಿಸಿ ಹೊರಬಂದ ನಾಯಕರು. ಅಂತಹ ವ್ಯಕ್ತಿಯ ಬಗ್ಗೆ ಕಾಂಗ್ರೆಸ್ ನಾಯಕರು ಮಾತನಾಡುವ ನೈತಿಕ ಹಕ್ಕೇ ಇಲ್ಲ ಎಂದು ಅವರು ಕಿಡಿ ಕಾರಿದರು.

ಕಳೆದ ಬಾರಿ ದೇವೇಗೌಡರು ರಾಜ್ಯಸಭೆಗೆ ಅವಿರೋಧವಾಗಿ ಆಯ್ಕೆಯಾಗಿದ್ದ ಸಂದರ್ಭ ದಲ್ಲಿ ಕಾಂಗ್ರೆಸ್ ಬೆಂಬಲ ನೀಡಿತ್ತು ಎಂಬ ಹೇಳಿಕೆಯನ್ನು ಕೂಡ ಕುಮಾರಸ್ವಾಮಿ ತಳ್ಳಿಹಾಕಿದರು. ದೇವೇಗೌಡರು ಕಾಂಗ್ರೆಸ್ ಬೆಂಬಲದಿಂದ ರಾಜ್ಯಸಭೆಗೆ ಹೋಗಿಲ್ಲ. ಅವರ ವಿರುದ್ಧ ಸ್ಪರ್ಧಿಸಲು ಯಾರಿಗೂ ಅವಕಾಶ ಇರಲಿಲ್ಲ. ಆ ಸಂದರ್ಭದಲ್ಲಿ ಬಿಜೆಪಿ ಅಭ್ಯರ್ಥಿಯನ್ನು ಕಣಕ್ಕಿಳಿಸುವುದಿಲ್ಲ ಎಂದು ಬಿ.ಎಸ್. ಯಡಿಯೂರಪ್ಪ ಸ್ವತಃ ಕರೆ ಮಾಡಿ ತಿಳಿಸಿದ್ದರು. ನಂತರ ದೇವೇಗೌಡರನ್ನು ಅಭ್ಯರ್ಥಿಯನ್ನಾಗಿ ಮಾಡುವಂತೆ ನಾನು ಒತ್ತಾಯ ಮಾಡಿದ್ದೆ. ಹೀಗಾಗಿ ಅದನ್ನು ಕಾಂಗ್ರೆಸ್ ಬೆಂಬಲ ಎಂದು ಬಿಂಬಿಸುವುದು ಸರಿಯಲ್ಲ ಎಂದು ಹೇಳಿದರು.

ಒಕ್ಕಲಿಗ ಸಮುದಾಯಕ್ಕೆ ಬಿಜೆಪಿ ಅನ್ಯಾಯ ಮಾಡಿದೆ ಎಂಬ ಕಾಂಗ್ರೆಸ್ ಆರೋಪಕ್ಕೂ ಕುಮಾರಸ್ವಾಮಿ ತಿರುಗೇಟು ನೀಡಿದರು. ಒಕ್ಕಲಿಗ ಸಮುದಾಯದ ಹಿತದ ಬಗ್ಗೆ ಮಾತನಾಡುವ ಕಾಂಗ್ರೆಸ್ ಮೊದಲು ರಾಜ್ಯದಲ್ಲಿ ಒಕ್ಕಲಿಗ ಸಮುದಾಯಕ್ಕೆ ಯಾವ ರೀತಿಯ ರಾಜಕೀಯ ಪ್ರಾತಿನಿಧ್ಯ ನೀಡಿದೆ ಎಂಬುದನ್ನು ಆತ್ಮಾವಲೋಕನ ಮಾಡಿಕೊಳ್ಳಬೇಕು. ಒಕ್ಕಲಿಗ ಸಮುದಾಯದ ಮುಖ್ಯಮಂತ್ರಿ ಸ್ಥಾನವೇ ಮುಖ್ಯವಾಗಿರುವಾಗ ಕೇವಲ ರಾಜ್ಯಸಭಾ ಸ್ಥಾನ ಸಿಗದಿದ್ದುದನ್ನು ದೊಡ್ಡ ವಿಚಾರವಾಗಿ ಮಾಡುವುದು ಏಕೆ ಎಂದು ಅವರು ಪ್ರಶ್ನಿಸಿದರು.

ಇದೇ ವೇಳೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಕುಮಾರಸ್ವಾಮಿ ಸಲಹೆ ಪಡೆಯುತ್ತೇನೆ ಎಂದು ಹೇಳಿದ್ದಕ್ಕೆ ಪ್ರತಿಕ್ರಿಯಿಸಿದ ಕೇಂದ್ರ ಸಚಿವರು ವ್ಯಂಗ್ಯವಾಡಿದರು. ಡಿ.ಕೆ. ಶಿವಕುಮಾರ್ ಅವರಿಗೆ ನಾನು ಯಾವ ಸಲಹೆ ನೀಡಲಿ? ಕುಮಾರಸ್ವಾಮಿ ಎರಡು ಬಾರಿ ಮುಖ್ಯಮಂತ್ರಿ ಆಗಿ ಏನು ಮಾಡಿದ್ದಾರೆ ಎಂದು ಅವರೇ ಪ್ರಶ್ನಿಸುತ್ತಾರೆ. ನಾನು ಏನೂ ಮಾಡಿಲ್ಲ ಎಂದು ಹೇಳುವವರೇ ಮತ್ತೆ ನನ್ನ ಸಲಹೆ ಕೇಳುತ್ತಾರೆ ಎಂದರು.

ಇತ್ತೀಚೆಗೆ ಎಲ್ಲ ವಿಚಾರಗಳಿಗೂ ಸಾಕ್ಷಿ ಕೇಳುವ ಪ್ರವೃತ್ತಿ ಹೆಚ್ಚಾಗಿದೆ. ನಾನು ಏನೂ ಸಾಧನೆ ಮಾಡಿಲ್ಲ ಎಂದು ಹೇಳುವವರು ನನ್ನ ಬಳಿಗೆ ಯಾವ ಕಾರಣಕ್ಕೆ ಸಲಹೆಗಾಗಿ ಬರಬೇಕು ಎಂದು ಪ್ರಶ್ನಿಸಿದ ಕುಮಾರಸ್ವಾಮಿ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಸಲಹೆಗಿಂತ ಫೋಟೋ ಅವಕಾಶಗಳೇ ಹೆಚ್ಚು ಮುಖ್ಯವಾಗಿವೆ. ಅದಕ್ಕಾಗಿ ಅವರು ಎಲ್ಲೆಡೆ ಭೇಟಿ ನೀಡುತ್ತಿದ್ದಾರೆ ಎಂದು ಟೀಕಿಸಿದರು.

ಮುಂದುವರಿದು ಮಾತನಾಡಿದ ಅವರು, ರಾಜಕೀಯದಲ್ಲಿ ಅತಿಯಾದ ವಿನಯದ ಹಿಂದೆ ಬೇರೆ ಉದ್ದೇಶಗಳು ಅಡಗಿರಬಹುದು. "ಅತಿ ವಿನಯಂ ಧೂರ್ತ ಲಕ್ಷಣಂ" ಎಂಬ ಗಾದೆಯನ್ನು ಉಲ್ಲೇಖಿಸಿದ ಕುಮಾರಸ್ವಾಮಿ, ಮುಖ್ಯಮಂತ್ರಿ ಹೇಳಿಕೆಗಳ ಬಗ್ಗೆ ಪರೋಕ್ಷವಾಗಿ ವ್ಯಂಗ್ಯವಾಡಿದರು. ರಾಜ್ಯಸಭಾ ಟಿಕೆಟ್ ವಿಚಾರವನ್ನು ಕಾಂಗ್ರೆಸ್ ರಾಜಕೀಯ ಲಾಭಕ್ಕಾಗಿ ಬಳಸಿಕೊಳ್ಳಲು ಪ್ರಯತ್ನಿಸುತ್ತಿದೆ. ಆದರೆ ದೇವೇಗೌಡರ ರಾಜಕೀಯ ಬದುಕು, ತತ್ವಗಳು ಮತ್ತು ಸ್ವಾಭಿಮಾನವನ್ನು ರಾಜ್ಯದ ಜನತೆ ಚೆನ್ನಾಗಿ ಅರಿತಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ರಾಜ್ಯಸಭಾ ಚುನಾವಣೆಯನ್ನು ಸುತ್ತುವರಿದಿರುವ ರಾಜಕೀಯ ಬೆಳವಣಿಗೆಗಳು ಮುಂಬರುವ ದಿನಗಳಲ್ಲಿ ಮತ್ತಷ್ಟು ಚರ್ಚೆಗೆ ಗ್ರಾಸವಾಗುವ ಸಾಧ್ಯತೆಯಿದೆ. ಬಿಜೆಪಿ-ಜೆಡಿಎಸ್ ಮೈತ್ರಿ ಹಾಗೂ ಕಾಂಗ್ರೆಸ್ ನಡುವಿನ ವಾಕ್ಸಮರ ದಿನದಿಂದ ದಿನಕ್ಕೆ ತೀವ್ರಗೊಳ್ಳುತ್ತಿದ್ದು, ರಾಜ್ಯಸಭಾ ಅಭ್ಯರ್ಥಿ ಆಯ್ಕೆ ವಿಚಾರವೂ ಪ್ರಮುಖ ರಾಜಕೀಯ ಅಸ್ತ್ರವಾಗಿ ಪರಿಣಮಿಸಿದೆ. ಒಂದು ಕಡೆ ಕಾಂಗ್ರೆಸ್ ಮೈತ್ರಿ ಪಕ್ಷಗಳ ಒಳಸಂಘರ್ಷವನ್ನು ಪ್ರಶ್ನಿಸುತ್ತಿದ್ದರೆ, ಮತ್ತೊಂದು ಕಡೆ ಬಿಜೆಪಿ ಮತ್ತು ಜೆಡಿಎಸ್ ನಾಯಕರು ಕಾಂಗ್ರೆಸ್ ಆರೋಪಗಳನ್ನು ಸಂಪೂರ್ಣವಾಗಿ ತಳ್ಳಿಹಾಕಿ ಪ್ರತಿದಾಳಿ ನಡೆಸುತ್ತಿದ್ದಾರೆ.

ರಾಜ್ಯದ ರಾಜಕೀಯ ಬೆಳವಣಿಗೆಗಳ ನಡುವೆ ದೇವೇಗೌಡರ ರಾಜಕೀಯ ಅನುಭವ, ಅವರ ಸ್ವಾಭಿಮಾನಿ ನಿಲುವು ಹಾಗೂ ಜೆಡಿಎಸ್ ಪಕ್ಷದ ಭವಿಷ್ಯದ ರಾಜಕೀಯ ದಿಕ್ಕು ಕುರಿತು ಚರ್ಚೆಗಳು ಮತ್ತೆ ಮುನ್ನೆಲೆಗೆ ಬಂದಿವೆ. ದೇವೇಗೌಡರು ಸಕ್ರಿಯ ರಾಜಕೀಯದಲ್ಲಿ ಇನ್ನೂ ಪ್ರಭಾವಿ ನಾಯಕತ್ವ ಹೊಂದಿದ್ದು, ಅವರ ನಿರ್ಧಾರಗಳು ಪಕ್ಷದ ಕಾರ್ಯಕರ್ತರು ಹಾಗೂ ಬೆಂಬಲಿಗರಲ್ಲಿ ವಿಶೇಷ ಮಹತ್ವ ಪಡೆದುಕೊಂಡಿವೆ. ರಾಜ್ಯಸಭಾ ಟಿಕೆಟ್ ವಿಚಾರದಲ್ಲಿ ಹುಟ್ಟಿಕೊಂಡಿರುವ ಊಹಾಪೋಹಗಳಿಗೆ ಕುಮಾರಸ್ವಾಮಿ ನೀಡಿರುವ ಸ್ಪಷ್ಟನೆ ಇದೀಗ ಹೊಸ ರಾಜಕೀಯ ಚರ್ಚೆಗೆ ಕಾರಣವಾಗಿದೆ.

## ವಿದ್ಯಾರ್ಥಿಗಳ ಉಚಿತ ಬಸ್ ಪಾಸ್ ವಿತರಣೆ ಮತ್ತಷ್ಟು ವಿಳಂಬ

**ಬೆಂಗಳೂರು:** ರಾಜ್ಯದ ಶಾಲಾ ಹಾಗೂ ಕಾಲೇಜು ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ನೀಡುವ ಯೋಜನೆ ಜಾರಿಗೆ ಮತ್ತಷ್ಟು ವಿಳಂಬವಾಗುವ ಸಾಧ್ಯತೆ ಇದೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಅಧಿಕಾರ ಸ್ವೀಕರಿಸಿದ ಬಳಿಕ ಈ ಯೋಜನೆಯನ್ನು ಘೋಷಿಸಿದ್ದರೂ, ಪಾಸ್ ವಿತರಣೆ ಈ ತಿಂಗಳೊಳಗೆ ಆರಂಭವಾಗುವುದು ಅನುಮಾನ ಎನ್ನಲಾಗಿದೆ.

ಈ ಸಂಬಂಧ ಸಾರಿಗೆ ಸಚಿವ ಬೈರತಿ ಸುರೇಶ್ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಯೋಜನೆಯ ಪ್ರಗತಿ ಪರಿಶೀಲಿಸಿದ್ದಾರೆ. ಉಚಿತ ಬಸ್ ಪಾಸ್ ಪಡೆಯುವ ವಿದ್ಯಾರ್ಥಿಗಳ ಸಂಖ್ಯೆ, ಮುದ್ರಿಸಬೇಕಾದ ಪಾಸ್‌ಗಳ ಪ್ರಮಾಣ ಹಾಗೂ ಸರ್ಕಾರಕ್ಕೆ ಆಗುವ ವೆಚ್ಚದ ಬಗ್ಗೆ ಮಾಹಿತಿ ಪಡೆದುಕೊಂಡಿದ್ದಾರೆ.

ಸಭೆಯ ಬಳಿಕ ಮಾತನಾಡಿದ ಸಚಿವರು, ಮುಖ್ಯಮಂತ್ರಿ ಘೋಷಿಸಿರುವ ಯೋಜನೆಯನ್ನು ಖಂಡಿತವಾಗಿ ಜಾರಿಗೆ ತರಲಾಗುವುದು. ಆದರೆ ಸಚಿವ ಸಂಪುಟದ ಅನುಮೋದನೆ, ಪಾಸ್ ಮುದ್ರಣ ಹಾಗೂ ವಿತರಣಾ ಪ್ರಕ್ರಿಯೆಗೆ ಸಮಯ ಬೇಕಾಗುತ್ತದೆ ಎಂದು ತಿಳಿಸಿದ್ದಾರೆ.

ಸುಮಾರು 10 ಲಕ್ಷ ವಿದ್ಯಾರ್ಥಿಗಳು ಈ ಯೋಜನೆಯ ವ್ಯಾಪ್ತಿಗೆ ಬರಲಿದ್ದು, ಸರ್ಕಾರಕ್ಕೆ 1,500ರಿಂದ 1,800 ಕೋಟಿ ವೆಚ್ಚವಾಗುವ ಸಾಧ್ಯತೆ ಇದೆ. ಹೀಗಾಗಿ ಉಚಿತ ಬಸ್ ಪಾಸ್ ವಿತರಣೆಗೆ ಇನ್ನೂ ಒಂದು ತಿಂಗಳು ತಡವಾಗುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ.

ಈ ಯೋಜನೆಯ ಘೋಷಣೆಯಿಂದ ರಾಜ್ಯದ ಲಕ್ಷಾಂತರ ವಿದ್ಯಾರ್ಥಿಗಳಲ್ಲಿ ನಿರೀಕ್ಷೆ ಹೆಚ್ಚಾಗಿದೆ. ವಿಶೇಷವಾಗಿ ಗ್ರಾಮೀಣ ಪ್ರದೇಶಗಳಿಂದ ಪ್ರತಿದಿನ ಶಾಲೆ ಮತ್ತು ಕಾಲೇಜುಗಳಿಗೆ ಪ್ರಯಾಣಿಸುವ ವಿದ್ಯಾರ್ಥಿಗಳಿಗೆ ಇದು ಆರ್ಥಿಕವಾಗಿ ದೊಡ್ಡ ನೆರವಾಗಲಿದೆ. ಬಸ್ ಪ್ರಯಾಣ ವೆಚ್ಚ ಕಡಿಮೆಯಾಗುವುದರಿಂದ ಪೋಷಕರ ಮೇಲಿನ ಹೊರೆಯೂ ತಗ್ಗುವ ನಿರೀಕ್ಷೆಯಿದೆ.

## 'ಮೌನವಾಗಿ ಅಧಿಕಾರ ಬಿಟ್ಟರು, ಆದರೆ ಬಾಕಿ ಉಳಿಸಿದರು'; ಕಾಂಗ್ರೆಸ್ ವಿರುದ್ಧ ಅಶೋಕ್ ಕಿಡಿ



**ಬೆಂಗಳೂರು:** ಕೆಟ್ಟುಹೋದ ಲಾರಿಯಂತಿರುವ ಸರ್ಕಾರವನ್ನು ನಡೆಸಲು ಸಾಧ್ಯವಾಗದೇ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮೌನವಾಗಿ ಅಧಿಕಾರ ತ್ಯಜಿಸಿದ್ದಾರೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ವಾಗ್ದಾಳಿ ನಡೆಸಿದ್ದಾರೆ. ಇದೀಗ ಮುಖ್ಯಮಂತ್ರಿ ಸ್ಥಾನಕ್ಕೆ ಬಂದಿರುವ ಡಿ.ಕೆ. ಶಿವಕುಮಾರ್ ಅವರು ಹಿಂದಿನ ಸರ್ಕಾರದ ಎಲ್ಲಾ ಆರ್ಥಿಕ ಬಾಕಿಗಳನ್ನು ತೀರಿಸುವ ಸವಾಲು ಎದುರಿಸಬೇಕಾಗಿದೆ. ಇದಕ್ಕಾಗಿ ಜನರ ಮೇಲೆ ಮತ್ತಷ್ಟು ತೆರಿಗೆ ಹೊರಿಸುವ ಸಾಧ್ಯತೆ ಇದೆ ಎಂದು ಅವರು ಆರೋಪಿಸಿದರು.

ನಗರದಲ್ಲಿ ಸೋಮವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅಶೋಕ್, ಸಿದ್ದರಾಮಯ್ಯ ಅವರು ತಾವು ಹಿಂದುಳಿದ ವರ್ಗದ ಏಕೈಕ ಮುಖ್ಯಮಂತ್ರಿ ಹಾಗೂ ಅಹಿಂದ ನಾಯಕ ಎಂದು ಹೇಳಿಕೊಳ್ಳುತ್ತಿದ್ದರು. ಆದರೆ ಕಾಂಗ್ರೆಸ್ ಹೈಕಮಾಂಡ್ ಒತ್ತಡದಿಂದಲೇ ಅವರು ರಾಜೀನಾಮೆ ನೀಡಿದ್ದಾರೆ ಎಂದು ಟೀಕಿಸಿದರು. ಹಿಂದುಳಿದ ವರ್ಗಗಳ ಪರ ಎಂದು ಹೇಳಿಕೊಳ್ಳುವ ಕಾಂಗ್ರೆಸ್ ಪಕ್ಷವೇ ಈಗ ಹಿಂದುಳಿದ ಸಮುದಾಯದ ನಾಯಕರನ್ನು ಕಡೆಗಣಿಸುತ್ತಿದೆ ಎಂದು ಆರೋಪಿಸಿದರು.

ಕಾಂಗ್ರೆಸ್ ಸರ್ಕಾರವನ್ನು ಹಳೆಯ ಲಾರಿಗೆ ಹೋಲಿಸಿದ ಅಶೋಕ್, "ಈಗ ಚಾಲಕ ಮಾತ್ರ ಬದಲಾಗಿದ್ದಾನೆ, ಲಾರಿ ಬದಲಾಗಿಲ್ಲ. ಮೂರು ವರ್ಷಗಳ ಕಾಲ ಸಾಲದ ಮೇಲೆ ಆಡಳಿತ ನಡೆಸಿ, ಆರ್ಥಿಕ ಸಂಕಷ್ಟದಲ್ಲಿರುವ ಸರ್ಕಾರವನ್ನು ಡಿ.ಕೆ. ಶಿವಕುಮಾರ್ ಅವರಿಗೆ ಹಸ್ತಾಂತರಿಸಲಾಗಿದೆ" ಎಂದು ಹೇಳಿದರು. ಮುಖ್ಯಮಂತ್ರಿ ಬದಲಾದರೂ ರಾಜ್ಯದ ಆರ್ಥಿಕ ಪರಿಸ್ಥಿತಿ ಬದಲಾಗುವುದಿಲ್ಲ. ರಾಜ್ಯದ ಬಜೆಟ್ ಗಾತ್ರ ಸುಮಾರು 4 ಲಕ್ಷ ಕೋಟಿ ಇದ್ದರೂ, ಒಟ್ಟು ಸಾಲ 7.64 ಲಕ್ಷ ಕೋಟಿಗೆ ತಲುಪಿದೆ ಎಂದು ಆರೋಪಿಸಿದರು.

ರಾಜ್ಯದಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ಹಣದ ಕೊರತೆ ಉಂಟಾಗಿದೆ. ಬಿಜೆಪಿ ಸರ್ಕಾರದ ಅವಧಿಯಲ್ಲಿ ಅಭಿವೃದ್ಧಿಗೆ ಹೆಚ್ಚಿನ ಅನುದಾನ ಮೀಸಲಿಡಲಾಗುತ್ತಿತ್ತು. ಆದರೆ ಗ್ಯಾರಂಟಿ ಯೋಜನೆಗಳಿಗಾಗಿ ಅಪಾರ ಪ್ರಮಾಣದ ವೆಚ್ಚ ಮಾಡಿರುವುದರಿಂದ ಅಭಿವೃದ್ಧಿ ಕಾಮಗಾರಿಗಳಿಗೆ ಕಡಿಮೆ ಹಣ ಉಳಿದಿದೆ ಎಂದು ಅವರು ಹೇಳಿದರು. ಸತತವಾಗಿ ಕೊರತೆ ಬಜೆಟ್ ಮಂಡನೆಯಾಗುತ್ತಿರುವುದು ಸರ್ಕಾರದ ಆರ್ಥಿಕ ದುರ್ಬಲತೆಯನ್ನು ತೋರಿಸುತ್ತದೆ ಎಂದರು.

ಕೇಂದ್ರ ಸರ್ಕಾರ ಸಾಲ ಮಾಡಿದರೂ ರೈಲ್ವೆ, ಹೆದ್ದಾರಿ, ಸೇತುವೆ ಸೇರಿದಂತೆ ಮೂಲಸೌಕರ್ಯ ಅಭಿವೃದ್ಧಿಗೆ ಹೆಚ್ಚಿನ ಹೂಡಿಕೆ ಮಾಡಿದೆ. ಆದರೆ ರಾಜ್ಯ ಸರ್ಕಾರ ಅಭಿವೃದ್ಧಿಗಿಂತ ಗ್ಯಾರಂಟಿ ಯೋಜನೆಗಳ ಮೇಲೆ ಹೆಚ್ಚಿನ ಗಮನ ಹರಿಸಿದೆ ಎಂದು ಆರೋಪಿಸಿದ ಅವರು, ಗ್ಯಾರಂಟಿ ಯೋಜನೆಗಳಿಗೆ ಸಾವಿರಾರು ಕೋಟಿ ವೆಚ್ಚ ಮಾಡಿರುವುದರ ಜೊತೆಗೆ ಜನರ ಮೇಲೆ ಹೆಚ್ಚುವರಿ ತೆರಿಗೆಗಳನ್ನೂ ವಿಧಿಸಲಾಗಿದೆ ಎಂದು ಟೀಕಿಸಿದರು.

ಇದೇ ವೇಳೆ ಗುತ್ತಿಗೆದಾರರಿಗೆ, ಎಸ್ಕಾಂಗಳಿಗೆ, ಗೃಹಲಕ್ಷ್ಮಿ, ಶಕ್ತಿ, ಅನ್ನಭಾಗ್ಯ ಸೇರಿದಂತೆ ವಿವಿಧ ಯೋಜನೆಗಳಡಿ ಸಾವಿರಾರು ಕೋಟಿ ರೂಪಾಯಿ ಬಾಕಿ ಉಳಿದಿದೆ ಎಂದು ಅಶೋಕ್ ಆರೋಪಿಸಿದರು. ಈ ಎಲ್ಲ ಬಾಕಿಗಳನ್ನು ತೀರಿಸುವ ಜವಾಬ್ದಾರಿ ಈಗ ಹೊಸ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಮೇಲಿದೆ ಎಂದು ಹೇಳಿದರು.

ರಾಜ್ಯದಲ್ಲಿ ಆರ್ಥಿಕ ಕೊರತೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಹೊಸ ಸರ್ಕಾರಕ್ಕೆ ಹಲವು ಸವಾಲುಗಳು ಎದುರಾಗಲಿವೆ. ತೆರಿಗೆ ಹೆಚ್ಚಿಸದೇ ಹಾಗೂ ಸಾಲ ಮಾಡದೇ ಆಡಳಿತ ನಡೆಸುವುದು ಕಷ್ಟಕರವಾಗಲಿದೆ. ಅಭಿವೃದ್ಧಿ ಮತ್ತು ಕಲ್ಯಾಣ ಯೋಜನೆಗಳ ನಡುವೆ ಸಮತೋಲನ ಸಾಧಿಸುವುದು ಹೊಸ ಮುಖ್ಯಮಂತ್ರಿಗೆ ದೊಡ್ಡ ಸವಾಲಾಗಲಿದೆ ಎಂದು ಅಶೋಕ್ ಅಭಿಪ್ರಾಯಪಟ್ಟರು.

ಗೃಹಲಕ್ಷ್ಮಿ ಹಾಗೂ ಅನ್ನಭಾಗ್ಯ ಯೋಜನೆಗಳ ಬಾಕಿ ಹಣವನ್ನು ಫಲಾನುಭವಿಗಳಿಗೆ ತಲುಪಿಸುವಂತೆ ಬಿಜೆಪಿ ನಿರಂತರ ಹೋರಾಟ ನಡೆಸಲಿದೆ ಎಂದು ಅವರು ತಿಳಿಸಿದರು. ಜನರಿಗೆ ನೀಡಿರುವ ಭರವಸೆಗಳನ್ನು ಸರ್ಕಾರ ಈಡೇರಿಸಲೇಬೇಕು ಎಂದು ಒತ್ತಾಯಿಸಿದರು.

ಸಿದ್ದರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ನಡುವಿನ ರಾಜಕೀಯ ಭಿನ್ನಾಭಿಪ್ರಾಯಗಳು ಮುಂದಿನ ದಿನಗಳಲ್ಲಿ ಮತ್ತೆ ಬಹಿರಂಗವಾಗುವ ಸಾಧ್ಯತೆ ಇದೆ ಎಂದು ಅಶೋಕ್ ಭವಿಷ್ಯ ನುಡಿದರು. ಮುಖ್ಯಮಂತ್ರಿ ಬದಲಾವಣೆ ಮೂಲಕ ಕಾಂಗ್ರೆಸ್ ಸರ್ಕಾರದ ಸಮಸ್ಯೆಗಳು ಪರಿಹಾರವಾಗುವುದಿಲ್ಲ. ಜನರ ಸಮಸ್ಯೆಗಳಿಗೆ ಸ್ಪಂದಿಸುವ ಆಡಳಿತ ನೀಡಿದಾಗ ಮಾತ್ರ ಸರ್ಕಾರದ ಮೇಲಿನ ವಿಶ್ವಾಸ ಹೆಚ್ಚುತ್ತದೆ ಎಂದು ಹೇಳಿದರು.

## ರಾಜ್ಯದ ಸಾರಿಗೆಗೆ 5,000 ಹೊಸ ಬಸ್‌ಗಳ ಸೇರ್ಪಡೆ: ಬೈರತಿ ಸುರೇಶ್

**ಬೆಂಗಳೂರು:** ರಾಜ್ಯದಲ್ಲಿ ಸಾರ್ವಜನಿಕ ಸಾರಿಗೆ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವ ಹಾಗೂ ಸಾರಿಗೆ ಸಂಸ್ಥೆಗಳ ಬಸ್‌ಗಳಲ್ಲಿ ಹೆಚ್ಚುತ್ತಿರುವ ಜನದಟ್ಟಣೆಯನ್ನು ನಿಯಂತ್ರಿಸುವ ಉದ್ದೇಶದಿಂದ ಕರ್ನಾಟಕ ಸರ್ಕಾರ ಮಹತ್ವದ ಯೋಜನೆ ರೂಪಿಸಿದೆ. ಈ ಯೋಜನೆಯಡಿ ರಾಜ್ಯದ ನಾಲ್ಕು ಸಾರಿಗೆ ನಿಗಮಗಳಿಗೆ ಒಟ್ಟು 5,000 ಹೊಸ ಬಸ್‌ಗಳನ್ನು ಸೇರ್ಪಡೆಗೊಳಿಸಲಾಗುವುದು ಎಂದು ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಅವರ ಬಳಿಕ ಇಲಾಖೆಯ ಜವಾಬ್ದಾರಿಯನ್ನು ನಿರ್ವಹಿಸುತ್ತಿರುವ ಸಚಿವ ಬೈರತಿ ಸುರೇಶ್ ತಿಳಿಸಿದ್ದಾರೆ.

ಕೆಎಸ್‌ಆರ್‌ಟಿಸಿ, ಬಿಎಂಟಿಸಿ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ (ಕೆಕೆಆರ್‌ಟಿಸಿ) ಹಾಗೂ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ನಿಗಮ (ಎನ್‌ಡಬ್ಲ್ಯೂಕೆಆರ್‌ಟಿಸಿ) ಗಳ ಹಿರಿಯ ಅಧಿಕಾರಿಗಳೊಂದಿಗೆ ನಡೆದ ಪ್ರಗತಿ ಪರಿಶೀಲನಾ ಸಭೆಯ ನಂತರ ಮಾತನಾಡಿದ ಅವರು, ರಾಜ್ಯದ ವಿವಿಧ ಭಾಗಗಳಲ್ಲಿ ಸಾರ್ವಜನಿಕ ಸಾರಿಗೆಗೆ ಹೆಚ್ಚುತ್ತಿರುವ ಬೇಡಿಕೆಯನ್ನು ಗಮನದಲ್ಲಿಟ್ಟುಕೊಂಡು ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಹೇಳಿದರು.

ರಾಜ್ಯ ಸರ್ಕಾರದ ನಿಧಿಯಿಂದ 1,000 ಹೊಸ ಬಸ್‌ಗಳನ್ನು ನೇರವಾಗಿ ಖರೀದಿಸಲಾಗುವುದು. ಜೊತೆಗೆ ಕೇಂದ್ರ ಸರ್ಕಾರದ ಆರ್ಥಿಕ ನೆರವಿನಡಿ ಸುಮಾರು 4,000 ಅತ್ಯಾಧುನಿಕ ಎಲೆಕ್ಟ್ರಿಕ್ ಬಸ್‌ಗಳನ್ನು ಪಡೆದುಕೊಳ್ಳುವ ಯೋಜನೆಯಿದೆ. ಪರಿಸರ ಸ್ನೇಹಿ ಸಾರಿಗೆ ವ್ಯವಸ್ಥೆಗೆ ಉತ್ತೇಜನ ನೀಡುವ ಉದ್ದೇಶದಿಂದ ಹೆಚ್ಚಿನ ಸಂಖ್ಯೆಯಲ್ಲಿ ಎಲೆಕ್ಟ್ರಿಕ್ ಬಸ್‌ಗಳನ್ನು ಸೇರ್ಪಡೆಗೊಳಿಸಲಾಗುತ್ತಿದೆ. ಪ್ರಯಾಣಿಕರ ಸಂಖ್ಯೆ, ಮಾರ್ಗಗಳ ಅವಶ್ಯಕತೆ ಹಾಗೂ ಸ್ಥಳೀಯ ಬೇಡಿಕೆಯನ್ನು ಆಧರಿಸಿ ನಾಲ್ಕೂ ಸಾರಿಗೆ ಸಂಸ್ಥೆಗಳಿಗೆ ಈ ಬಸ್‌ಗಳನ್ನು ಸಮಾನವಾಗಿ ಹಂಚಿಕೆ ಮಾಡಲಾಗುವುದು ಎಂದು ಸಚಿವರು ವಿವರಿಸಿದರು.

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಗ್ಯಾರಂಟಿ ಯೋಜನೆಗಳಲ್ಲೊಂದಾದ 'ಶಕ್ತಿ ಯೋಜನೆ' ಯಶಸ್ವಿಯಾಗಿ ಮುಂದುವರಿಯುತ್ತಿದ್ದು, ಪ್ರತಿದಿನ ಲಕ್ಷಾಂತರ ಮಹಿಳೆಯರು ಉಚಿತ ಪ್ರಯಾಣದ ಸೌಲಭ್ಯ ಪಡೆಯುತ್ತಿದ್ದಾರೆ. ಯೋಜನೆ ಜಾರಿಯಾದ ನಂತರ ಮಹಿಳಾ ಪ್ರಯಾಣಿಕರ ಸಂಖ್ಯೆ ಗಣನೀಯವಾಗಿ ಹೆಚ್ಚಿರುವುದರಿಂದ ಸಾರಿಗೆ ವ್ಯವಸ್ಥೆಯನ್ನು ಇನ್ನಷ್ಟು ಸುಗಮಗೊಳಿಸುವ ಅಗತ್ಯ ಎದುರಾಗಿದೆ. ಈ ಹಿನ್ನೆಲೆಯಲ್ಲಿ ಮಹಿಳಾ ಪ್ರಯಾಣಿಕರಿಗೆ ಅನುಕೂಲವಾಗುವಂತೆ ಹಲವು ಹೊಸ ಕ್ರಮಗಳನ್ನು ಜಾರಿಗೆ ತರಲಾಗುತ್ತಿದೆ ಎಂದು ಸಚಿವರು ತಿಳಿಸಿದರು.



ಶಕ್ತಿ ಯೋಜನೆಯಡಿ ಪ್ರಯಾಣಿಸುವ ಮೂರು ಕೋಟಿಗೂ ಅಧಿಕ ಮಹಿಳಾ ಫಲಾನುಭವಿಗಳಿಗೆ ಉಚಿತ 'ಶಕ್ತಿ ಸ್ಮಾರ್ಟ್ ಕಾರ್ಡ್'ಗಳನ್ನು ವಿತರಿಸಲು ಸರ್ಕಾರ ತೀರ್ಮಾನಿಸಿದೆ. ಈ ಸ್ಮಾರ್ಟ್ ಕಾರ್ಡ್‌ಗಳ ಮೂಲಕ ಮಹಿಳಾ ಪ್ರಯಾಣಿಕರ ಸಂಖ್ಯೆಯ ನಿಖರ ಮಾಹಿತಿ ಲಭ್ಯವಾಗಲಿದ್ದು, ಯೋಜನೆಯ ಪರಿಣಾಮಕಾರಿ ನಿರ್ವಹಣೆ ಮತ್ತು ಪ್ರಯಾಣಿಕರ ಚಲನವಲನದ ಅಂಕಿ-ಅಂಶಗಳನ್ನು ಸಂಗ್ರಹಿಸಲು ಸಹಕಾರಿಯಾಗಲಿದೆ. ಜೊತೆಗೆ ಬಸ್‌ಗಳಲ್ಲಿ ಟಿಕೆಟ್ ವಿತರಣೆಯ ಪ್ರಕ್ರಿಯೆಯೂ ಮತ್ತಷ್ಟು ಸರಳ ಮತ್ತು ಪಾರದರ್ಶಕವಾಗಲಿದೆ.

ಇದರ ಜೊತೆಗೆ ಪುರುಷ ಪ್ರಯಾಣಿಕರಿಗೂ ಡಿಜಿಟಲ್ ಸೌಲಭ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ತಹೊಸ ವ್ಯವಸ್ಥೆ ಜಾರಿಗೊಳಿಸಲು ಸರ್ಕಾರ ಮುಂದಾಗಿದೆ. ನಮ್ಮ ಮೆಟ್ರೋ ಮಾದರಿಯಲ್ಲಿ ರೀಚಾರ್ಜ್ ಮಾಡಿಕೊಳ್ಳಬಹುದಾದ ಸ್ಮಾರ್ಟ್ ಕಾಡ್ ಗಳನ್ನು ಪರಿಚಯಿಸಲಾಗುವುದು. ಪ್ರಯಾಣಿಕರು ಮುಂಗಡವಾಗಿ ನಿಗದಿತ ಮೊತ್ತವನ್ನು ಕಾರ್ಡ್‌ಗೆ ಜಮಾ ಮಾಡಿಕೊಂಡು, ಬಸ್‌ಗಳಲ್ಲಿ ಸುಲಭವಾಗಿ ಪ್ರಯಾಣಿಸಲು ಅವಕಾಶ ಕಲ್ಪಿಸಲಾಗುವುದು. ಇದರಿಂದ ನಗದು ವ್ಯವಹಾರ ಕಡಿಮೆಯಾಗುವುದರ ಜೊತೆಗೆ ಟಿಕೆಟ್ ವಿತರಣಾ ವ್ಯವಸ್ಥೆ ಮತ್ತಷ್ಟು ವೇಗವಾಗಲಿದೆ.

ಸಭೆಯಲ್ಲಿ ನಾಲ್ಕೂ ಸಾರಿಗೆ ನಿಗಮಗಳ ಕಾರ್ಯನಿರ್ವಹಣೆ, ಬಸ್‌ಗಳ ನಿರ್ವಹಣೆ, ಹೊಸ ಮಾರ್ಗಗಳ ಆರಂಭ, ಪ್ರಯಾಣಿಕರ ಸೌಲಭ್ಯಗಳು ಹಾಗೂ ಆದಾಯ ಹೆಚ್ಚಳದ ಬಗ್ಗೆ ವಿಸ್ತೃತ ಚರ್ಚೆ ನಡೆಸಲಾಯಿತು. ಸಾರಿಗೆ ಸೇವೆಗಳ ಗುಣಮಟ್ಟವನ್ನು ಹೆಚ್ಚಿಸುವ ಮೂಲಕ ಸಾರ್ವಜನಿಕ ಸಾರಿಗೆಯ ಮೇಲಿನ ಜನರ ವಿಶ್ವಾಸವನ್ನು ಮತ್ತಷ್ಟು ಬಲಪಡಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಸಚಿವರು ಹೇಳಿದರು.


ಮಹಿಳೆಯರು ಹಾಗೂ ಹೆಣ್ಣು ಮಕ್ಕಳ ಸುರಕ್ಷತೆಗೆ ರಾಜ್ಯ ಸರ್ಕಾರ ಅತ್ಯಂತ ಹೆಚ್ಚಿನ ಆದ್ಯತೆ ನೀಡುತ್ತಿದೆ ಎಂದು ಸಚಿವ ಬೈರತಿ ಸುರೇಶ್ ಹೇಳಿದರು. ಈ ಹಿನ್ನೆಲೆಯಲ್ಲಿ ಟ್ಯಾಕ್ಸಿ, ಕ್ಯಾಬ್ ಹಾಗೂ ಇತರೆ ವಾಣಿಜ್ಯ ಪ್ರಯಾಣಿಕರ ವಾಹನಗಳಲ್ಲಿ ಕಡ್ಡಾಯವಾಗಿ ವೆಹಿಕಲ್ ಲೊಕೇಷನ್ ಟ್ರ್ಯಾಕಿಂಗ್ ಸಿಸ್ಟಂ (ಗಿಐಖಿ) ಅಳವಡಿಕೆಯನ್ನು ವೇಗಗೊಳಿಸುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ವಾಹನಗಳ ಚಲನವಲನವನ್ನು ನೈಜ ಸಮಯದಲ್ಲಿ ಮೇಲ್ವಿಚಾರಣೆ ಮಾಡುವ ಮೂಲಕ ಪ್ರಯಾಣಿಕರ ಸುರಕ್ಷತೆಯನ್ನು ಹೆಚ್ಚಿಸುವುದು ಸರ್ಕಾರದ ಉದ್ದೇಶವಾಗಿದೆ ಎಂದು ಅವರು ತಿಳಿಸಿದರು.

ರಾಜ್ಯದ ಸಾರ್ವಜನಿಕ ಸಾರಿಗೆ ವ್ಯವಸ್ಥೆಯನ್ನು ಆಧುನೀಕರಣಗೊಳಿಸುವುದು, ಪರಿಸರ ಸ್ನೇಹಿ ಸಾರಿಗೆಗೆ ಉತ್ತೇಜನ ನೀಡುವುದು, ಶಕ್ತಿ ಯೋಜನೆಯನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಜಾರಿಗೊಳಿಸುವುದು ಹಾಗೂ ಪ್ರಯಾಣಿಕರ ಸುರಕ್ಷತೆಯನ್ನು ಹೆಚ್ಚಿಸುವುದು ಸರ್ಕಾರದ ಪ್ರಮುಖ ಗುರಿಗಳಾಗಿವೆ. ಈ ನಿಟ್ಟಿನಲ್ಲಿ ಕೈಗೊಳ್ಳಲಾಗುತ್ತಿರುವ ಹೊಸ ಕ್ರಮಗಳು ರಾಜ್ಯದ ಸಾರಿಗೆ ಕ್ಷೇತ್ರದಲ್ಲಿ ಮಹತ್ವದ ಬದಲಾವಣೆಗೆ ಕಾರಣವಾಗಲಿವೆ ಎಂದು ಸಚಿವರು ವಿಶ್ವಾಸ ವ್ಯಕ್ತಪಡಿಸಿದರು.

ಇದೇ ವೇಳೆ ರಾಜ್ಯದ ವಿವಿಧ ಭಾಗಗಳಿಂದ ಹೆಚ್ಚುವರಿ ಬಸ್‌ಗಳ ಬೇಡಿಕೆ ನಿರಂತರವಾಗಿ ವ್ಯಕ್ತವಾಗುತ್ತಿರುವ ಹಿನ್ನೆಲೆಯಲ್ಲಿ, ಪ್ರಯಾಣಿಕರ ಒತ್ತಡ ಹೆಚ್ಚಿರುವ ಮಾರ್ಗಗಳಿಗೆ ಆದ್ಯತೆ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ. ವಿಶೇಷವಾಗಿ ಬೆಂಗಳೂರು ಮಹಾನಗರ, ಜಿಲ್ಲಾ ಕೇಂದ್ರಗಳು, ಕೈಗಾರಿಕಾ ವಲಯಗಳು, ಶಿಕ್ಷಣ ಕೇಂದ್ರಗಳು ಹಾಗೂ ಗ್ರಾಮೀಣ ಪ್ರದೇಶಗಳನ್ನು ಸಂಪರ್ಕಿಸುವ ಪ್ರಮುಖ ಮಾರ್ಗಗಳಲ್ಲಿ ಹೆಚ್ಚಿನ ಸಂಖ್ಯೆಯ ಬಸ್‌ಗಳನ್ನು ಕಾರ್ಯಾಚರಣೆಗೆ ತರಲು ಯೋಜನೆ ರೂಪಿಸಲಾಗಿದೆ. ಇದರಿಂದ ವಿದ್ಯಾರ್ಥಿಗಳು, ಕಾರ್ಮಿಕರು, ಉದ್ಯೋಗಿಗಳು ಹಾಗೂ ಗ್ರಾಮೀಣ ಭಾಗದ ಜನರಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ಸಚಿವರು ತಿಳಿಸಿದರು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಡಾಕ್ಟರ್ ಎಚ್ ಸಿ ಮಹದೇವಪ್ಪನವರಿಗೆ ಸಚಿವ ಸ್ಥಾನ ನೀಡುವಂತೆ ವರುಣ ವಿಧಾನಸಭಾ ಕ್ಷೇತ್ರದ ದಲಿತ ಮುಖಂಡರ ಒತ್ತಾಯ



**ತಾಂಡವಪುರ:** ಡಾಕ್ಟರ್ ಎಚ್ ಸಿ ಮಹದೇವಪ್ಪನವರಿಗೆ ಸಚಿವ ಸ್ಥಾನ ನೀಡುವಂತೆ ಕಾಂಗ್ರೆಸ್ ಪಕ್ಷದ ವರಿಷ್ಠರು ಹಾಗೂ ಮಾಜಿ ಸಿಎಂ ಸಿದ್ದರಾಮಯ್ಯನವರಹಳ್ಳಿ ವರುಣ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಪಕ್ಷದ ದಲಿತ ಸಮುದಾಯದ ಮುಖಂಡರುಗಳು ಒತ್ತಾಯಿಸಿ ಮನವಿ ಮಾಡಿದರು

ಮೈಸೂರು ಜಿಲ್ಲೆ, ವರುಣ ವಿಧಾನಸಭಾ ಕ್ಷೇತ್ರಕ್ಕೆ ಸೇರುವ ತಗಡೂರು ಬ್ಯಾಂಕ್ ವರುಣಾ ಬ್ಲಾಕ್ ಕಾಂಗ್ರೆಸ್ ಮುಖಂಡರು ಇಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯನವರನ್ನು ಹಾಗೂ ನಗರಾಭಿವೃದ್ಧಿ ಸಚಿವರಾದ ಡಾಕ್ಟರ್ ಯತೀಂದ್ರ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಜಲ್ದಿ ಸಮುದಾಯದ ಹಿರಿಯ ಮುಖಂಡರು ಹಾಗೂ ಮಾಜಿ ಸಚಿವರು ಆದ ಡಾಕ್ಟರ್ ಎಚ್ ಸಿ ಮಹದೇವಪ್ಪನವರಿಗೆ ಸಚಿವ ಸ್ಥಾನ ಕೊಡಿಸಬೇಕು ಎಂದು ಮನವೇ ಮಾಡಿ ಒತ್ತಾಯಿಸಿದರು

ಮನವಿಯನ್ನು ಆಲಿಸಿದ ಮಾಜಿ ಸಿಎಂ ಸಿದ್ದರಾಮಯ್ಯನವರು ನಿಮ್ಮ ಬೇಡಿಕೆಯನ್ನು ಪಕ್ಷದ ಪರಿಸ್ಥಿತಿ ಗಮನಕ್ಕೆ ತರುತ್ತೇನೆ ನಾನು ಕೂಡ ಈ ವಿಚಾರವಾಗಿ ಮಾತಾಡ್ತೀನಿ ಎಂದು ವರಹ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಪಕ್ಷದ ದಲಿತ ಮುಖಂಡರುಗಳಿಗೆ ಭರವಸೆ ನೀಡಿದರು

ಈ ಸಂದರ್ಭದಲ್ಲಿ ರಾಜ್ಯ ಮೃಗಾಲಯ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ರಂಗಸ್ವಾಮಿ ಶ್ರೀಕಂಠೇಶ್ವರ ದೇವಸ್ಥಾನ ಸಮಿತಿಯ ಮಾಜಿ ಅಧ್ಯಕ್ಷ ದಲಿತ ಯುವ ಮುಖಂಡ ಹೆಜ್ಜಿಗೆ ಆರ್ ಇಂದನ್ ಬಾಬು ಅಹಿಂದ ಮುಖಂಡ ಜವರಪ್ಪ ಬೂತಗಳ್ಳಿ ಮಣಿ ಬಗರ್ ಹುಕುಂ ಸಮಿತಿಯ ಸದಸ್ಯ ರಾಜಣ್ಣ ಗುತ್ತಿಗೆದಾರ ಚಿನ್ನಂಬಳ್ಳಿ ಸಿಆರ್ ಮಹದೇವ್ ಸುತ್ತೂರು ಸೋಮಣ್ಣ ಆರೋಪುರ ಶಿವಣ್ಣ ಬೊಕ್ಕ ಹಳ್ಳಿ ಸೋಮಸುಂದರ್ ತೊರೆಮಾವು ಟಿಡಿ ಗಿರೀಶ್ ಕಲ್ಮಳ್ಳಿ ಬಾಬು ಟಿ ನರಸೀಪರ ಮಹಾದೇವ್ ಗುತ್ತಿಗೆದಾರ ಹೆಜ್ಜಿಗೆ ರವಿಕುಮಾರ್ ಗುರುಪಾದ ಪುರುಷೋತ್ತಮ್ ಕಿರಾಳು ಬಾಲು ಸುಮಾರು 50ಕ್ಕೂ ಹೆಚ್ಚು ಕಾಂಗ್ರೆಸ್ ಪಕ್ಷದ ಮುಖಂಡರು ದಲಿತ ಮುಖಂಡರು ಈ ಸಂದರ್ಭದಲ್ಲಿ ಹಾಜರಿದ್ದರು.

# ಹುಲಿ ಸಂರಕ್ಷಿತ ಪ್ರದೇಶದಲ್ಲಿ ರೌಡಿಶೀಟರ್ ಎಣ್ಣೆ ಪಾರ್ಟಿ ಆರ್‌ಎಫ್‌ಒ ಪುನೀತ್ ಕುಮಾರ್ ಅಮಾನತು





**ಚಾಮರಾಜನಗರ:** ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದಲ್ಲಿ ರೌಡಿಶೀಟರ್ ಹಾಗೂ ಆತನ ಸಹಚರರು ನಡೆಸಿದ್ದ ಅಕ್ರಮ ಎಣ್ಣೆ ಪಾರ್ಟಿ ಪ್ರಕರಣಕ್ಕೆ ಸಂಬಂಧಿಸಿದಂತೆ ಅರಣ್ಯ ಇಲಾಖೆ ಕಟ್ಟುನಿಟ್ಟಿನ ಕ್ರಮ ಕೈಗೊಂಡಿದೆ. ಕರ್ತವ್ಯ ಲೋಪ, ಬೇಜವಾಬ್ದಾರಿತನ ಹಾಗೂ ಮೇಲಧಿಕಾರಿಗಳಿಗೆ ಮಾಹಿತಿ ನೀಡದೆ ಪ್ರಕರಣವನ್ನು ಮುಚ್ಚಿಟ್ಟ ಆರೋಪದ ಹಿನ್ನೆಲೆಯಲ್ಲಿ ಬಂಡೀಪುರದ ಮದ್ದೂರು ವನ್ಯಜೀವಿ ವಲಯದ ವಲಯ ಅರಣ್ಯಾಧಿಕಾರಿ (ಆರ್‌ಎಫ್‌ಒ) ಡಿ. ಪುನೀತ್ ಕುಮಾರ್ ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಅಮಾನತುಗೊಳಿಸಿ ಸರ್ಕಾರದ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಪಿಸಿಸಿಎಫ್) ಆದೇಶ ಹೊರಡಿಸಿದ್ದಾರೆ.


ಗುಂಡ್ಲುಪೇಟೆ ತಾಲೂಕಿನ ಬಂಡೀಪುರ ಅರಣ್ಯದ ಮದ್ದೂರು ವಲಯದಲ್ಲಿರುವ 'ಹುಲಿ ಕಟ್ಟೆ' ಪ್ರದೇಶದ ಕಳ್ಳಬೇಟೆ ತಡೆ ಶಿಬಿರದ ಮುಂಭಾಗದಲ್ಲೇ ಕುಖ್ಯಾತ ರೌಡಿಶೀಟರ್ ಸತೀಶ್ ಯಾನೆ ಮಹದೇವಪ್ರಸಾದ್ ಹಾಗೂ ಆತನ ಸ್ನೇಹಿತರಾದ ಗಂಗಾಧರ್ ಮತ್ತು ಚೇತನ್ ಅಕ್ರಮವಾಗಿ ಪ್ರವೇಶಿಸಿ ಮದ್ಯದ ಪಾರ್ಟಿ ನಡೆಸಿದ್ದರು. ಶಿಬಿರದ ಸೌರ ಫಲಕವನ್ನೇ ಟೇಬಲ್ ಮಾಡಿಕೊಂಡು ಅದರ ಮೇಲೆ ಮದ್ಯದ ಬಾಟಲಿಗಳು, ಪ್ಲಾಸ್ಟಿಕ್ ಲೋಟಗಳು ಹಾಗೂ ತಿಂಡಿಯ ಪ್ಯಾಕೆಟ್‌ಗಳನ್ನು ಇಟ್ಟು ಸಂಭ್ರಮಾಚರಣೆ ನಡೆಸಿರುವ ಫೋಟೋಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದವು.

ಅತ್ಯಂತ ಸಂರಕ್ಷಿತ ಹಾಗೂ ವನ್ಯಜೀವಿಗಳ ಓಡಾಟವಿರುವ ಪ್ರದೇಶದಲ್ಲಿ ಇಂತಹ ಘಟನೆ ನಡೆದಿರುವುದಕ್ಕೆ ಪರಿಸರವಾದಿಗಳು ಮತ್ತು ವನ್ಯಜೀವಿ ಪ್ರೇಮಿಗಳು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದರು. ಪ್ರಕರಣ ಬೆಳಕಿಗೆ ಬಂದ ಬಳಿಕ ಬಂಡೀಪುರ ಹುಲಿ ಯೋಜನೆ ನಿರ್ದೇಶಕ ನಂದೀಶ್ ಅವರು ತನಿಖೆಗೆ ಆದೇಶಿಸಿದ್ದು, ಎಸಿಎಫ್ ಸುರೇಶ್ ಸಲ್ಲಿಸಿದ ವರದಿಯಲ್ಲಿ ಆರ್‌ಎಫ್‌ಒ ಪುನೀತ್ ಕುಮಾರ್ ಅವರು ಮೇಲಧಿಕಾರಿಗಳಿಗೆ ಮಾಹಿತಿ ನೀಡದೆ ಹಾಗೂ ಆರೋಪಿಗಳ ಹೆಸರನ್ನು ಅಧಿಕೃತವಾಗಿ ದಾಖಲಿಸದೆ ಕರ್ತವ್ಯ ಲೋಪ ಎಸಗಿರುವುದು ದೃಢಪಟ್ಟಿದೆ.

ಪ್ರಸ್ತುತ ಅರಣ್ಯ ಇಲಾಖೆ ರೌಡಿಶೀಟರ್ ಸತೀಶ್, ಗಂಗಾಧರ್ ಹಾಗೂ ಚೇತನ್ ವಿರುದ್ಧ ವನ್ಯಜೀವಿ ಸಂರಕ್ಷಣಾ ಕಾಯ್ದೆಯ ವಿವಿಧ ಕಲಂಗಳಡಿ ಪ್ರಕರಣ ದಾಖಲಿಸಿದೆ. ತಲೆಮರೆಸಿಕೊಂಡಿರುವ ಆರೋಪಿಗಳಿಗಾಗಿ ಅರಣ್ಯ ಇಲಾಖೆ ಹಾಗೂ ಗುಂಡ್ಲುಪೇಟೆ ಪೊಲೀಸರು ಜಂಟಿಯಾಗಿ ಶೋಧ ಕಾರ್ಯಾಚರಣೆ ನಡೆಸುತ್ತಿದ್ದಾರೆ.

ಸಾಮಾನ್ಯ ಜನರು ಕಾಡಿನ ರಸ್ತೆಯಲ್ಲಿ ವಾಹನ ನಿಲ್ಲಿಸಿ ಫೋಟೋ ತೆಗೆದರೂ ದಂಡ ವಿಧಿಸುವ ಇಲಾಖೆ, ರೌಡಿಶೀಟರ್‌ಗಳಿಗೆ ಸಂರಕ್ಷಿತ ಪ್ರದೇಶದಲ್ಲಿ ಪಾರ್ಟಿ ಮಾಡಲು ಅವಕಾಶ ನೀಡಿರುವುದು ಭದ್ರತಾ ವೈಫಲ್ಯ ಎಂದು ಪರಿಸರ ಹೋರಾಟಗಾರರು ಆರೋಪಿಸಿದ್ದು, ಪ್ರಕರಣದಲ್ಲಿ ಭಾಗಿಯಾದ ಎಲ್ಲರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ.

# ಆಟವಾಡುತ್ತಿದ್ದ ವೇಳೆ ಕುಸಿದು ಬಿದ್ದು 14 ವರ್ಷದ ಬಾಲಕಿ ಸಾವು



**ಗಾಂಧಿನಗರ:** ಹೋಟೆಲ್‌ನಲ್ಲಿ ಕುಟುಂಬದವರೊಂದಿಗೆ ಊಟ ಮುಗಿಸಿ ಮಕ್ಕಳೊಂದಿಗೆ ಆಟವಾಡುತ್ತಿದ್ದ ವೇಳೆ 14 ವರ್ಷದ ಬಾಲಕಿ ಏಕಾಏಕಿ ಕುಸಿದು ಬಿದ್ದು ಮೃತಪಟ್ಟಿರುವ ಹೃದಯವಿದ್ರಾವಕ ಘಟನೆ ಗುಜರಾತ್‌ನ ರಾಜ್‌ಕೋಟ್‌ನಲ್ಲಿ ನಡೆದಿದೆ.

ಜಾಮ್‌ನಗರ ಮೂಲದ ಆನಂದಿ ಮೋದಿ ಮೃತಪಟ್ಟ ಬಾಲಕಿ. ಬೇಸಿಗೆ ರಜೆಯ ಹಿನ್ನೆಲೆಯಲ್ಲಿ ಆನಂದಿ ರಾಜ್‌ಕೋಟ್‌ನಲ್ಲಿರುವ ತನ್ನ ಮಾವನ ಮನೆಗೆ ಬಂದಿದ್ದಳು. ಭಾನುವಾರ ಸಂಜೆ ಕುಟುಂಬದ ಸದಸ್ಯರೆಲ್ಲರೂ ಒಟ್ಟಾಗಿ ಹೋಟೆಲ್‌ಗೆ ಊಟಕ್ಕೆ ತೆರಳಿದ್ದರು.

ಊಟ ಮುಗಿದ ಬಳಿಕ ಆನಂದಿ ಇತರೆ ಮಕ್ಕಳೊಂದಿಗೆ ಹೋಟೆಲ್ ಆವರಣದಲ್ಲಿ ಆಟವಾಡುತ್ತಿದ್ದಳು. ಇದೇ ವೇಳೆ ಆಕೆ ಏಕಾಏಕಿ ನೆಲಕ್ಕುರುಳಿ ಬಿದ್ದಿದ್ದಾಳೆ. ತಕ್ಷಣವೇ ಕುಟುಂಬಸ್ಥರು ಬಾಲಕಿಯನ್ನು ಸಮೀಪದ ಆಸ್ಪತ್ರೆಗೆ ದಾಖಲಿಸಿದರೂ, ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾಳೆ.

ಪ್ರಾಥಮಿಕ ಮಾಹಿತಿಯ ಪ್ರಕಾರ ಹೃದಯಾಘಾತದಿಂದ ಬಾಲಕಿ ಸಾವನ್ನಪ್ಪಿರುವ ಶಂಕೆ ವ್ಯಕ್ತವಾಗಿದ್ದು, ನಿಖರ ಸಾವಿನ ಕಾರಣ ತಿಳಿಯಲು ವೈದ್ಯಕೀಯ ಪರೀಕ್ಷೆ ಹಾಗೂ ತನಿಖೆ ಮುಂದುವರಿದಿದೆ. ಬಾಲಕಿಯ ಅಕಾಲಿಕ ಸಾವು ಕುಟುಂಬಸ್ಥರನ್ನು ಆಘಾತಕ್ಕೀಡು ಮಾಡಿದ್ದು, ಸ್ಥಳೀಯರಲ್ಲಿ ದುಃಖದ ವಾತಾವರಣ ನಿರ್ಮಾಣವಾಗಿದೆ.

ಘಟನೆ ನಡೆದ ಕ್ಷಣದ ದೃಶ್ಯಗಳು ಅಲ್ಲಿನ ಸಿಸಿಟಿವಿ ಕ್ಯಾಮೆರಾಗಳಲ್ಲಿ ಸೆರೆಯಾಗಿರುವುದಾಗಿ ತಿಳಿದುಬಂದಿದೆ. ಆರೋಗ್ಯವಾಗಿಯೇ ಕಾಣಿಸಿಕೊಂಡಿದ್ದ ಬಾಲಕಿ ಆಟವಾಡುತ್ತಿದ್ದ ವೇಳೆ ಹಠಾತ್ತನೆ ಕುಸಿದು ಬಿದ್ದಿರುವುದು ಕುಟುಂಬಸ್ಥರನ್ನು ಬೆಚ್ಚಿಬೀಳಿಸಿದೆ. ಇತ್ತೀಚಿನ ದಿನಗಳಲ್ಲಿ ಕಡಿಮೆ ವಯಸ್ಸಿನವರಲ್ಲಿ ಹೃದಯ ಸಂಬಂಧಿ ಸಮಸ್ಯೆಗಳು ಹೆಚ್ಚುತ್ತಿರುವ ಬಗ್ಗೆ ತಜ್ಞರು ಕಳವಳ ವ್ಯಕ್ತಪಡಿಸುತ್ತಿದ್ದು, ಈ ಘಟನೆ ಕೂಡ ಹಲವು ಪ್ರಶ್ನೆಗಳನ್ನು ಹುಟ್ಟುಹಾಕಿದೆ.

# ಟಿಬಿ ಡ್ಯಾಂ ಸೋರಿಕೆ ತಡೆಗೆ ಸರ್ಜರಿ; ಸುರಕ್ಷತೆಗೆ ಆದ್ಯತೆ, ಪ್ರತಿ ಕಲ್ಲಿಗೂ ರಕ್ಷಣೆ



**ಹೊಸಪೇಟೆ (ವಿಜಯನಗರ):** ತುಂಗಭದ್ರಾ ಜಲಾಶಯದ ಇತಿಹಾಸದಲ್ಲೇ ದೊಡ್ಡ ತಾಂತ್ರಿಕ ಅವಘಡವೆಂದು ಪರಿಗಣಿಸಲ್ಪಟ್ಟ 19ನೇ ಕ್ರಸ್ಟ್ ಗೇಟ್ ಕೊಚ್ಚಿಹೋದ ಘಟನೆಯ ಬಳಿಕ, ಜಲಾಶಯದ ಸುರಕ್ಷತೆ ಮತ್ತು ನಿರ್ವಹಣೆ ವಿಚಾರದಲ್ಲಿ ತುಂಗಭದ್ರಾ ಮಂಡಳಿ ಯಾವುದೇ ರೀತಿಯ ರಾಜಿ ಮಾಡಿಕೊಳ್ಳದ ನಿಲುವು ತಳೆದಿದೆ. ಕಳೆದ ವರ್ಷದ ಘಟನೆ ಜಲಾಶಯದ ಸ್ಥಿರತೆ ಹಾಗೂ ನಿರ್ವಹಣಾ ವ್ಯವಸ್ಥೆಯ ಕುರಿತು ಹಲವು ಪ್ರಶ್ನೆಗಳನ್ನು ಹುಟ್ಟುಹಾಕಿದ್ದ ಹಿನ್ನೆಲೆಯಲ್ಲಿ, ಇದೀಗ ಮಂಡಳಿ ಸಮಗ್ರ ನಿರ್ವಹಣೆ ಮತ್ತು ಬಲವರ್ಧನೆ ಕಾಮಗಾರಿಗಳಿಗೆ ಆದ್ಯತೆ ನೀಡಿದೆ.

ಕೇವಲ ಹಾನಿಗೊಳಗಾದ ಕ್ರಸ್ಟ್ ಗೇಟ್‌ನ್ನು ಬದಲಾಯಿಸುವುದಕ್ಕೆ ಮಾತ್ರ ಸೀಮಿತವಾಗದೇ, ಜಲಾಶಯದ ಪ್ರತಿಯೊಂದು ಪ್ರಮುಖ ಭಾಗವನ್ನು ತಾಂತ್ರಿಕವಾಗಿ ಪರಿಶೀಲಿಸಿ ಅಗತ್ಯ ಬಲವರ್ಧನೆ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿದೆ. ಜಲಾಶಯದ ದೀರ್ಘಕಾಲೀನ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳುವ ಉದ್ದೇಶದಿಂದ ವಿವಿಧ ಹಂತಗಳಲ್ಲಿ ನಿರ್ವಹಣಾ ಕಾಮಗಾರಿಗಳು ನಡೆಯುತ್ತಿದ್ದು, ಭವಿಷ್ಯದಲ್ಲಿ ಯಾವುದೇ ರೀತಿಯ ತಾಂತ್ರಿಕ ಸಮಸ್ಯೆ ಎದುರಾಗದಂತೆ ಮುನ್ನೆಚ್ಚರಿಕೆ ವಹಿಸಲಾಗಿದೆ.

2024ರ ಮಳೆಗಾಲದಲ್ಲಿ ಸಂಭವಿಸಿದ 19ನೇ ಕ್ರಸ್ಟ್ ಗೇಟ್ ವೈಫಲ್ಯವು ರಾಜ್ಯದ ನೀರಾವರಿ ಕ್ಷೇತ್ರದಲ್ಲಿ ಭಾರೀ ಚರ್ಚೆಗೆ ಕಾರಣವಾಗಿತ್ತು. ಜಲಾಶಯದ ನಿರ್ವಹಣಾ ಕ್ರಮಗಳು, ತಾಂತ್ರಿಕ ಮೇಲ್ವಿಚಾರಣೆ ಹಾಗೂ ಸುರಕ್ಷತಾ ವ್ಯವಸ್ಥೆಗಳ ಬಗ್ಗೆ ಸಾರ್ವಜನಿಕ ವಲಯದಲ್ಲೂ ಪ್ರಶ್ನೆಗಳು ಕೇಳಿಬಂದಿದ್ದವು. ಈ ಹಿನ್ನೆಲೆ ಮಂಡಳಿ ಈ ಬಾರಿ ನಿರ್ವಹಣಾ ಕಾಮಗಾರಿಗಳನ್ನು ಹೆಚ್ಚು ವೈಜ್ಞಾನಿಕವಾಗಿ ಹಾಗೂ ಸಮಗ್ರವಾಗಿ ಕೈಗೊಳ್ಳುತ್ತಿದೆ.

ಜಲಾಶಯದ ಗೋಡೆಯ ಆಯಸ್ಸನ್ನು ಹೆಚ್ಚಿಸುವುದು ಹಾಗೂ ನೀರಿನ ಸೋರಿಕೆಯನ್ನು ಸಂಪೂರ್ಣವಾಗಿ ತಡೆಗಟ್ಟುವ ಉದ್ದೇಶದಿಂದ 'ಅಪ್-ಸ್ಟ್ರೀಮ್ ಪಾಯಿಂಟಿಂಗ್' ಎಂಬ ಮಹತ್ವದ ಕಾಮಗಾರಿಗೆ ಚಾಲನೆ ನೀಡಲಾಗಿದೆ. ಕಳೆದ ಎರಡು ಮೂರು ತಿಂಗಳಿನಿಂದ ನಿರಂತರವಾಗಿ ನಡೆಯುತ್ತಿರುವ ಈ ಕಾರ್ಯ ಈಗ ಅಂತಿಮ ಹಂತಕ್ಕೆ ತಲುಪಿದ್ದು, ಡ್ಯಾಂನ ಎಡ ಹಾಗೂ ಬಲ ಭಾಗಗಳಲ್ಲಿ ವ್ಯಾಪಕವಾಗಿ ಕಾಮಗಾರಿ ನಡೆದಿದೆ. ಜಲಾಶಯದ ಒಳಭಾಗದಲ್ಲಿ, ಅಂದರೆ ನೀರು ಸಂಗ್ರಹವಾಗಿರುವ ಪ್ರದೇಶದಲ್ಲಿ ಕಲ್ಲುಗಳ ನಡುವಿನ ಸಂದುಗಳನ್ನು ಭದ್ರಪಡಿಸುವ ಈ ತಾಂತ್ರಿಕ ಪ್ರಕ್ರಿಯೆ ಡ್ಯಾಂನ ಬಾಳಿಕೆ ಮತ್ತು ಸ್ಥಿರತೆಗೆ ಅತ್ಯಂತ ಪ್ರಮುಖವಾಗಿದೆ.

**ಏನಿದು ಅಪ್-ಸ್ಟ್ರೀಮ್ ಪಾಯಿಂಟಿಂಗ್?:** ಸಾಮಾನ್ಯವಾಗಿ ಜಲಾಶಯದ ಗೋಡೆಗಳನ್ನು ಕಲ್ಲು ಮತ್ತು ಗಾರೆಯಿಂದ ನಿರ್ಮಿಸಲಾಗುತ್ತದೆ. ವರ್ಷಗಳ ಕಾಲ ನೀರಿನ ಒತ್ತಡ ಮತ್ತು ನಿರಂತರ ತೇವಾಂಶದ ಪರಿಣಾಮವಾಗಿ ಕಲ್ಲುಗಳ ನಡುವೆ ಇರುವ ಗಾರೆ ಸವೆದು ಹೋಗುವ ಸಾಧ್ಯತೆ ಇರುತ್ತದೆ. ಇದರಿಂದ ಗೋಡೆಯ ಒಳಭಾಗಕ್ಕೆ ನೀರು ನುಗ್ಗಿ ಸೋರಿಕೆ ಉಂಟಾಗಬಹುದು. ಕಾಲಕ್ರಮೇಣ ಈ ಸೋರಿಕೆಗಳು ದೊಡ್ಡ ತಾಂತ್ರಿಕ ಸಮಸ್ಯೆಗಳಿಗೆ ಕಾರಣವಾಗುವ ಸಾಧ್ಯತೆಯೂ ಇರುತ್ತದೆ.

ಇಂತಹ ಅಪಾಯಗಳನ್ನು ತಡೆಗಟ್ಟುವ ಉದ್ದೇಶದಿಂದ ಹಳೆಯ ಹಾಗೂ ದುರ್ಬಲಗೊಂಡ ಗಾರೆಯನ್ನು ಸಂಪೂರ್ಣವಾಗಿ ತೆಗೆದುಹಾಕಿ, ಅದರ ಜಾಗದಲ್ಲಿ ಅತ್ಯಾಧುನಿಕ ಸಿಮೆಂಟ್ ಮಿಶ್ರಣ ಅಥವಾ ವಿಶೇಷ ಜಲನಿರೋಧಕ ರಾಸಾಯನಿಕಗಳನ್ನು ಬಳಸಿ ಕಲ್ಲುಗಳ ನಡುವಿನ ಸಂದುಗಳನ್ನು ಪುನಃ ಭರ್ತಿ ಮಾಡಲಾಗುತ್ತದೆ. ಈ ಪ್ರಕ್ರಿಯೆಯನ್ನೇ 'ಪಾಯಿಂಟಿಂಗ್ ವರ್ಕ್' ಅಥವಾ 'ಅಪ್-ಸ್ಟ್ರೀಮ್ ಪಾಯಿಂಟಿಂಗ್' ಎಂದು ಕರೆಯಲಾಗುತ್ತದೆ. ಇದು ಜಲಾಶಯದ ಗೋಡೆಗೆ ಹೊಸ ಜೀವ ನೀಡುವ ಕೆಲಸವಾಗಿದ್ದು, ಭವಿಷ್ಯದ ಸುರಕ್ಷತೆಯಲ್ಲಿ ಮಹತ್ವದ ಪಾತ್ರ ವಹಿಸುತ್ತದೆ.


ಪ್ರಸ್ತುತ ಟಿಬಿ ಡ್ಯಾಂನಲ್ಲಿ ನೀರಿನ ಮಟ್ಟ ಕಡಿಮೆಯಾಗಿರುವುದನ್ನು ಅನುಕೂಲಕರವಾಗಿ ಬಳಸಿಕೊಂಡು ಈ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ. ಜಲಾಶಯದ ಗೋಡೆಯ ಮೇಲೆ ವರ್ಷಗಳಿಂದ ಬೆಳೆದಿರುವ ಪಾಚಿ, ಕಸ ಹಾಗೂ ಸಡಿಲಗೊಂಡ ಗಾರೆಯನ್ನು ಮೊದಲು ಹೈ-ಪ್ರೆಶರ್ ವಾಟರ್ ಜೆಟ್ ತಂತ್ರಜ್ಞಾನದ ಮೂಲಕ ಸಂಪೂರ್ಣವಾಗಿ ಸ್ವಚ್ಛಗೊಳಿಸಲಾಗಿದೆ. ಬಳಿಕ ಸಾಮಾನ್ಯ ಸಿಮೆಂಟ್ ಬಳಕೆಯ ಬದಲು ಜಲನಿರೋಧಕ ಗುಣಲಕ್ಷಣಗಳನ್ನು ಹೊಂದಿರುವ ವಿಶೇಷ ಕಾಂಕ್ರೀಟ್ ಮಿಶ್ರಣವನ್ನು ಕಲ್ಲುಗಳ ನಡುವಿನ ಸಂದುಗಳಿಗೆ ತುಂಬಲಾಗುತ್ತಿದೆ.

ಈ ಕಾಮಗಾರಿಯ ವಿಶೇಷತೆಯೆಂದರೆ ಜಲಾಶಯದ ಮೇಲ್ಮಟ್ಟಕ್ಕೆ ಮಾತ್ರ ಸೀಮಿತವಾಗದೇ, ಸಾಧ್ಯವಾದಷ್ಟು ಕೆಳಮಟ್ಟದವರೆಗೂ ಪಾಯಿಂಟಿಂಗ್ ಕಾರ್ಯ ಕೈಗೊಳ್ಳಲಾಗುತ್ತಿದೆ. ಇದರಿಂದ ಡ್ಯಾಂನ ಸಂಪೂರ್ಣ ಗೋಡೆಗೆ ಏಕರೂಪದ ರಕ್ಷಣೆ ದೊರೆಯಲಿದ್ದು, ಮುಂದಿನ 20 ರಿಂದ 30 ವರ್ಷಗಳ ಕಾಲ ಯಾವುದೇ ರೀತಿಯ ಗಂಭೀರ ಹಾನಿ ಉಂಟಾಗದಂತೆ ತಡೆಯಲು ಸಾಧ್ಯವಾಗಲಿದೆ ಎಂದು ತಾಂತ್ರಿಕ ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

ಅಪ್-ಸ್ಟ್ರೀಮ್ ಪಾಯಿಂಟಿಂಗ್ ಕಾಮಗಾರಿಯಿಂದ ಜಲಾಶಯದ ಹಿಂಭಾಗದಲ್ಲಿ ಕಾಣಿಸಿಕೊಳ್ಳುವ ಸಣ್ಣಪುಟ್ಟ ನೀರಿನ ಸೋರಿಕೆಗಳು ಸಂಪೂರ್ಣವಾಗಿ ನಿಯಂತ್ರಣಕ್ಕೆ ಬರಲಿವೆ. ಕಲ್ಲುಗಳ ನಡುವಿನ ಬಂಧ ಮತ್ತಷ್ಟು ಗಟ್ಟಿಯಾಗುವುದರಿಂದ ಡ್ಯಾಂನ ಒಟ್ಟಾರೆ ರಚನಾತ್ಮಕ ಸ್ಥಿರತೆ (ಸ್ಟ್ರಕ್ಚರಲ್ ಸ್ಟೆಬಿಲಿಟಿ) ಹೆಚ್ಚಳವಾಗಲಿದೆ. ನೀರಿನ ಭಾರೀ ಒತ್ತಡದ ಪರಿಣಾಮ ಗೋಡೆಯ ಕಲ್ಲುಗಳು ಸಡಿಲಗೊಳ್ಳುವ ಸಾಧ್ಯತೆಯೂ ಗಣನೀಯವಾಗಿ ಕಡಿಮೆಯಾಗಲಿದೆ.

ಜಲಾಶಯದ ಸುರಕ್ಷತೆಯನ್ನು ಅತ್ಯುನ್ನತ ಮಟ್ಟದಲ್ಲಿ ಕಾಪಾಡುವ ಉದ್ದೇಶದಿಂದ ಮಂಡಳಿ ಕೈಗೊಂಡಿರುವ ಈ ಕಾಮಗಾರಿಗಳು ಭವಿಷ್ಯದ ದೃಷ್ಟಿಯಿಂದ ಅತ್ಯಂತ ಮಹತ್ವದ್ದಾಗಿವೆ. ಕಳೆದ ವರ್ಷದ ಅವಘಡದಿಂದ ಪಾಠ ಕಲಿತಿರುವ ಅಧಿಕಾರಿಗಳು, ಜಲಾಶಯದ ಪ್ರತಿಯೊಂದು ಭಾಗವನ್ನು ವೈಜ್ಞಾನಿಕವಾಗಿ ಪರಿಶೀಲಿಸಿ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುತ್ತಿದ್ದಾರೆ. ಈ ಮೂಲಕ ತುಂಗಭದ್ರಾ ಜಲಾಶಯವನ್ನು ಇನ್ನಷ್ಟು ಸುರಕ್ಷಿತ, ಬಲಿಷ್ಠ ಹಾಗೂ ದೀರ್ಘಕಾಲ ಬಾಳಿಕೆ ಬರುವ ಮೂಲಸೌಕರ್ಯವನ್ನಾಗಿ ರೂಪಿಸುವ ಪ್ರಯತ್ನಗಳು ಮುಂದುವರಿದಿವೆ.

# ಉಕ್ಕು ಸ್ಥಾವರದಲ್ಲಿ ಭೀಕರ ದುರಂತ: 8 ಕಾರ್ಮಿಕರ ದುರ್ಮರಣ



**ವಿಶಾಖಪಟ್ಟಣಂ:** ಆಂಧ್ರಪ್ರದೇಶದ ವಿಶಾಖಪಟ್ಟಣದಲ್ಲಿರುವ ರಾಷ್ಟ್ರೀಯ ಇಸ್ಪತ್ ನಿಗಮ್ ಲಿಮಿಟೆಡ್ (ಆರ್‌ಐಎನ್‌ಎಲ್) ವ್ಯಾಪ್ತಿಯ ವಿಶಾಖ ಪಟ್ಟಣಂ ಸ್ಟೀಲ್ ಪ್ಲಾಂಟ್‌ನಲ್ಲಿ ಸೋಮವಾರ ಸಂಭವಿಸಿದ ಭೀಕರ ಕೈಗಾರಿಕಾ ಅವಘಡದಲ್ಲಿ ಕನಿಷ್ಠ 8 ಕಾರ್ಮಿಕರು ಸಾವನ್ನಪ್ಪಿದ್ದು, ಹಲವರು ಗಂಭೀರವಾಗಿ ಗಾಯಗೊಂಡಿದ್ದಾರೆ. ಕರಗಿದ ಉಕ್ಕನ್ನು ಸಾಗಿಸುತ್ತಿದ್ದ ವೇಳೆ ಸಂಭವಿಸಿದ ಈ ದುರಂತದಿಂದ ಕಾರ್ಖಾನೆ ಆವರಣದಲ್ಲಿ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿತ್ತು.

ಮಾಹಿತಿಯ ಪ್ರಕಾರ, ಕ್ರೇನ್ ಸಹಾಯದಿಂದ ಒಂದು ವಿಭಾಗದಿಂದ ಮತ್ತೊಂದು ವಿಭಾಗಕ್ಕೆ ಸಾಗಿಸಲಾಗುತ್ತಿದ್ದ ಬೃಹತ್ ಬಕೆಟ್‌ನಲ್ಲಿ ಅತ್ಯಂತ ಉಷ್ಣಾಂಶದಲ್ಲಿದ್ದ ಕರಗಿದ ಉಕ್ಕು ತುಂಬಲಾಗಿತ್ತು. ಈ ವೇಳೆ ತಾಂತ್ರಿಕ ದೋಷ ಅಥವಾ ಇತರ ಕಾರಣಗಳಿಂದ ಬಕೆಟ್‌ನಲ್ಲಿದ್ದ ಕುದಿಯುತ್ತಿದ್ದ ಉಕ್ಕು ಏಕಾಏಕಿ ಕಾರ್ಮಿಕರ ಮೇಲೆ ಚೆಲ್ಲಿಬಿದ್ದಿದೆ. ಪರಿಣಾಮ ಸ್ಥಳದಲ್ಲೇ ಹಲವರು ಗಂಭೀರವಾಗಿ ಗಾಯಗೊಂಡಿದ್ದು, ಕನಿಷ್ಠ 8 ಕಾರ್ಮಿಕರು ಸಾವನ್ನಪ್ಪಿರುವುದಾಗಿ ಅಧಿಕಾರಿಗಳು ತಿಳಿಸಿದ್ದಾರೆ.

ಅಪಘಾತದ ವೇಳೆ ಕರಗಿದ ಉಕ್ಕಿನ ಉಷ್ಣಾಂಶ ಸುಮಾರು 1,600 ಡಿಗ್ರಿ ಸೆಲ್ಸಿಯಸ್‌ಗೂ ಅಧಿಕವಾಗಿತ್ತು ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ಇಂತಹ ಅತಿ ಹೆಚ್ಚು ಉಷ್ಣಾಂಶದ ಉಕ್ಕು ಮಾನವ ದೇಹದ ಮೇಲೆ ಬಿದ್ದ ಪರಿಣಾಮ ಕಾರ್ಮಿಕರಿಗೆ ತೀವ್ರ ಸುಟ್ಟ ಗಾಯಗಳಾಗಿದ್ದು, ಕೆಲವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ ಎಂದು ತಿಳಿದುಬಂದಿದೆ.

ಘಟನೆ ಸಂಭವಿಸುತ್ತಿದ್ದಂತೆ ಕಾರ್ಖಾನೆ ಆವರಣದಲ್ಲಿ ಕೆಲಸ ಮಾಡುತ್ತಿದ್ದ ಕಾರ್ಮಿಕರಲ್ಲಿ ಭೀತಿ ಉಂಟಾಯಿತು. ಜೀವ ಉಳಿಸಿಕೊಳ್ಳಲು ಅನೇಕ ಕಾರ್ಮಿಕರು ಸ್ಥಳದಿಂದ ಓಡಿ ಹೋಗಿದ್ದು, ಕೆಲಕಾಲ ಗೊಂದಲದ ಪರಿಸ್ಥಿತಿ ನಿರ್ಮಾಣವಾಗಿತ್ತು. ಮಾಹಿತಿ ತಿಳಿಯುತ್ತಿದ್ದಂತೆ ಉಕ್ಕು ಸ್ಥಾವರದ ಹಿರಿಯ ಅಧಿಕಾರಿಗಳು, ಅಗ್ನಿಶಾಮಕ ಸಿಬ್ಬಂದಿ ಹಾಗೂ ಭದ್ರತಾ ತಂಡಗಳು ತಕ್ಷಣ ಸ್ಥಳಕ್ಕೆ ಧಾವಿಸಿ ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತರುವ ಕಾರ್ಯಾಚರಣೆ ಆರಂಭಿಸಿದರು. ಗಾಯಗೊಂಡ ಕಾರ್ಮಿಕರನ್ನು ತಕ್ಷಣ ಸಮೀಪದ ಆಸ್ಪತ್ರೆಗಳಿಗೆ ದಾಖಲಿಸಲಾಗಿದ್ದು, ಕೆಲವರ ಸ್ಥಿತಿ ಚಿಂತಾ ಜನಕವಾಗಿದೆ ಎಂದು ಮೂಲಗಳು ತಿಳಿಸಿವೆ. ವೈದ್ಯಕೀಯ ತಂಡಗಳು ನಿರಂತರ ಚಿಕಿತ್ಸೆ ನೀಡುತ್ತಿದ್ದು, ಗಾಯಾಳುಗಳ ಆರೋಗ್ಯದ ಮೇಲೆ ನಿಗಾ ವಹಿಸಲಾಗಿದೆ. ಸಾವಿನ ಸಂಖ್ಯೆ ಇನ್ನಷ್ಟು ಹೆಚ್ಚಾಗುವ ಸಾಧ್ಯತೆಯನ್ನೂ ಅಧಿಕಾರಿಗಳು ತಳ್ಳಿ ಹಾಕಿಲ್ಲ.

ಘಟನೆ ಕುರಿತು ಆಂಧ್ರಪ್ರದೇಶ ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು ತೀವ್ರ ದುಃಖ ವ್ಯಕ್ತಪಡಿಸಿದ್ದಾರೆ. ಮೃತ ಕಾರ್ಮಿಕರ ಕುಟುಂಬಗಳಿಗೆ ಸಂತಾಪ ಸೂಚಿಸಿರುವ ಅವರು, ರಕ್ಷಣಾ ಮತ್ತು ಪರಿಹಾರ ಕಾರ್ಯಗಳನ್ನು ತ್ವರಿತಗೊಳಿಸುವಂತೆ ಸಂಬಂಧಿತ ಇಲಾಖೆಗಳ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಗಾಯಾಳುಗಳಿಗೆ ಅತ್ಯುತ್ತಮ ಚಿಕಿತ್ಸೆ ಒದಗಿಸಲು ಹಾಗೂ ಘಟನೆಯ ಸಂಪೂರ್ಣ ಮಾಹಿತಿ ಸಂಗ್ರಹಿಸಲು ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದ್ದಾರೆ.

ವಿಶಾಖಪಟ್ಟಣಂ ಸ್ಟೀಲ್ ಪ್ಲಾಂಟ್ ಸರ್ಕಲ್ ಇನ್ಸ್‌ಪೆಕ್ಟರ್ ಕೇಶವ್ ರಾವ್ ಮಾತನಾಡಿ, ಅಪಘಾತದ ನಿಖರ ಕಾರಣ ಇನ್ನೂ ತಿಳಿದುಬಂದಿಲ್ಲ. ತಾಂತ್ರಿಕ ದೋಷ, ಯಂತ್ರೋಪಕರಣಗಳ ವೈಫಲ್ಯ ಅಥವಾ ಸುರಕ್ಷತಾ ನಿಯಮಗಳ ಉಲ್ಲಂಘನೆ ಸೇರಿದಂತೆ ಎಲ್ಲಾ ಆಯಾಮಗಳಿಂದ ತನಿಖೆ ನಡೆಸಲಾಗುತ್ತಿದೆ ಎಂದು ತಿಳಿಸಿದ್ದಾರೆ. ಘಟನಾ ಸ್ಥಳವನ್ನು ಭದ್ರಪಡಿಸಲಾಗಿದ್ದು, ತಜ್ಞರ ತಂಡ ಪರಿಶೀಲನೆ ನಡೆಸುತ್ತಿದೆ ಎಂದರು.

ಈ ದುರಂತವು ಮತ್ತೊಮ್ಮೆ ದೇಶದ ಭಾರೀ ಕೈಗಾರಿಕೆ ಗಳು, ಉಕ್ಕು ಉತ್ಪಾದನಾ ಘಟಕಗಳು ಹಾಗೂ ಅಪಾಯಕಾರಿ ಕೈಗಾರಿಕಾ ವಲಯಗಳಲ್ಲಿ ಸುರಕ್ಷತಾ ಕ್ರಮಗಳ ಅಗತ್ಯತೆಯನ್ನು ಎತ್ತಿ ತೋರಿಸಿದೆ. ಕಾರ್ಮಿಕರ ಸುರಕ್ಷತೆಗಾಗಿ ಜಾರಿಯಲ್ಲಿರುವ ನಿಯಮಗಳನ್ನು ಸಮರ್ಪಕವಾಗಿ ಪಾಲಿಸ ಲಾಗುತ್ತಿದೆಯೇ ಎಂಬ ಪ್ರಶ್ನೆಯೂ ಉದ್ಭವಿಸಿದ್ದು, ಘಟನೆಯ ಸಮಗ್ರ ತನಿಖೆಗೆ ಒತ್ತಾಯಗಳು ಕೇಳಿಬರುತ್ತಿವೆ.

ಅಪಘಾತದ ನಿಖರ ಕಾರಣ ಹಾಗೂ ಸಂಭವಿಸಿದ ಹಾನಿಯ ಸಂಪೂರ್ಣ ವಿವರ ತನಿಖೆಯ ಬಳಿಕವೇ ತಿಳಿಯಲಿದ್ದು, ಸದ್ಯ ರಕ್ಷಣಾ ಕಾರ್ಯಾಚರಣೆ ಮತ್ತು ಗಾಯಾಳುಗಳ ಚಿಕಿತ್ಸೆಗೆ ಆದ್ಯತೆ ನೀಡಲಾಗಿದೆ. ಘಟನೆಯಿಂದ ಉಕ್ಕು ಸ್ಥಾವರದ ಕಾರ್ಮಿಕರು ಹಾಗೂ ಮೃತರ ಕುಟುಂಬಗಳಲ್ಲಿ ಶೋಕದ ವಾತಾವರಣ ನಿರ್ಮಾಣವಾಗಿದೆ.

# ರೌಡಿಶೀಟರ್‌ನ ಬರ್ಬರ ಹತ್ಯೆ ದುಷ್ಕರ್ಮಿಗಳು ಎಸ್ಕೇಪ್



**ಹಾಸನ:** ಮಾರಕಾಸ್ತ್ರಗಳಿಂದ ದಾಳಿ ನಡೆಸಿ ರೌಡಿಶೀಟರ್‌ನನ್ನು ಬರ್ಬರವಾಗಿ ಹತ್ಯೆಗೈದಿರುವ ಘಟನೆ ಹಾಸನ ನಗರದಲ್ಲಿ ನಡೆದಿದ್ದು, ದುಷ್ಕರ್ಮಿಗಳು ಕೃತ್ಯ ಎಸಗಿ ಪರಾರಿಯಾಗಿದ್ದಾರೆ.

ಹಾಸನ ನಗರದ ಚನ್ನರಾಯಪಟ್ಟಣ ಪ್ರದೇಶದಲ್ಲಿರುವ ಜಿಲ್ಲಾ ನ್ಯಾಯಾಲಯದ ಮುಂಭಾಗ ಸೋಮವಾರ ಮುಂಜಾನೆ ಈ ಘಟನೆ ನಡೆದಿದೆ. ಬೆಂಗಳೂರಿನಲ್ಲಿ ರೌಡಿಶೀಟರ್ ಆಗಿ ಗುರುತಿಸಿಕೊಂಡಿದ್ದ ಮಂಜೇಶ್ (43) ಕೊಲೆಯಾದ ವ್ಯಕ್ತಿ ಎಂದು ಪೊಲೀಸರು ತಿಳಿಸಿದ್ದಾರೆ.

ಮಂಜೇಶ್ ಅವರ ತಾಯಿ ಹಾಸನ ಮೂಲದವರಾಗಿದ್ದು, ಕುಟುಂಬವು ಬೆಂಗಳೂರಿನಲ್ಲಿ ನೆಲೆಸಿತ್ತು. ಹಾಸನಕ್ಕೆ ಬಂದಿದ್ದ ವೇಳೆ ದುಷ್ಕರ್ಮಿಗಳು ಮಾರಕಾಸ್ತ್ರಗಳೊಂದಿಗೆ ದಾಳಿ ನಡೆಸಿದ್ದಾರೆ. ಮುಖದ ಗುರುತು ಸಿಗದಂತೆ ತೀವ್ರವಾಗಿ ಹಲ್ಲೆ ನಡೆಸಿ ಹತ್ಯೆಗೈದಿರುವುದಾಗಿ ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ.

ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ಆಸ್ಪತ್ರೆಗೆ ರವಾನಿಸಲಾಗಿದ್ದು, ಹತ್ಯೆಯ ಹಿಂದಿನ ಕಾರಣ ಹಾಗೂ ಆರೋಪಿಗಳ ಪತ್ತೆಗೆ ತನಿಖೆ ಆರಂಭಿಸಲಾಗಿದೆ.

ಹಾಸನ ನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದ್ದು, ಸಿಸಿಟಿವಿ ದೃಶ್ಯಗಳು ಹಾಗೂ ಇತರ ಸಾಕ್ಷ್ಯಾಧಾರಗಳ ಆಧಾರದ ಮೇಲೆ ಪೊಲೀಸರು ಆರೋಪಿಗಳಿಗಾಗಿ ಶೋಧ ಕಾರ್ಯಾಚರಣೆ ನಡೆಸುತ್ತಿದ್ದಾರೆ.

ಹತ್ಯೆಗೆ ಹಳೆಯ ವೈಷಮ್ಯ, ಗ್ಯಾಂಗ್ ವೈಮನಸ್ಸು ಅಥವಾ ಇತರೆ ವೈಯಕ್ತಿಕ ಕಾರಣಗಳಿವೆಯೇ ಎಂಬ ಕುರಿತು ಪೊಲೀಸರು ವಿವಿಧ ಆಯಾಮಗಳಲ್ಲಿ ತನಿಖೆ ಮುಂದುವರಿಸಿದ್ದಾರೆ.

# ಐದು ತಿಂಗಳ ಬಾಕಿ ವೇತನ ಬಿಡುಗಡೆ ಮಾಡಿ:ಆಶಾ ಕಾರ್ಯಕರ್ತೆಯರ ಪ್ರತಿಭಟನೆ




**ಹೊಸಪೇಟೆ:** ಐದು ತಿಂಗಳಿನಿಂದ ಬಾಕಿ ಉಳಿದಿರುವ ವೇತನ ಹಾಗೂ ಪ್ರೋತ್ಸಾಹಧನವನ್ನು ತಕ್ಷಣ ಬಿಡುಗಡೆ ಮಾಡುವಂತೆ ಒತ್ತಾಯಿಸಿ ವಿಜಯನಗರ ಜಿಲ್ಲೆಯ ಆಶಾ ಕಾರ್ಯಕರ್ತೆಯರು ಸೋಮವಾರ ಹೊಸಪೇಟೆಯ ಜಿಲ್ಲಾ ಆರೋಗ್ಯಾಧಿಕಾರಿ (ಡಿಎಚ್‌ಒ) ಕಚೇರಿ ಸಮೀಪ ಪ್ರತಿಭಟನೆ ನಡೆಸಿದರು. ಸರ್ಕಾರ ಮತ್ತು ಆರೋಗ್ಯ ಇಲಾಖೆ ಹಲವು ಬಾರಿ ಮನವಿ ಸಲ್ಲಿಸಿದ್ದರೂ ಸಮಸ್ಯೆ ಪರಿಹರಿಸಲು ಅಗತ್ಯ ಕ್ರಮ ಕೈಗೊಂಡಿಲ್ಲ ಎಂದು ಆರೋಪಿಸಿ ಕಾರ್ಯಕರ್ತೆಯರು ತಮ್ಮ ಅಸಮಾಧಾನ ವ್ಯಕ್ತಪಡಿಸಿದರು.

ಆಶಾ ಕಾರ್ಯಕರ್ತೆಯರ ಸಂಘದ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಜಿಲ್ಲೆ ವಿವಿಧ ಭಾಗಗಳಿಂದ ಆಗಮಿಸಿದ್ದ ಕಾರ್ಯಕರ್ತೆಯರು ಭಾಗವಹಿಸಿ, ಬಾಕಿ ವೇತನ ಹಾಗೂ ಪ್ರೋತ್ಸಾಹಧನವನ್ನು ಶೀಘ್ರ ಬಿಡುಗಡೆ ಮಾಡುವಂತೆ ಆಗ್ರಹಿಸಿದರು. ಕಳೆದ ಒಂದು ತಿಂಗಳ ಹಿಂದೆ ಈ ಸಮಸ್ಯೆಯನ್ನು ಬಗೆಹರಿಸುವಂತೆ ಸರ್ಕಾರಕ್ಕೆ ಮನವಿ ಮಾಡಲಾಗಿತ್ತು. ಆದರೆ ಇದುವರೆಗೆ ಯಾವುದೇ ಸ್ಪಷ್ಟ ಕ್ರಮ ಕೈಗೊಳ್ಳದಿರುವುದು ಕಾರ್ಯಕರ್ತೆಯರಲ್ಲಿ ಅಸಮಾಧಾನಕ್ಕೆ ಕಾರಣವಾಗಿದೆ ಎಂದು ಪ್ರತಿಭಟನಾಕಾರರು ಹೇಳಿದರು.

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಸಂಘದ ಜಿಲ್ಲಾ ಗೌರವಾಧ್ಯಕ್ಷ ಪ್ರಮೋದ್, ರಾಜ್ಯಾದ್ಯಂತ ಆಶಾ ಕಾರ್ಯಕರ್ತೆಯರು ನಡೆಸಿದ ಹೋರಾಟದ ಪರಿಣಾಮವಾಗಿ ಸರ್ಕಾರ 260 ಕೋಟಿ ರೂಪಾಯಿ ಅನುದಾನ ಬಿಡುಗಡೆ ಮಾಡಿದೆ. ಅದರಲ್ಲಿ ವಿಜಯನಗರ ಜಿಲ್ಲೆಗೆ ಸುಮಾರು 5.6 ಕೋಟಿ ರೂಪಾಯಿ ಮಂಜೂರಾಗಿದೆ. ಆದರೆ ತಾಂತ್ರಿಕ ಸಮಸ್ಯೆಗಳು ಹಾಗೂ ಆಡಳಿತಾತ್ಮಕ ವಿಳಂಬದ ಕಾರಣದಿಂದ ಆ ಹಣ ಇನ್ನೂ ಆಶಾ ಕಾರ್ಯಕರ್ತೆಯರ ಖಾತೆಗಳಿಗೆ ಜಮೆಯಾಗಿಲ್ಲ. ಪರಿಣಾಮವಾಗಿ ಸಾವಿರಾರು ಕುಟುಂಬಗಳು ಆರ್ಥಿಕ ಸಂಕಷ್ಟಕ್ಕೆ ಸಿಲುಕಿವೆ ಎಂದು ಆರೋಪಿಸಿದರು.

ಆಶಾ ಕಾರ್ಯಕರ್ತೆಯರು ಗ್ರಾಮೀಣ ಆರೋಗ್ಯ ವ್ಯವಸ್ಥೆಯ ಪ್ರಮುಖ ಕೊಂಡಿಯಾಗಿದ್ದು, ಗರ್ಭಿಣಿಯರ ಆರೈಕೆ, ಮಕ್ಕಳ ಲಸಿಕಾ ಕಾರ್ಯಕ್ರಮ, ಆರೋಗ್ಯ ಜಾಗೃತಿ, ಕುಟುಂಬ ಕಲ್ಯಾಣ ಸೇರಿದಂತೆ ಹಲವು ಸೇವೆಗಳನ್ನು ನಿರಂತರವಾಗಿ ಒದಗಿಸುತ್ತಿದ್ದಾರೆ. ಆದರೂ ಅವರಿಗೆ ಸಮಯಕ್ಕೆ ಸರಿಯಾಗಿ ವೇತನ ಹಾಗೂ ಪ್ರೋತ್ಸಾಹಧನ ದೊರೆಯದಿರುವುದು ಬೇಸರದ ಸಂಗತಿಯಾಗಿದೆ ಎಂದು ಅವರು ಹೇಳಿದರು.

ಅಗತ್ಯ ವಸ್ತುಗಳ ಬೆಲೆ ದಿನದಿಂದ ದಿನಕ್ಕೆ ಏರಿಕೆಯಾಗುತ್ತಿದ್ದು, ಜೀವನ ನಿರ್ವಹಣೆ ಕಷ್ಟಕರವಾಗಿದೆ. ಇಂತಹ ಪರಿಸ್ಥಿತಿಯಲ್ಲೂ ಆಶಾ ಕಾರ್ಯಕರ್ತೆಯರ ಗೌರವಧನ ಹೆಚ್ಚಿಸುವ ಬಗ್ಗೆ ಸರ್ಕಾರ ಯಾವುದೇ ಗಮನ ಹರಿಸುತ್ತಿಲ್ಲ. ಬಾಕಿ ವೇತನ ಬಿಡುಗಡೆಗೂ ವಿಳಂಬ ಮಾಡುತ್ತಿರುವುದು ಕಾರ್ಯಕರ್ತೆಯರ ಬದುಕಿನ ಮೇಲೆ ನೇರ ಪರಿಣಾಮ ಬೀರುತ್ತಿದೆ ಎಂದು ಪ್ರತಿಭಟನಾಕಾರರು ಅಸಮಾಧಾನ ವ್ಯಕ್ತಪಡಿಸಿದರು. ಸರ್ಕಾರ ಸಮಸ್ಯೆ ಪರಿಹರಿಸಲು ಇನ್ನಷ್ಟು ವಿಳಂಬ ಮಾಡಿದರೆ ರಾಜ್ಯಾದ್ಯಂತ ಹೋರಾಟವನ್ನು ತೀವ್ರಗೊಳಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಸಂಘದ ಜಿಲ್ಲಾ ಕಾರ್ಯದರ್ಶಿ ಗೌರಮ್ಮ ಮಾತನಾಡಿ, ಕೇಂದ್ರ ಸರ್ಕಾರದಿಂದ ಅನುಮೋದನೆ ದೊರೆಯದ ಕಾರಣ ನೀಡಿ ರಾಜ್ಯ ಸರ್ಕಾರ ಆಶಾ ಪೋರ್ಟಲ್‌ನಲ್ಲಿದ್ದ ಸುಮಾರು ಒಂಬತ್ತು ಪ್ರಮುಖ ಘಟಕಗಳನ್ನು ನಿಷ್ಕ್ರಿಯಗೊಳಿಸಿದೆ ಎಂದು ಆರೋಪಿಸಿದರು. ಇದರಿಂದ ವಾರದ ಲಸಿಕಾ ಕಾರ್ಯಕ್ರಮ ಸೇರಿದಂತೆ ಹಲವು ಆರೋಗ್ಯ ಚಟುವಟಿಕೆಗಳಿಗೆ ನೀಡಲಾಗುತ್ತಿದ್ದ ಪ್ರೋತ್ಸಾಹಧನ ಸ್ಥಗಿತಗೊಂಡಿದೆ. ಪರಿಣಾಮ ಆಶಾ ಕಾರ್ಯಕರ್ತೆಯರು ಹೆಚ್ಚುವರಿ ಕೆಲಸ ಮಾಡಿದರೂ ಅದಕ್ಕೆ ತಕ್ಕ ಪ್ರತಿಫಲ ದೊರೆಯುತ್ತಿಲ್ಲ ಎಂದು ಹೇಳಿದರು.

ಈ ಹಿನ್ನೆಲೆಯಲ್ಲಿ ಪೋರ್ಟಲ್‌ನಿಂದ ತೆಗೆದುಹಾಕಲಾದ ಒಂಬತ್ತು ಚಟುವಟಿಕೆಗಳನ್ನು ಮುಂದುವರಿಸದಿರಲು ಆಶಾ ಕಾರ್ಯಕರ್ತೆಯರು ತೀರ್ಮಾನಿಸಿದ್ದಾರೆ. ಸರ್ಕಾರ ಈ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ಕೂಡಲೇ ಪರಿಹಾರ ಕಂಡುಕೊಳ್ಳಬೇಕು ಎಂದು ಅವರು ಒತ್ತಾಯಿಸಿದರು.

ಪ್ರತಿಭಟನೆಯ ಬಳಿಕ ಆಶಾ ಕಾರ್ಯಕರ್ತೆಯರು ತಮ್ಮ ಬೇಡಿಕೆಗಳ ಮನವಿ ಪತ್ರವನ್ನು ಜಿಲ್ಲಾ ಆರೋಗ್ಯಾಧಿಕಾರಿ ಎಲ್.ಆರ್. ಶಂಕರ್ ಅವರಿಗೆ ಸಲ್ಲಿಸಿದರು. ಮನವಿ ಸ್ವೀಕರಿಸಿ ಮಾತನಾಡಿದ ಅವರು, ಬಾಕಿ ಇರುವ ಎರಡು ತಿಂಗಳ ಪ್ರೋತ್ಸಾಹಧನವನ್ನು ಮುಂದಿನ ಎರಡು ತಿಂಗಳೊಳಗೆ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುವುದು. ಉಳಿದಿರುವ ಮೊತ್ತವನ್ನು ಸುಮಾರು 20 ದಿನಗಳೊಳಗೆ ಬಿಡುಗಡೆ ಮಾಡಲು ಪ್ರಯತ್ನಿಸಲಾಗುವುದು ಎಂದು ಭರವಸೆ ನೀಡಿದರು.

ಆದಾಗ್ಯೂ, ಭರವಸೆಗಳಿಗಷ್ಟೇ ಸೀಮಿತವಾಗದೆ ಬಾಕಿ ಹಣವನ್ನು ಶೀಘ್ರವೇ ಬಿಡುಗಡೆ ಮಾಡಬೇಕು ಎಂದು ಆಶಾ ಕಾರ್ಯಕರ್ತೆಯರು ಆಗ್ರಹಿಸಿದ್ದು, ಸಮಸ್ಯೆ ಬಗೆಹರಿಯದಿದ್ದರೆ ಮುಂದಿನ ದಿನಗಳಲ್ಲಿ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸುವ ಎಚ್ಚರಿಕೆಯನ್ನು ನೀಡಿದ್ದಾರೆ. ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ಆಶಾ ಕಾರ್ಯಕರ್ತೆಯರು, ಕೋವಿಡ್ ಸೇರಿದಂತೆ ಹಲವು ಸಂಕಷ್ಟದ ಸಂದರ್ಭಗಳಲ್ಲಿ ಜೀವದ ಹಂಗು ತೊರೆದು ಆರೋಗ್ಯ ಸೇವೆ ನೀಡಿದ್ದರೂ ತಮ್ಮ ಪರಿಶ್ರಮಕ್ಕೆ ತಕ್ಕ ಗೌರವ ಹಾಗೂ ಸೌಲಭ್ಯಗಳು ದೊರೆಯುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು. ಗ್ರಾಮೀಣ ಪ್ರದೇಶಗಳಲ್ಲಿ ಆರೋಗ್ಯ ಇಲಾಖೆಯ ವಿವಿಧ ಯೋಜನೆಗಳನ್ನು ಜನರಿಗೆ ತಲುಪಿಸುವಲ್ಲಿ ಆಶಾ ಕಾರ್ಯಕರ್ತೆಯರ ಪಾತ್ರ ಮಹತ್ವದ್ದಾಗಿದ್ದರೂ, ವೇತನ ಮತ್ತು ಪ್ರೋತ್ಸಾಹಧನಕ್ಕಾಗಿ ಪದೇ ಪದೇ ಹೋರಾಟ ನಡೆಸಬೇಕಾಗಿರುವುದು ದುಃಖಕರ ಸಂಗತಿ ಎಂದು ಅವರು ಅಭಿಪ್ರಾಯಪಟ್ಟರು.

# ವಿಶ್ವ ಯೋಗಾಸನ ಚಾಂಪಿಯನ್‌ಶಿಪ್ 2026: ಜಾಗತಿಕ ವೇದಿಕೆಯಲ್ಲಿ ಹೊಸ ಇತಿಹಾಸ ಸೃಷ್ಟಿಸಿದ ಭಾರತ

## “102 ಚಿನ್ನ ಸೇರಿ 114 ಪದಕ ಬಾಚಿದ ಭಾರತ; 79 ದೇಶಗಳ 522 ಕ್ರೀಡಾಪಟುಗಳ ನಡುವೆ ಭರ್ಜರಿ ಪ್ರಾಬಲ್ಯ”



**ಅಹಮದಾಬಾದ್:** ಭಾರತದ ಪ್ರಾಚೀನ ಯೋಗ ಪರಂಪರೆಯನ್ನು ಜಾಗತಿಕ ಕ್ರೀಡಾ ವೇದಿಕೆಗೆ ಕೊಂಡೊಯ್ಯುವ ಮಹತ್ವಾಕಾಂಕ್ಷಿ ಪ್ರಯತ್ನಕ್ಕೆ ಸಾಕ್ಷಿಯಾದ ಉದ್ಘಾಟನಾ ವಿಶ್ವ ಯೋಗಾಸನ ಚಾಂಪಿಯನ್‌ಶಿಪ್ ಭರ್ಜರಿ ಯಶಸ್ಸಿನೊಂದಿಗೆ ಮುಕ್ತಾಯಗೊಂಡಿದೆ. ಗುಜರಾತ್‌ನ ಅಹಮದಾಬಾದ್ ನಗರದ ಪ್ರತಿಷ್ಠಿತ ಇಕೆಎ ಅರೆನಾದಲ್ಲಿ ನಡೆದ ಈ ಐತಿಹಾಸಿಕ ಕೂಟದಲ್ಲಿ ಆತಿಥೇಯ ಭಾರತ ಸಂಪೂರ್ಣ ಮೇಲುಗೈ ಸಾಧಿಸಿ, 102 ಚಿನ್ನದ ಪದಕಗಳನ್ನು ಒಳಗೊಂಡಂತೆ ಒಟ್ಟು 114 ಪದಕಗಳನ್ನು ಗೆದ್ದು ಪದಕ ಪಟ್ಟಿಯಲ್ಲಿ ಅಗ್ರಸ್ಥಾನ ಪಡೆದುಕೊಂಡಿದೆ.

ವಿಶ್ವದ ವಿವಿಧ ರಾಷ್ಟ್ರಗಳಿಂದ ಆಗಮಿಸಿದ್ದ ನೂರಾರು ಕ್ರೀಡಾಪಟುಗಳ ನಡುವೆ ಭಾರತೀಯ ಸ್ಪರ್ಧಿಗಳು ಅತ್ಯುನ್ನತ ಮಟ್ಟದ ಪ್ರದರ್ಶನ ನೀಡಿದ್ದು, ಯೋಗಾಸನ ಕ್ರೀಡೆಯಲ್ಲಿ ಭಾರತದ ಬಲಿಷ್ಠ ಸ್ಥಾನಮಾನವನ್ನು ಮತ್ತೊಮ್ಮೆ ಜಗತ್ತಿಗೆ ಪರಿಚಯಿಸಿದ್ದಾರೆ. ಚಾಂಪಿಯನ್‌ಶಿಪ್‌ನ ವಿವಿಧ ವಿಭಾಗಗಳಲ್ಲಿ ಭಾರತೀಯ ಕ್ರೀಡಾಪಟುಗಳು ನಿರೀಕ್ಷೆಗೂ ಮೀರಿ ಸಾಧನೆ ಮಾಡಿ ಬಹುತೇಕ ಸ್ಪರ್ಧೆಗಳಲ್ಲಿ ಚಿನ್ನದ ಪದಕಗಳನ್ನು ತಮ್ಮದಾಗಿಸಿಕೊಂಡರು.

ಪದಕ ಪಟ್ಟಿಯಲ್ಲಿ ಜಪಾನ್ ಮೂರು ಚಿನ್ನ, ಮೂರು ಬೆಳ್ಳಿ ಹಾಗೂ ಐದು ಕಂಚಿನ ಪದಕಗಳೊಂದಿಗೆ ಎರಡನೇ ಸ್ಥಾನ ಪಡೆದುಕೊಂಡರೆ, ಅರ್ಜೆಂಟೀನಾ ಎರಡು ಚಿನ್ನ ಹಾಗೂ ಮೂರು ಬೆಳ್ಳಿ ಪದಕಗಳ ನೆರವಿನಿಂದ ಮೂರನೇ ಸ್ಥಾನ ಅಲಂಕರಿಸಿತು. ಅರ್ಜೆಂಟೀನಾದ ಕ್ರೀಡಾಪಟು ನಬೀಲಾ ಬರ್ರಾಜಾ ಅವರ ವೈಯಕ್ತಿಕ ಸಾಧನೆ ವಿಶೇಷ ಗಮನ ಸೆಳೆಯಿತು. ಹಲವು ವಿಭಾಗಗಳಲ್ಲಿ ಅದ್ಭುತ ಪ್ರದರ್ಶನ ನೀಡಿದ ಅವರು ತಮ್ಮ ದೇಶದ ಪದಕ ಸಾಧನೆಯಲ್ಲಿ ಪ್ರಮುಖ ಪಾತ್ರವಹಿಸಿದರು.

ಪಕ್ಕದ ರಾಷ್ಟ್ರ ನೇಪಾಳ ಕೂಡ ಗಮನಾರ್ಹ ಸಾಧನೆ ಮಾಡಿತು. ಒಂದು ಚಿನ್ನ, 36 ಬೆಳ್ಳಿ ಹಾಗೂ 15 ಕಂಚಿನ ಪದಕಗಳನ್ನು ಸೇರಿಸಿ ಒಟ್ಟು 52 ಪದಕಗಳನ್ನು ಗೆದ್ದ ನೇಪಾಳ ಪದಕ ಪಟ್ಟಿಯಲ್ಲಿ ಐದನೇ ಸ್ಥಾನ ಪಡೆಯುವ ಮೂಲಕ ತನ್ನ ಸಾಮರ್ಥ್ಯವನ್ನು ಸಾಬೀತುಪಡಿಸಿತು. ಉಜ್ಬೇಕಿಸ್ತಾನ್ ಕೂಡ ಒಂದು ಚಿನ್ನ, 13 ಬೆಳ್ಳಿ ಹಾಗೂ 11 ಕಂಚಿನ ಪದಕಗಳನ್ನು ಸೇರಿ ಒಟ್ಟು 25 ಪದಕಗಳನ್ನು ಗೆದ್ದು ತನ್ನ ಪ್ರಭಾವ ಮೂಡಿಸಿತು.

**79 ದೇಶಗಳಿಂದ 522 ಕ್ರೀಡಾಪಟುಗಳ ಭಾಗವಹಿಸುವಿಕೆ:** ಈ ವಿಶ್ವ ಚಾಂಪಿಯನ್‌ಶಿಪ್‌ಗೆ ವಿಶ್ವದ 79 ರಾಷ್ಟ್ರಗಳಿಂದ ಒಟ್ಟು 522 ಕ್ರೀಡಾಪಟುಗಳು ಆಗಮಿಸಿದ್ದರು. ಏಷ್ಯಾ, ಯುರೋಪ್, ಆಫ್ರಿಕಾ, ದಕ್ಷಿಣ ಅಮೆರಿಕ, ಉತ್ತರ ಅಮೆರಿಕ ಹಾಗೂ ಓಷಿಯಾನಿಯಾ ಖಂಡಗಳ ಪ್ರತಿನಿಧಿಗಳು ಭಾಗವಹಿಸಿದ್ದು, ಯೋಗಾಸನ ಕ್ರೀಡೆಯ ಜಾಗತಿಕ ವ್ಯಾಪ್ತಿಯನ್ನು ಮತ್ತಷ್ಟು ವಿಸ್ತರಿಸಿದೆ.

ಒಟ್ಟು 31 ರಾಷ್ಟ್ರಗಳ ಕ್ರೀಡಾಪಟುಗಳು ಕನಿಷ್ಠ ಒಂದು ಪದಕವನ್ನು ಗೆಲ್ಲುವಲ್ಲಿ ಯಶಸ್ವಿಯಾಗಿದ್ದಾರೆ. ಹತ್ತು ರಾಷ್ಟ್ರಗಳು ಚಿನ್ನದ ಪದಕವನ್ನು ತಮ್ಮದಾಗಿಸಿಕೊಂಡಿದ್ದು, ಯೋಗಾಸನವು ಭಾರತಕ್ಕೆ ಮಾತ್ರ ಸೀಮಿತವಾಗಿಲ್ಲದೆ ಜಾಗತಿಕ ಮಟ್ಟದಲ್ಲಿ ಸ್ಪರ್ಧಾತ್ಮಕ ಕ್ರೀಡೆಯಾಗಿ ಬೆಳೆಯುತ್ತಿರುವುದಕ್ಕೆ ಇದು ಸಾಕ್ಷಿಯಾಗಿದೆ.

**ಯೋಗಾಸನಕ್ಕೆ ಜಾಗತಿಕ ಮನ್ನಣೆ:** 2030ರ ಕಾಮನ್‌ವೆಲ್ತ್ ಕ್ರೀಡಾಕೂಟದ ಆತಿಥ್ಯ ವಹಿಸಲು ಸಜ್ಜಾಗಿರುವ ಅಹಮದಾಬಾದ್‌ನಲ್ಲಿ ನಡೆದ ಈ ಸ್ಪರ್ಧೆ ಯೋಗಾಸನದ ಭವಿಷ್ಯಕ್ಕೆ ಹೊಸ ದಿಕ್ಕು ತೋರಿಸಿದೆ. ವಿಶ್ವದಾದ್ಯಂತ ಯೋಗಕ್ಕೆ ಅಪಾರ ಜನಪ್ರಿಯತೆ ಇದ್ದರೂ, ಅದನ್ನು ಅಧಿಕೃತ ಸ್ಪರ್ಧಾತ್ಮಕ ಕ್ರೀಡೆಯಾಗಿ ಗುರುತಿಸುವ ಪ್ರಯತ್ನ ಇತ್ತೀಚಿನ ವರ್ಷಗಳಲ್ಲಿ ವೇಗ ಪಡೆದುಕೊಂಡಿದೆ.

ಈ ಚಾಂಪಿಯನ್‌ಶಿಪ್ ಮೂಲಕ ಯೋಗಾಸನವನ್ನು ಒಲಿಂಪಿಕ್ಸ್ ಹಾಗೂ ಇತರೆ ಬಹುರಾಷ್ಟ್ರೀಯ ಕ್ರೀಡಾಕೂಟಗಳತ್ತ ಕೊಂಡೊಯ್ಯುವ ಉದ್ದೇಶವೂ ವ್ಯಕ್ತವಾಗಿದೆ. ದೈಹಿಕ ಸಾಮರ್ಥ್ಯ, ಮಾನಸಿಕ ಏಕಾಗ್ರತೆ, ಸಮತೋಲನ, ಲವಚಿಕತೆ ಹಾಗೂ ಶಿಸ್ತುಗಳನ್ನು ಒಳಗೊಂಡಿರುವ ಯೋಗಾಸನವನ್ನು ಜಾಗತಿಕ ಕ್ರೀಡಾ ಸಮುದಾಯ ಗಂಭೀರವಾಗಿ ಪರಿಗಣಿಸಲು ಈ ಸ್ಪರ್ಧೆ ನೆರವಾಗಲಿದೆ ಎಂಬ ವಿಶ್ವಾಸ ವ್ಯಕ್ತವಾಗಿದೆ.

ಸರ್ಕಾರ ಮತ್ತು ವಿವಿಧ ಸಂಸ್ಥೆಗಳ ಬೆಂಬಲ: ಈ ವಿಶ್ವ ಚಾಂಪಿಯನ್‌ಶಿಪ್ ಆಯೋಜನೆಗೆ ಕೇಂದ್ರ ಯುವಜನ ವ್ಯವಹಾರಗಳು ಮತ್ತು ಕ್ರೀಡಾ ಸಚಿವಾಲಯ, ಆಯುಷ್ ಸಚಿವಾಲಯ, ಭಾರತೀಯ ಕ್ರೀಡಾ ಪ್ರಾಧಿಕಾರ (ಖಂಐ), ಗುಜರಾತ್ ಕ್ರೀಡಾ ಪ್ರಾಧಿಕಾರ, ಗುಜರಾತ್ ಪ್ರವಾಸೋದ್ಯಮ ಇಲಾಖೆ ಹಾಗೂ ಗುಜರಾತ್ ಯೋಗಾಸನ ಕ್ರೀಡಾ ಸಂಘಗಳ ಸಹಕಾರ ದೊರೆತಿತ್ತು. ವಿವಿಧ ಸಂಸ್ಥೆಗಳ ಸಮನ್ವಯದಿಂದ ಸ್ಪರ್ಧೆ ಅಂತರರಾಷ್ಟ್ರೀಯ ಮಟ್ಟದ ಗುಣಮಟ್ಟದಲ್ಲಿ ಆಯೋಜಿಸಲ್ಪಟ್ಟಿತು.

ಸ್ಪರ್ಧಾ ಸ್ಥಳದಲ್ಲಿ ಅತ್ಯಾಧುನಿಕ ಸೌಲಭ್ಯಗಳನ್ನು ಕಲ್ಪಿಸಲಾಗಿದ್ದು, ಕ್ರೀಡಾಪಟುಗಳು ಹಾಗೂ ತರಬೇತುದಾರರಿಗೆ ಅಗತ್ಯವಿರುವ ಎಲ್ಲ ವ್ಯವಸ್ಥೆಗಳನ್ನು ಒದಗಿಸಲಾಗಿತ್ತು. ವಿದೇಶಿ ಸ್ಪರ್ಧಿಗಳು ಹಾಗೂ ಅಧಿಕಾರಿಗಳು ಸಹ ಆಯೋಜನೆಯ ಗುಣಮಟ್ಟವನ್ನು ಮೆಚ್ಚುಗೆ ವ್ಯಕ್ತಪಡಿಸಿದರು.

**122 ಸದಸ್ಯರ ಭಾರತೀಯ ತಂಡ:** ಆತಿಥೇಯ ಭಾರತ 122 ಸದಸ್ಯರ ಬಲಿಷ್ಠ ತಂಡವನ್ನು ಕಣಕ್ಕಿಳಿಸಿತ್ತು. ದೇಶದ ವಿವಿಧ ರಾಜ್ಯಗಳಿಂದ ಆಯ್ಕೆಯಾಗಿದ್ದ ಪ್ರತಿಭಾವಂತ ಕ್ರೀಡಾಪಟುಗಳು ಹಲವು ತಿಂಗಳುಗಳ ಕಾಲ ವಿಶೇಷ ತರಬೇತಿ ಪಡೆದು ಸ್ಪರ್ಧೆಗೆ ಸಜ್ಜಾಗಿದ್ದರು.

ಸಬ್-ಜೂನಿಯರ್ (10-14 ವರ್ಷ), ಜೂನಿಯರ್ (14-18 ವರ್ಷ), ಸೀನಿಯರ್ (18-28 ವರ್ಷ), ಸೀನಿಯರ್ ಎ (28-35 ವರ್ಷ), ಸೀನಿಯರ್ ಬಿ (35-45 ವರ್ಷ) ಹಾಗೂ ಸೀನಿಯರ್ ಸಿ (45-55 ವರ್ಷ) ವಿಭಾಗಗಳಲ್ಲಿ ಸ್ಪರ್ಧೆಗಳು ನಡೆದವು. ಪ್ರತಿಯೊಂದು ವಿಭಾಗದಲ್ಲೂ ವೈಯಕ್ತಿಕ ಮತ್ತು ಜೋಡಿ ವಿಭಾಗಗಳ ಸ್ಪರ್ಧೆಗಳು ಆಯೋಜಿಸಲಾಗಿದ್ದು, ಕ್ರೀಡಾಪಟುಗಳು ತಮ್ಮ ದೈಹಿಕ ಕೌಶಲ್ಯ ಮತ್ತು ಏಕಾಗ್ರತೆಯನ್ನು ಪ್ರದರ್ಶಿಸಿದರು.

**ಸ್ವಾಮಿ ರಾಮದೇವ್ ಸಂದೇಶ:** ವಿಶ್ವ ಯೋಗಾಸನ ಸಂಸ್ಥೆಯ ಅಧ್ಯಕ್ಷ ಯೋಗಋಷಿ ಸ್ವಾಮಿ ರಾಮದೇವ್ ಅವರು ವೀಡಿಯೊ ಸಂದೇಶದ ಮೂಲಕ ಕ್ರೀಡಾಪಟುಗಳನ್ನು ಉದ್ದೇಶಿಸಿ ಮಾತನಾಡಿದರು. “ವಿಶ್ವ ಯೋಗಾಸನ ಚಾಂಪಿಯನ್‌ಶಿಪ್ ಕೇವಲ ಒಂದು ಸ್ಪರ್ಧೆಯಲ್ಲ. ಇದು ಜಾಗತಿಕ ಚಳುವಳಿಯ ಆರಂಭವಾಗಿದೆ. ಯೋಗವು ಕೇವಲ ಕ್ರೀಡೆಯಲ್ಲ, ಅದು ಆರೋಗ್ಯ, ಸಾಮರಸ್ಯ, ಶಾಂತಿ ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸುವ ಜೀವನ ಪದ್ಧತಿಯಾಗಿದೆ” ಎಂದು ಅವರು ಹೇಳಿದರು.

ಯೋಗದ ಮೂಲಕ ವಿಶ್ವದ ಜನರನ್ನು ಒಂದೇ ವೇದಿಕೆಯಲ್ಲಿ ಒಗ್ಗೂಡಿಸುವ ಶಕ್ತಿ ಇದೆ ಎಂದು ಅವರು ಅಭಿಪ್ರಾಯಪಟ್ಟರು. ಯೋಗಾಸನವನ್ನು ವಿಶ್ವದ ಪ್ರತಿಯೊಂದು ದೇಶದಲ್ಲೂ ಜನಪ್ರಿಯಗೊಳಿಸುವ ಗುರಿ ಹೊಂದಿರುವುದಾಗಿ ತಿಳಿಸಿದರು.

**ಭಾರತೀಯ ಕ್ರೀಡಾಪಟುಗಳ ಪ್ರಾಬಲ್ಯ:** ಆರ್ಟಿಸ್ಟಿಕ್ ಪೇರ್ ಸಬ್-ಜೂನಿಯರ್ ಮಹಿಳಾ ವಿಭಾಗದಲ್ಲಿ ಭಾರತದ ಇಶಿಕಾ ಗುಜ್ಜೈತ್ ಮತ್ತು ಇಶಾನ್ವಿ 90.89 ಅಂಕಗಳೊಂದಿಗೆ ಚಿನ್ನದ ಪದಕ ಗೆದ್ದು ದೇಶಕ್ಕೆ ಕೀರ್ತಿ ತಂದರು. ಜಾಂಬಿಯಾದ ನಿಯಾ ವಿಜಯ್‌ವರ್ಗೀಯ ಮತ್ತು ಆರೋಹಿ ಲೋಖಂಡೆ ಬೆಳ್ಳಿ ಪದಕ ಪಡೆದರೆ, ಜಪಾನ್‌ನ ರೆಂಕಾ ಅಯೋಕಿ ಮತ್ತು ಇಚಿಕಾ ಶಿಮಿಜು ಕಂಚಿನ ಪದಕವನ್ನು ತಮ್ಮದಾಗಿಸಿಕೊಂಡರು.

ಜೂನಿಯರ್ ಮಹಿಳೆಯರ ವಿಭಾಗದಲ್ಲೂ ಭಾರತ ಮೇಲುಗೈ ಸಾಧಿಸಿತು. ಭಾರತದ ದೀಪಾ ಲೋಧಿ ಮತ್ತು ಸಿಮಾ ನಿಯೋಪಾನೆ 90.42 ಅಂಕಗಳೊಂದಿಗೆ ಚಿನ್ನದ ಪದಕ ಗೆದ್ದರು. ನೇಪಾಳದ ಸ್ವೀಕ್ಷ್ಯ ಥಾಪಾ ಮತ್ತು ಪ್ರಜ್ಞಾ ಗೌತಮ್ ಬೆಳ್ಳಿ ಪದಕ ಪಡೆದುಕೊಂಡರೆ, ಜಾಂಬಿಯಾದ ಟಸಿಲಾ ಬ್ಲೆಸ್ಸಿಂಗ್ಸ್ ಫಿರಿ ಹಾಗೂ ಡೆಬೊರಾ ಕಂಚಿನ ಪದಕಕ್ಕೆ ತೃಪ್ತಿಪಟ್ಟರು.

**ಯೋಗಾಸನ ಕ್ರೀಡೆಯ ಭವಿಷ್ಯಕ್ಕೆ ಹೊಸ ದಿಕ್ಕು:** ಉದ್ಘಾಟನಾ ವಿಶ್ವ ಯೋಗಾಸನ ಚಾಂಪಿಯನ್‌ಶಿಪ್ ಯಶಸ್ವಿಯಾಗಿ ಮುಕ್ತಾಯಗೊಂಡಿರುವುದು ಯೋಗಾಸನ ಕ್ರೀಡೆಯ ಭವಿಷ್ಯಕ್ಕೆ ಹೊಸ ಆಶಾಭಾವನೆ ಮೂಡಿಸಿದೆ. ಭಾರತವು ಪದಕ ಪಟ್ಟಿಯಲ್ಲಿ ಭರ್ಜರಿ ಮೇಲುಗೈ ಸಾಧಿಸಿರುವುದರ ಜೊತೆಗೆ, ವಿಶ್ವದ ಹಲವು ರಾಷ್ಟ್ರಗಳ ಭಾಗವಹಿಸುವಿಕೆ ಯೋಗಾಸನದ ಜಾಗತಿಕ ಬೆಳವಣಿಗೆಯ ಸ್ಪಷ್ಟ ಸಂಕೇತವಾಗಿದೆ.

ಈ ಚಾಂಪಿಯನ್‌ಶಿಪ್ ಕೇವಲ ಪದಕಗಳ ಸ್ಪರ್ಧೆಯಾಗಿ ಉಳಿಯದೆ, ಯೋಗವನ್ನು ವಿಶ್ವದಾದ್ಯಂತ ಸ್ಪರ್ಧಾತ್ಮಕ ಕ್ರೀಡೆಯಾಗಿ ಬೆಳೆಸುವ ಚಳುವಳಿಗೆ ಭದ್ರ ಅಡಿಪಾಯ ಹಾಕಿದೆ. ಮುಂದಿನ ದಿನಗಳಲ್ಲಿ ಯೋಗಾಸನಕ್ಕೆ ಒಲಿಂಪಿಕ್ ಹಾಗೂ ಇತರೆ ಅಂತರರಾಷ್ಟ್ರೀಯ ಕ್ರೀಡಾಕೂಟಗಳಲ್ಲಿ ಸ್ಥಾನ ದೊರೆಯುವ ನಿರೀಕ್ಷೆಯೂ ಹೆಚ್ಚಾಗಿದೆ.

# ಗಾಯದಿಂದ ಚೇತರಿಸಿಕೊಂಡ ರೋಹಿತ್,ಪಾಂಡ್ಯ; ತಂಡ ಸೇರ್ಪಡೆಗೆ ಗ್ರೀನ್ ಸಿಗ್ನಲ್

**ಮುಂಬೈ:** ಭಾರತ ಕ್ರಿಕೆಟ್ ತಂಡದ ನಾಯಕ ರೋಹಿತ್ ಶರ್ಮಾ ಹಾಗೂ ಸ್ಟಾರ್ ಆಲ್‌ರೌಂಡರ್ ಹಾರ್ದಿಕ್ ಪಾಂಡ್ಯ ಫಿಟ್ನೆಸ್ ಪರೀಕ್ಷೆಯಲ್ಲಿ ಉತ್ತೀರ್ಣರಾಗಿದ್ದು, ಅಫ್ಘಾನಿಸ್ತಾನ ವಿರುದ್ಧದ ಮುಂಬರುವ ಮೂರು ಪಂದ್ಯಗಳ ಏಕದಿನ ಸರಣಿಗೆ ತಂಡಕ್ಕೆ ಮರಳಲು ಸಜ್ಜಾಗಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಗಾಯದ ಸಮಸ್ಯೆಯಿಂದ ಕೆಲಕಾಲ ತಂಡದಿಂದ ದೂರ ಉಳಿದಿದ್ದ ಇಬ್ಬರೂ ಆಟಗಾರರು ಇದೀಗ ಸಂಪೂರ್ಣ ಫಿಟ್ ಆಗಿದ್ದು, ಬಿಸಿಸಿಐ ಸೆಂಟರ್ ಆಫ್ ಎಕ್ಸಲೆನ್ಸ್ (ಅಿಂಇ) ನಡೆಸಿದ ಫಿಟ್ನೆಸ್ ಪರೀಕ್ಷೆಯಲ್ಲಿ ಯಶಸ್ವಿಯಾಗಿ ಉತ್ತೀರ್ಣರಾಗಿದ್ದಾರೆ. ಸರಣಿ ಆರಂಭಕ್ಕೂ ಮುನ್ನವೇ ರಾಷ್ಟ್ರೀಯ ತಂಡವನ್ನು ಸೇರಿಕೊಳ್ಳುವ ನಿರೀಕ್ಷೆಯಿದೆ.

ರೋಹಿತ್ ಶರ್ಮಾ ದೀರ್ಘಕಾಲದಿಂದ ಮಂಡಿರಜ್ಜು (ಹ್ಯಾಮ್‌ಸ್ಟಿಂಗ್) ಸಮಸ್ಯೆಯಿಂದ ಬಳಲು ತ್ತಿದ್ದು, ವೈದ್ಯಕೀಯ ತಂಡದ ಮೇಲ್ವಿಚಾರಣೆಯಲ್ಲಿ ಪುನಶ್ಚೇತನ ತರಬೇತಿ ಪಡೆಯುತ್ತಿದ್ದರು. ಮತ್ತೊಂದೆಡೆ, ಹಾರ್ದಿಕ್ ಪಾಂಡ್ಯ ಬೆನ್ನು ಸೆಳೆತದ ಸಮಸ್ಯೆಯಿಂದಾಗಿ ಐಪಿಎಲ್ 2026ರ ಕೊನೆಯ ಹಂತದ ಕೆಲವು ಪಂದ್ಯಗಳಿಂದ ಹೊರಗುಳಿ ದಿದ್ದರು. ಇದೀಗ ಇಬ್ಬರೂ ಸಂಪೂರ್ಣ ಚೇತರಿಸಿಕೊಂಡಿರುವುದು ಭಾರತೀಯ ತಂಡಕ್ಕೆ ದೊಡ್ಡ ಬಲವಾಗಿ ಪರಿಣಮಿಸಿದೆ.

ಈ ಹಿಂದೆ ಅಫ್ಘಾನಿಸ್ತಾನ ವಿರುದ್ಧದ ಸರಣಿಯಲ್ಲಿ ರೋಹಿತ್ ಹಾಗೂ ಹಾರ್ದಿಕ್ ಭಾಗವಹಿಸುವುದು ಅವರ ಫಿಟ್ನೆಸ್ ವರದಿಯನ್ನು ಅವಲಂಬಿಸಿರುತ್ತದೆ ಎಂದು ವರದಿಯಾಗಿತ್ತು. ಆದರೆ ಈಗ ಇಬ್ಬರೂ ಅಗತ್ಯ ಪರೀಕ್ಷೆಗಳನ್ನು ಯಶಸ್ವಿಯಾಗಿ ಪೂರೈಸಿರುವ ಹಿನ್ನೆಲೆಯಲ್ಲಿ ಆಯ್ಕೆದಾರರು ಮತ್ತು ತಂಡದ ನಿರ್ವಹಣಾ ಮಂಡಳಿಗೆ ನಿರಾಳತೆ ಸಿಕ್ಕಿದೆ.

ಅಫ್ಘಾನಿಸ್ತಾನ ವಿರುದ್ಧದ ಸರಣಿ ಭಾರತಕ್ಕೆ ಮಹತ್ವದ್ದಾಗಿದ್ದು, ಮುಂಬರುವ ಅಂತರರಾಷ್ಟ್ರೀಯ ಟೂರ್ನಿಗಳಿಗೆ ಸಿದ್ಧತೆಯ ಭಾಗವಾಗಿಯೂ ಪರಿಗಣಿಸಲಾಗಿದೆ. ತಂಡದ ಇಬ್ಬರು ಅನುಭವಿ ಆಟಗಾರರ ಮರಳಿಕೆಯಿಂದ ಬ್ಯಾಟಿಂಗ್ ಹಾಗೂ ಆಲ್‌ರೌಂಡ್ ವಿಭಾಗಗಳಿಗೆ ಹೆಚ್ಚಿನ ಬಲ ದೊರೆಯಲಿದೆ.

ವಿಶೇಷವಾಗಿ ನಾಯಕ ರೋಹಿತ್ ಶರ್ಮಾ ಅವರ ಅನುಭವ ಮತ್ತು ಹಾರ್ದಿಕ್ ಪಾಂಡ್ಯ ಅವರ ಸಮತೋಲಿತ ಪ್ರದರ್ಶನ ತಂಡಕ್ಕೆ ಪ್ರಮುಖ ಆಧಾರವಾಗಿದ್ದು, ಇವರಿಬ್ಬರ ವಾಪಸಾತಿ ಅಭಿಮಾನಿಗಳಲ್ಲೂ ಉತ್ಸಾಹ ಮೂಡಿಸಿದೆ.

ಶೀಘ್ರದಲ್ಲೇ ಅವರು ತಂಡದ ತರಬೇತಿ ಶಿಬಿರವನ್ನು ಸೇರಿಕೊಂಡು ಸರಣಿಗೆ ಸಿದ್ಧತೆ ಆರಂಭಿಸಲಿದ್ದಾರೆ ಎಂದು ಮೂಲಗಳು ತಿಳಿಸಿವೆ. ಮುಂದಿನ ಪ್ರಮುಖ ಅಂತರರಾಷ್ಟ್ರೀಯ ಟೂರ್ನಿಗಳನ್ನು ಗಮನದಲ್ಲಿ ಟ್ಟುಕೊಂಡು, ಅಫ್ಘಾನಿಸ್ತಾನ ವಿರುದ್ಧದ ಸರಣಿ ಭಾರತ ತಂಡಕ್ಕೆ ಮಹತ್ವದ್ದಾಗಿದೆ. ರೋಹಿತ್ ಅವರ ಅನುಭವ ಹಾಗೂ ಹಾರ್ದಿಕ್ ಅವರ ಆಲ್‌ರೌಂಡ್ ಪ್ರದರ್ಶನ ತಂಡದ ಸಮತೋಲನ ಹೆಚ್ಚಿಸಲಿದ್ದು, ಸರಣಿಯಲ್ಲಿ ಭಾರತ ಬಲಿಷ್ಠ ಪ್ರದರ್ಶನ ನೀಡುವ ನಿರೀಕ್ಷೆ ವ್ಯಕ್ತವಾಗಿದೆ.

# ಬಾಸ್ ಸಿನಿಮಾಗೆ ಕೋರ್ಟ್ ಗ್ರೀನ್ ಸಿಗ್ನಲ್..ತಡೆಯಾಜ್ಞೆ ರದ್ದು..!


**ಬೆಂಗಳೂರು:** ಸ್ಯಾಂಡಲ್‌ವುಡ್‌ನಲ್ಲಿ ಕಳೆದ ಕೆಲವು ದಿನಗಳಿಂದ ಭಾರೀ ಚರ್ಚೆಗೆ ಗ್ರಾಸವಾಗಿದ್ದ ‘ಬಾಸ್’ ಚಿತ್ರದ ವಿವಾದ ಇದೀಗ ಹೊಸ ತಿರುವು ಪಡೆದುಕೊಂಡಿದೆ. ಚಿತ್ರದ ಬಿಡುಗಡೆಗೆ ತಡೆಯಾಜ್ಞೆ ಕೋರಿ ಸಲ್ಲಿಸಲಾಗಿದ್ದ ಅರ್ಜಿಯನ್ನು ನಗರ ಸಿವಿಲ್ ನ್ಯಾಯಾಲಯ ರದ್ದುಗೊಳಿಸಿದ್ದು, ಚಿತ್ರತಂಡಕ್ಕೆ ಮಹತ್ವದ ಕಾನೂನು ಜಯ ದೊರೆತಿದೆ. ಇದರೊಂದಿಗೆ ಸೆನ್ಸಾರ್ ಪ್ರಕ್ರಿಯೆಗೂ ಮುನ್ನವೇ ಸಂಕಷ್ಟಕ್ಕೆ ಸಿಲುಕಿದ್ದ ಚಿತ್ರಕ್ಕೆ ಕೋರ್ಟ್ ಗ್ರೀನ್ ಸಿಗ್ನಲ್ ನೀಡಿದಂತಾಗಿದೆ.

ಚಿತ್ರದುರ್ಗದ ರೇಣುಕಾಸ್ವಾಮಿ ಹತ್ಯೆ ಪ್ರಕರಣ ಹಾಗೂ ನಟ ದರ್ಶನ್ ಅವರ ವೈಯಕ್ತಿಕ ಜೀವನಕ್ಕೆ ಸಂಬಂಧಿಸಿದ ಕೆಲವು ಘಟನೆಗಳನ್ನು ಆಧರಿಸಿ ಚಿತ್ರ ನಿರ್ಮಿಸಲಾಗಿದೆ ಎಂಬ ಆರೋಪಗಳು ಕೇಳಿಬಂದಿದ್ದವು. ಚಿತ್ರದ ಟೀಸರ್ ಬಿಡುಗಡೆಯಾದ ಬಳಿಕ ಸಾಮಾಜಿಕ ಜಾಲತಾಣಗಳಲ್ಲಿ ಭಾರೀ ಚರ್ಚೆ ಆರಂಭವಾಗಿದ್ದು, ಚಿತ್ರದಲ್ಲಿನ ಕೆಲವು ದೃಶ್ಯಗಳು ಮತ್ತು ಪಾತ್ರಗಳು ನೈಜ ಘಟನೆಗಳನ್ನು ಹೋಲುತ್ತಿವೆ ಎಂಬ ಮಾತುಗಳು ಗಾಂಧಿನಗರದಲ್ಲಿ ಹರಿದಾಡಿದ್ದವು. ಇದೇ ಹಿನ್ನೆಲೆಯಲ್ಲಿ ನಟ ದರ್ಶನ್ ಹಾಗೂ ಅವರ ಪತ್ನಿ ವಿಜಯಲಕ್ಷ್ಮಿ ಅವರು ನ್ಯಾಯಾಲಯದ ಮೆಟ್ಟಿಲೇರಿದ್ದರು.

ಚಿತ್ರದಲ್ಲಿನ ಕೆಲವು ಪಾತ್ರಗಳು ಹಾಗೂ ಘಟನೆಗಳು ತಮ್ಮ ಕುಟುಂಬ ಮತ್ತು ವೈಯಕ್ತಿಕ ಬದುಕಿಗೆ ಸಂಬಂಧಿಸಿದಂತೆ ಬಿಂಬಿತವಾಗುತ್ತಿವೆ. ಇದರಿಂದ ಮಾನಹಾನಿಯಾಗುವ ಸಾಧ್ಯತೆ ಇದೆ ಎಂದು ಅರ್ಜಿಯಲ್ಲಿ ಉಲ್ಲೇಖಿಸಲಾಗಿತ್ತು. ಈ ಹಿನ್ನೆಲೆಯಲ್ಲಿ ಚಿತ್ರದ ಬಿಡುಗಡೆಗೆ ತಾತ್ಕಾಲಿಕ ತಡೆಯಾಜ್ಞೆ ನೀಡುವಂತೆ ಮನವಿ ಮಾಡಲಾಗಿತ್ತು. ಪ್ರಕರಣ ವಿಚಾರಣೆ ನಡೆಸಿದ ನ್ಯಾಯಾಲಯ ಆರಂಭದಲ್ಲಿ ಕೆಲವು ನಿರ್ಬಂಧಗಳನ್ನು ವಿಧಿಸಿದ್ದರೂ, ನಂತರ ಎರಡೂ ಕಡೆಯ ವಾದಗಳನ್ನು ಆಲಿಸಿದ ಬಳಿಕ ತಡೆಯಾಜ್ಞೆಯನ್ನು ರದ್ದುಗೊಳಿಸಿದೆ.

ಚಿತ್ರತಂಡದ ಪರವಾಗಿ ಹಿರಿಯ ವಕೀಲ ವಿವೇಕ್ ಸುಬ್ಬಾರೆಡ್ಡಿ ವಾದ ಮಂಡಿಸಿದ್ದು, ‘ಬಾಸ್’ ಚಿತ್ರ ಸಂಪೂರ್ಣ ಕಾಲ್ಪನಿಕ ಕಥೆಯನ್ನು ಆಧರಿಸಿದೆ. ಯಾವುದೇ ವ್ಯಕ್ತಿಯ ಜೀವನಚರಿತ್ರೆ ಅಥವಾ ನಿರ್ದಿಷ್ಟ ಪ್ರಕರಣವನ್ನು ಉದ್ದೇಶಪೂರ್ವಕವಾಗಿ ಆಧರಿಸಿ ನಿರ್ಮಿಸಲಾಗಿಲ್ಲ ಎಂದು ನ್ಯಾಯಾಲಯದ ಗಮನಕ್ಕೆ ತಂದರು. ಚಿತ್ರ ಬಿಡುಗಡೆಯ ಮುನ್ನವೇ ಅದರ ಬಗ್ಗೆ ಪೂರ್ವಗ್ರಹಪೀಡಿತ ಆರೋಪಗಳನ್ನು ಮಾಡುವುದು ಸರಿಯಲ್ಲ ಎಂಬ ವಾದವನ್ನೂ ಮಂಡಿಸಲಾಯಿತು.

ನ್ಯಾಯಾಲಯದ ತೀರ್ಪಿನಿಂದ ಚಿತ್ರತಂಡಕ್ಕೆ ಭಾರೀ ನಿರಾಳತೆ ದೊರೆತಿದೆ. ಕೋಟ್ಯಂತರ ರೂಪಾಯಿ ವೆಚ್ಚದಲ್ಲಿ ನಿರ್ಮಾಣಗೊಂಡಿರುವ ಈ ಚಿತ್ರದ ಭವಿಷ್ಯದ ಬಗ್ಗೆ ನಿರ್ಮಾಪಕರು ಹಾಗೂ ವಿತರಕರು ಆತಂಕದಲ್ಲಿದ್ದರು. ಆದರೆ ಈಗ ಕೋರ್ಟ್‌ನಿಂದ ಅನುಕೂಲಕರ ತೀರ್ಪು ಬಂದಿರುವುದರಿಂದ ಚಿತ್ರದ ಬಿಡುಗಡೆಗೆ ಇದ್ದ ಪ್ರಮುಖ ಕಾನೂನು ಅಡೆತಡೆ ದೂರವಾದಂತಾಗಿದೆ.



ಈ ಹಿಂದೆ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ್ದ ನಟ ಹಾಗೂ ನಿರ್ಮಾಪಕ ತನುಶ್ ಶಿವಣ್ಣ, ಸಿನಿಮಾ ನೋಡದೇ ಕೇವಲ ಊಹಾಪೋಹಗಳ ಆಧಾರದ ಮೇಲೆ ತಡೆಯಾಜ್ಞೆ ತರುವ ಪ್ರಯತ್ನ ಸರಿಯಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದರು. “ನಾವು ಸಿನಿಮಾ ತೋರಿಸಲು ಸಿದ್ಧರಿದ್ದೇವೆ. ಚಿತ್ರವನ್ನು ನೋಡಿ ನಂತರ ಅಭಿಪ್ರಾಯ ವ್ಯಕ್ತಪಡಿಸಲಿ. ದರ್ಶನ್ ಅವರ ಮೇಲೆ ನಮಗೆ ಅಪಾರ ಗೌರವವಿದೆ. ಇದು ಸಂಪೂರ್ಣ ಕಾಲ್ಪನಿಕ ಕಥೆ” ಎಂದು ಅವರು ಸ್ಪಷ್ಟಪಡಿಸಿದ್ದರು.

ಇದೀಗ ನ್ಯಾಯಾಲಯದ ತೀರ್ಪಿನ ಬಳಿಕ ‘ಬಾಸ್’ ಚಿತ್ರದ ಟೀಸರ್ ಮತ್ತೊಮ್ಮೆ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ. ಟೀಸರ್‌ನಲ್ಲಿ ಕಾಣಿಸಿಕೊಂಡಿರುವ ಶೆಡ್, ಲಾರಿ, ರಕ್ತದ ಕಲೆಗಳು, ತನಿಖಾ ದೃಶ್ಯಗಳು ಹಾಗೂ ಅನಾಥ ಶವದ ಸನ್ನಿವೇಶಗಳು ಕೆಲವರಿಗೆ ರೇಣುಕಾಸ್ವಾಮಿ ಪ್ರಕರಣವನ್ನು ನೆನಪಿಸುತ್ತಿವೆ ಎಂಬ ಚರ್ಚೆಗಳು ಮತ್ತೆ ಆರಂಭವಾಗಿವೆ. ಆದರೆ ಚಿತ್ರತಂಡ ಮಾತ್ರ ಇವು ಕೇವಲ ಕಥೆಯ ಭಾಗವಾಗಿದ್ದು, ಯಾವುದೇ ನೈಜ ವ್ಯಕ್ತಿ ಅಥವಾ ಘಟನೆಯೊಂದಿಗೆ ಸಂಬಂಧ ಕಲ್ಪಿಸಬಾರದು ಎಂದು ಹೇಳುತ್ತಿದೆ.

ಗಾಂಧಿನಗರದಲ್ಲಿ ಹರಿದಾಡುತ್ತಿರುವ ಗಾಸಿಪ್‌ಗಳ ಪ್ರಕಾರ, ಚಿತ್ರದಲ್ಲಿನ ಕೆಲವು ಪಾತ್ರಗಳಿಗೆ ನೈಜ ವ್ಯಕ್ತಿಗಳ ಹೆಸರಿನ ಬದಲು ಬದಲಾದ ಹೆಸರುಗಳನ್ನು ಬಳಸಲಾಗಿದೆ ಎಂಬ ಮಾತುಗಳಿವೆ. ಪವಿತ್ರಾ ಗೌಡ ಪಾತ್ರಕ್ಕೆ ‘ಶೀಲಾ ಗೌಡ’, ವಿಜಯಲಕ್ಷ್ಮಿ ಪಾತ್ರಕ್ಕೆ ‘ಲಕ್ಷ್ಮಿ’ ಹಾಗೂ ರೇಣುಕಾಸ್ವಾಮಿ ಪಾತ್ರಕ್ಕೆ ‘ಶಿವಸ್ವಾಮಿ’ ಎಂಬ ಹೆಸರುಗಳನ್ನು ನೀಡಲಾಗಿದೆ ಎಂಬ ಚರ್ಚೆಗಳು ನಡೆಯುತ್ತಿವೆ. ಆದರೆ ಈ ಕುರಿತು ಚಿತ್ರತಂಡದಿಂದ ಯಾವುದೇ ಅಧಿಕೃತ ಸ್ಪಷ್ಟನೆ ಹೊರಬಂದಿಲ್ಲ.

ಚಿತ್ರದ ವಿರುದ್ಧ ಕಾನೂನು ಹೋರಾಟ ನಡೆಯುತ್ತಿದ್ದರೂ, ನಿರ್ಮಾಪಕರು ಮುನ್ನೆಚ್ಚರಿಕೆಯಾಗಿ ಕೇವಿಯಟ್ ಅರ್ಜಿ ಸಲ್ಲಿಸಿ ತಮ್ಮ ಪರ ಕಾನೂನು ಸಿದ್ಧತೆ ಮಾಡಿಕೊಂಡಿದ್ದರು ಎನ್ನಲಾಗಿದೆ. ಇದರಿಂದ ಯಾವುದೇ ಏಕಪಕ್ಷೀಯ ಆದೇಶ ಹೊರಬರದಂತೆ ನೋಡಿಕೊಳ್ಳಲಾಗಿತ್ತು. ಇದೀಗ ನ್ಯಾಯಾಲಯದ ತೀರ್ಪು ಚಿತ್ರತಂಡದ ಪರ ಬಂದಿರುವುದರಿಂದ ನಿರ್ಮಾಪಕರು ಹಾಗೂ ವಿತರಕರಲ್ಲಿ ಹೊಸ ಉತ್ಸಾಹ ಮೂಡಿದೆ.

ಸ್ಯಾಂಡಲ್‌ವುಡ್‌ನಲ್ಲಿ ಈಗಾಗಲೇ ಭಾರೀ ಕುತೂಹಲ ಹುಟ್ಟಿಸಿರುವ ‘ಬಾಸ್’ ಚಿತ್ರ ಬಿಡುಗಡೆಯ ಬಳಿಕ ಇನ್ನಷ್ಟು ಚರ್ಚೆಗೆ ಗ್ರಾಸವಾಗುವ ಸಾಧ್ಯತೆ ಇದೆ. ಒಂದೆಡೆ ಕೋರ್ಟ್‌ನಿಂದ ಗ್ರೀನ್ ಸಿಗ್ನಲ್ ಸಿಕ್ಕಿರುವುದು, ಮತ್ತೊಂದೆಡೆ ಚಿತ್ರದ ಕಥಾವಸ್ತು ಕುರಿತ ಊಹಾಪೋಹಗಳು ಹೆಚ್ಚುತ್ತಿರುವುದು ಸಿನಿರಸಿಕರ ಕುತೂಹಲವನ್ನು ಮತ್ತಷ್ಟು ಹೆಚ್ಚಿಸಿದೆ. ಸದ್ಯಕ್ಕೆ ಎಲ್ಲಾ ಕಾನೂನು ಅಡೆತಡೆಗಳನ್ನು ದಾಟಿರುವ ‘ಬಾಸ್’ ಚಿತ್ರ ಬೆಳ್ಳಿತೆರೆಗೆ ಅಪ್ಪಳಿಸಲು ಸಜ್ಜಾಗಿದ್ದು, ಬಿಡುಗಡೆಯ ಬಳಿಕ ಬಾಕ್ಸ್ ಆಫೀಸ್‌ನಲ್ಲಿ ಯಾವ ರೀತಿಯ ಪ್ರತಿಕ್ರಿಯೆ ಪಡೆಯಲಿದೆ ಎಂಬುದನ್ನು ಕಾದುನೋಡಬೇಕಾಗಿದೆ.

# ವಂಚನೆ ಪ್ರಕರಣ: ಸನ್ನಿ ಲಿಯೋನಿಗೆ ನೋಟೀಸ್ ನೀಡಿದ ಕರ್ನಾಟಕ ಸಿಐಡಿ ಪೊಲೀಸರು

**ಬೆಂಗಳೂರು:** ಬಹುಕೋಟಿ ರೂಪಾಯಿ ವಂಚನೆ ಆರೋಪ ಎದುರಿಸುತ್ತಿರುವ ಬೆಳಗಾವಿಯ ‘ಶಿವಂ ಅಸೋಸಿಯೇಟ್ಸ್’ ಪ್ರಕರಣದ ತನಿಖೆ ದಿನದಿಂದ ದಿನಕ್ಕೆ ಹೊಸ ತಿರುವುಗಳನ್ನು ಪಡೆದುಕೊಳ್ಳುತ್ತಿದೆ. ಸಾವಿರಾರು ಹೂಡಿಕೆದಾರರಿಂದ ಕೋಟ್ಯಂತರ ರೂಪಾಯಿ ಸಂಗ್ರಹಿಸಿ ವಂಚನೆ ಎಸಗಿರುವ ಆರೋಪದಡಿ ಬಂಧನಕ್ಕೊಳಗಾಗಿರುವ ಕಂಪನಿಯ ಮಾಲೀಕ ಶಿವಾನಂದ ನೀಲಣ್ಣವರ ವಿರುದ್ಧದ ತನಿಖೆ ವೇಳೆ ಹಲವು ಆಘಾತಕಾರಿ ಮಾಹಿತಿಗಳು ಬಹಿರಂಗವಾಗಿವೆ. ಇದೇ ಪ್ರಕರಣಕ್ಕೆ ಸಂಬಂಧಿಸಿದಂತೆ ಬಾಲಿವುಡ್ ನಟಿ ಸನ್ನಿ ಲಿಯೋನ್ ಸೇರಿದಂತೆ ಕೆಲವು ಚಿತ್ರರಂಗದ ಗಣ್ಯರಿಗೆ ಕರ್ನಾಟಕ ಅಪರಾಧ ತನಿಖಾ ಇಲಾಖೆ (ಸಿಐಡಿ) ನೋಟಿಸ್ ಜಾರಿ ಮಾಡಿದ್ದು, ವಿಚಾರಣೆಗೆ ಹಾಜರಾಗುವಂತೆ ಸೂಚಿಸಿದೆ.

ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ನಡೆಸಿದ ಸಿಐಡಿ ಡಿಐಜಿ ಭೀಮಾಶಂಕರ ಗುಳೇದ ಅವರು ಈ ಕುರಿತು ಮಾಹಿತಿ ನೀಡಿದ್ದು, ಶಿವಾನಂದ ನೀಲಣ್ಣವರ ಸಾರ್ವಜನಿಕರಿಂದ ಅಕ್ರಮವಾಗಿ ಸಂಗ್ರಹಿಸಿದ್ದ ಹಣದ ಒಂದು ಭಾಗವನ್ನು ಸಿನಿಮಾ ಕ್ಷೇತ್ರದ ಹಲವು ನಟ-ನಟಿಯರಿಗೆ ಪಾವತಿಸಿರುವುದು ತನಿಖೆಯಲ್ಲಿ ಬೆಳಕಿಗೆ ಬಂದಿದೆ ಎಂದು ತಿಳಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಹಣದ ವರ್ಗಾವಣೆಗಳ ಬಗ್ಗೆ ಮಾಹಿತಿ ಪಡೆಯಲು ಹಾಗೂ ಹಣದ ಮೂಲವನ್ನು ಪರಿಶೀಲಿಸಲು ನಟಿ ಸನ್ನಿ ಲಿಯೋನ್ ಸೇರಿದಂತೆ ಸಂಬಂಧಿತ ವ್ಯಕ್ತಿಗಳಿಗೆ ನೋಟಿಸ್ ನೀಡಲಾಗಿದೆ ಎಂದು ಹೇಳಿದರು.

ಸಿಐಡಿ ತನಿಖೆಯ ಪ್ರಕಾರ, ಶಿವಾನಂದ ನೀಲಣ್ಣವರ ನಡೆಸುತ್ತಿದ್ದ ಶಿವಂ ಅಸೋಸಿಯೇಟ್ಸ್ ಸಂಸ್ಥೆ ಹೆಚ್ಚಿನ ಬಡ್ಡಿ ಹಾಗೂ ಆಕರ್ಷಕ ಲಾಭಾಂಶದ ಭರವಸೆ ನೀಡಿ ಸಾವಿರಾರು ಜನರಿಂದ ಹಣ ಹೂಡಿಕೆ ಮಾಡಿಸಿಕೊಂಡಿತ್ತು. ರಾಜ್ಯ ಮಾತ್ರವಲ್ಲದೆ ನೆರೆಯ ಮಹಾರಾಷ್ಟ್ರ ಸೇರಿದಂತೆ ವಿವಿಧ ಭಾಗಗಳ ಜನರು ಈ ಯೋಜನೆಯಲ್ಲಿ ಹಣ ಹೂಡಿಕೆ ಮಾಡಿದ್ದರು. ಒಟ್ಟು 40,700ಕ್ಕೂ ಹೆಚ್ಚು ಹೂಡಿಕೆದಾರರಿಂದ ಸುಮಾರು 2,400 ಕೋಟಿ ರೂಪಾಯಿಗೂ ಅಧಿಕ ಮೊತ್ತವನ್ನು ಸಂಸ್ಥೆ ಸಂಗ್ರಹಿಸಿರುವುದು ಪತ್ತೆಯಾಗಿದೆ.

ಅದರಲ್ಲೂ ಸುಮಾರು 10,000ಕ್ಕೂ ಹೆಚ್ಚು ಹೂಡಿಕೆದಾರರು ಮಹಾರಾಷ್ಟ್ರ ರಾಜ್ಯದವರಾಗಿದ್ದು, ಹಲವರು ತಮ್ಮ ಜೀವಮಾನ ಉಳಿತಾಯವನ್ನೇ ಸಂಸ್ಥೆಯಲ್ಲಿ ಹೂಡಿಕೆ ಮಾಡಿದ್ದರು ಎನ್ನಲಾಗಿದೆ. ಹೆಚ್ಚಿನ ಬಡ್ಡಿಯ ಆಮಿಷಕ್ಕೆ ಒಳಗಾಗಿ ಹೂಡಿಕೆ ಮಾಡಿದ ಅನೇಕರು ಈಗ ಸಂಕಷ್ಟಕ್ಕೆ ಸಿಲುಕಿದ್ದಾರೆ.

ತನಿಖೆಯಲ್ಲಿ ಮತ್ತೊಂದು ಮಹತ್ವದ ಅಂಶವೂ ಬೆಳಕಿಗೆ ಬಂದಿದೆ. ಹೂಡಿಕೆದಾರರಿಂದ ಸಂಗ್ರಹಿಸಿದ ಹಣದಲ್ಲಿ ಸುಮಾರು 540 ಕೋಟಿ ರೂಪಾಯಿಯನ್ನು ಶಿವಾನಂದ ನೀಲಣ್ಣವರ ಷೇರು ಮಾರುಕಟ್ಟೆಯಲ್ಲಿ ಹೂಡಿಕೆ ಮಾಡಿದ್ದಾನೆ. ಆದರೆ ಮಾರುಕಟ್ಟೆ ವ್ಯವಹಾರಗಳಲ್ಲಿ ಭಾರೀ ನಷ್ಟ ಅನುಭವಿಸಿದ್ದರಿಂದ ಸುಮಾರು 170 ಕೋಟಿ ರೂಪಾಯಿ ನಷ್ಟವಾಗಿದೆ ಎಂದು ಸಿಐಡಿ ಅಧಿಕಾರಿಗಳು ತಿಳಿಸಿದ್ದಾರೆ.

ಈ ವಂಚನೆ ಜಾಲವನ್ನು ನಿರ್ವಹಿಸಲು ಆರೋಪಿ ಸುಮಾರು 30ಕ್ಕೂ ಹೆಚ್ಚು ಬ್ಯಾಂಕ್ ಖಾತೆಗಳನ್ನು ಬಳಸಿದ್ದಾನೆ ಎನ್ನಲಾಗಿದೆ. ಕೇವಲ ಒಂದು ಬ್ಯಾಂಕ್ ಖಾತೆಯಲ್ಲೇ 36,200 ಪುಟಗಳಷ್ಟು ವಹಿವಾಟಿನ ದಾಖಲೆಗಳು ಪತ್ತೆಯಾಗಿದ್ದು, ಹಣದ ಹರಿವು ಮತ್ತು ವಹಿವಾಟಿನ ಪ್ರಮಾಣ ತನಿಖಾಧಿಕಾರಿಗಳನ್ನೇ ಅಚ್ಚರಿಗೆ ಗುರಿಮಾಡಿದೆ.

ಸಿಐಡಿ ಪ್ರಕಾರ, ಶಿವಾನಂದ ನೀಲಣ್ಣವರ ಪಾಂಜಿ ಮಾದರಿಯ ಹಣಕಾಸು ವಂಚನೆ ವ್ಯವಸ್ಥೆ ನಡೆಸುತ್ತಿದ್ದ. ಹೊಸದಾಗಿ ಸೇರುವ ಹೂಡಿಕೆದಾರರಿಂದ ಬಂದ ಹಣವನ್ನು ಹಳೆಯ ಹೂಡಿಕೆದಾರರಿಗೆ ಬಡ್ಡಿ ಅಥವಾ ಲಾಭಾಂಶದ ರೂಪದಲ್ಲಿ ಪಾವತಿಸುತ್ತಿದ್ದ. ಇದರಿಂದ ಜನರಲ್ಲಿ ವಿಶ್ವಾಸ ಮೂಡಿಸಿ ಇನ್ನಷ್ಟು ಹೂಡಿಕೆಗಳನ್ನು ಸೆಳೆಯಲಾಗುತ್ತಿತ್ತು. ಈ ರೀತಿಯ ಹಣಕಾಸು ಮಾದರಿ ದೀರ್ಘಕಾಲ ಮುಂದುವರಿಯಲು ಸಾಧ್ಯ ವಿಲ್ಲದಿದ್ದರೂ, ಹೆಚ್ಚಿನ ಲಾಭದ ಆಸೆಯಿಂದ ಸಾವಿರಾರು ಜನರು ಹಣ ಹೂಡಿಕೆ ಮಾಡಿದ್ದರು.

ಆಶ್ಚರ್ಯಕರ ಸಂಗತಿಯೆಂದರೆ, ಶಿವಾನಂದ ನೀಲಣ್ಣವರ ಬಂಧನವಾದ ನಂತರವೂ ಜನರು ಹಣ ಹೂಡಿಕೆ ಮಾಡುವುದನ್ನು ನಿಲ್ಲಿಸಿರಲಿಲ್ಲ. ಬಂಧನದ ನಂತರದ ಕೇವಲ 20 ದಿನಗಳ ಅವಧಿಯಲ್ಲಿ ಸಾರ್ವಜನಿಕರಿಂದ ಮತ್ತೆ 5 ಕೋಟಿಗೂ ಹೆಚ್ಚು ಹಣ ಸಂಸ್ಥೆಯ ಖಾತೆಗೆ ಜಮೆಯಾಗಿರುವುದು ತನಿಖೆಯಲ್ಲಿ ಬೆಳಕಿಗೆ ಬಂದಿದೆ. ಇದು ಜನರು ಇನ್ನೂ ಹೆಚ್ಚಿನ ಲಾಭದ ನಿರೀಕ್ಷೆಯಲ್ಲಿ ಹೂಡಿಕೆ ಮಾಡುತ್ತಿದ್ದುದನ್ನು ತೋರಿಸುತ್ತದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

ಪ್ರಕರಣದ ತನಿಖೆಯನ್ನು ಮತ್ತಷ್ಟು ತೀವ್ರಗೊಳಿಸಿರುವ ಸಿಐಡಿ, ವಂಚನೆಯ ಹಣದಿಂದ ಖರೀದಿಸಲಾದ ಆಸ್ತಿಗಳನ್ನು ಗುರುತಿಸಿ ಜಪ್ತಿ ಮಾಡುವ ಕಾರ್ಯ ಆರಂಭಿಸಿದೆ. ಶಿವಾನಂದ ನೀಲಣ್ಣವರ ಕಂಪನಿಯ ಹಣವನ್ನು ತನ್ನ ವೈಯಕ್ತಿಕ ಖಾತೆಗಳಿಗೆ ವರ್ಗಾಯಿಸಿ ಕೊಂಡು ಐಷಾರಾಮಿ ಜೀವನ ನಡೆಸುತ್ತಿದ್ದ ಎನ್ನಲಾಗಿದೆ. ಸುಮಾರು 55 ಕೋಟಿ ವೆಚ್ಚದಲ್ಲಿ ಹಲವು ದುಬಾರಿ ಕಾರುಗಳನ್ನು ಖರೀದಿಸಿರುವ ಮಾಹಿತಿ ಲಭ್ಯವಾಗಿದೆ.

ಆತನ ಬಳಿ ಐಷಾರಾಮಿ ವೆಲ್ಫೈರ್, ಎರಡು ಮರ್ಸಿಡಿಸ್ ಬೆಂಜ್ ಕಾರುಗಳು, ಡಿಫೆಂಡರ್, ಹ್ಯುಂಡೈ ವರ್ನಾ ಹಾಗೂ ವೋಲ್ವೋ ಫಿಅ90 ಸೇರಿದಂತೆ ಹಲವು ದುಬಾರಿ ವಾಹನಗಳಿವೆ ಎಂದು ತನಿಖೆಯಲ್ಲಿ ಪತ್ತೆಯಾಗಿದೆ. ಈ ವಾಹನಗಳು ವಿವಿಧ ರಾಜ್ಯಗಳಲ್ಲಿ ನೋಂದಾಯಿತ ವಾಗಿರುವ ಕಾರಣ ಸಂಬಂಧಿತ ರಾಜ್ಯಗಳ ಅಧಿಕಾರಿಗಳಿಂದ ಮಾಹಿತಿ ಸಂಗ್ರಹಿಸಲಾಗುತ್ತಿದೆ.

ಇದಲ್ಲದೆ, ಆರಂಭಿಕ ಹಂತದಲ್ಲಿ ಕಂಪನಿಯಿಂದ ನಿಯಮ ಮೀರಿ ಅತಿಯಾದ ಲಾಭಾಂಶ ಪಡೆದ ಹಳೆಯ ಹೂಡಿಕೆದಾರರ ಮೇಲೂ ಸಿಐಡಿ ಗಮನ ಹರಿಸಿದೆ. ಈಗಾಗಲೇ ಅವರಿಗೆ ನೋಟಿಸ್ ಜಾರಿ ಮಾಡುವ ಪ್ರಕ್ರಿಯೆ ಆರಂಭವಾಗಿದ್ದು, ಅವರಿಂದ ಸುಮಾರು 400 ಕೋಟಿ ರೂಪಾಯಿಯನ್ನು ವಸೂಲಿ ಮಾಡಿ ವಂಚನೆಗೆ ಒಳಗಾದ ಇತರ ಸಂತ್ರಸ್ತರಿಗೆ ಹಂಚಿಕೆ ಮಾಡುವ ಸಾಧ್ಯತೆಯನ್ನು ಪರಿಶೀಲಿಸಲಾಗುತ್ತಿದೆ.



ಪ್ರಕರಣದ ವ್ಯಾಪ್ತಿ ದಿನದಿಂದ ದಿನಕ್ಕೆ ವಿಸ್ತರಿಸುತ್ತಿದ್ದು, ಹಣ ವರ್ಗಾವಣೆಗಳ ಸಂಪೂರ್ಣ ಜಾಲವನ್ನು ಪತ್ತೆಹಚ್ಚಲು ಸಿಐಡಿ ಅಧಿಕಾರಿಗಳು ಬ್ಯಾಂಕ್ ಖಾತೆಗಳು, ಡಿಜಿಟಲ್ ವ್ಯವಹಾರಗಳು ಹಾಗೂ ಆಸ್ತಿ ದಾಖಲೆಗಳ ಸಮಗ್ರ ಪರಿಶೀಲನೆ ನಡೆಸುತ್ತಿದ್ದಾರೆ. ಸಿನಿಮಾ ಕ್ಷೇತ್ರದ ಗಣ್ಯರು, ಉದ್ಯಮಿಗಳು ಅಥವಾ ಇತರ ಪ್ರಭಾವಿ ವ್ಯಕ್ತಿಗಳಿಗೆ ಹಣ ವರ್ಗಾವಣೆಯಾಗಿದೆಯೇ ಎಂಬ ಅಂಶ ವನ್ನೂ ತನಿಖಾಧಿಕಾರಿಗಳು ಪರಿಶೀಲಿಸುತ್ತಿದ್ದಾರೆ.

ಸಾವಿರಾರು ಕುಟುಂಬಗಳ ಉಳಿತಾಯವನ್ನು ನುಂಗಿರುವ ಈ ಬಹುಕೋಟಿ ಹಗರಣ ರಾಜ್ಯದ ಅತಿದೊಡ್ಡ ಹಣಕಾಸು ವಂಚನೆ ಪ್ರಕರಣಗಳಲ್ಲಿ ಒಂದಾಗಿ ಪರಿಣಮಿಸಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಮಹತ್ವದ ಮಾಹಿತಿಗಳು ಹೊರಬೀಳುವ ಸಾಧ್ಯತೆ ಇದೆ.\ ಸಿಐಡಿ ಅಧಿಕಾರಿಗಳ ಪ್ರಕಾರ, ವಂಚನೆಯ ಹಣವನ್ನು ವಿವಿಧ ಖಾತೆಗಳ ಮೂಲಕ ವರ್ಗಾಯಿಸಿ ಅದರ ಮೂಲವನ್ನು ಮರೆಮಾಚಲು ಪ್ರಯತ್ನಿಸಲಾಗಿತ್ತು. ಹಣದ ಜಾಡು ಪತ್ತೆಹಚ್ಚಲು ಬ್ಯಾಂಕ್ ವಹಿವಾಟುಗಳು, ಡಿಜಿಟಲ್ ಪಾವತಿಗಳು, ಆಸ್ತಿ ಖರೀದಿ ದಾಖಲೆಗಳು ಹಾಗೂ ಸಂಬಂಧಿತ ವ್ಯಕ್ತಿಗಳ ಹಣಕಾಸು ವ್ಯವಹಾರಗಳನ್ನು ಸೂಕ್ಷ್ಮವಾಗಿ ಪರಿಶೀಲಿಸಲಾಗುತ್ತಿದೆ. ಅಗತ್ಯವಿದ್ದರೆ ಇತರೆ ರಾಜ್ಯಗಳ ತನಿಖಾ ಸಂಸ್ಥೆಗಳ ಸಹಕಾರವನ್ನೂ ಪಡೆಯಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಪ್ರಕರಣದಲ್ಲಿ ಇನ್ನೂ ಹಲವು ವ್ಯಕ್ತಿಗಳ ಪಾತ್ರವಿರುವ ಸಾಧ್ಯತೆಯನ್ನು ಸಿಐಡಿ ತಳ್ಳಿಹಾಕಿಲ್ಲ. ಸಂಸ್ಥೆಯ ಕಾರ್ಯಚಟುವಟಿಕೆಗಳಿಗೆ ಸಹಕಾರ ನೀಡಿದವರು, ಹಣ ಸಂಗ್ರಹಣೆಯಲ್ಲಿ ಮಧ್ಯವರ್ತಿಗಳಾಗಿ ಕೆಲಸ ಮಾಡಿದವರು ಹಾಗೂ ವಂಚನೆಯ ಹಣದಿಂದ ಲಾಭ ಪಡೆದವರ ವಿರುದ್ಧವೂ ಕ್ರಮ ಕೈಗೊಳ್ಳುವ ಸಾಧ್ಯತೆ ಇದೆ. ಸಾವಿರಾರು ಹೂಡಿಕೆದಾರರ ಹಣವನ್ನು ಮರಳಿ ಪಡೆಯಲು ಕಾನೂನುಬದ್ಧ ಎಲ್ಲ ಕ್ರಮಗಳನ್ನು ಕೈಗೊಳ್ಳ ಲಾಗುವುದು ಎಂದು ತನಿಖಾಧಿಕಾರಿಗಳು ಭರವಸೆ ನೀಡಿದ್ದಾರೆ.

ಪ್ರಕರಣದ ತನಿಖೆ ಇನ್ನೂ ಮುಂದುವರಿದಿದ್ದು, ವಂಚನೆ ಜಾಲದ ಸಂಪೂರ್ಣ ವ್ಯಾಪ್ತಿ ಹಾಗೂ ಹಣದ ಅಂತಿಮ ಹರಿವು ಕುರಿತು ಸಿಐಡಿ ಅಧಿಕಾರಿಗಳು ಮಾಹಿತಿ ಕಲೆಹಾಕುತ್ತಿದ್ದಾರೆ. ಸಾವಿರಾರು ಹೂಡಿಕೆದಾರರ ಜೀವನದ ಉಳಿತಾಯವನ್ನು ನುಂಗಿರುವ ಈ ಬಹುಕೋಟಿ ಹಗರಣದಲ್ಲಿ ಭಾಗಿಯಾಗಿರುವ ಪ್ರತಿಯೊಬ್ಬರನ್ನೂ ಕಾನೂನಿನ ಮುಂದೆ ತರುವುದಾಗಿ ಅಧಿಕಾರಿಗಳು ತಿಳಿಸಿದ್ದಾರೆ. ತನಿಖೆ ಮುಂದುವರಿದಂತೆ ಇನ್ನಷ್ಟು ಪ್ರಭಾವಿ ವ್ಯಕ್ತಿಗಳ ಹೆಸರುಗಳು ಹೊರಬರುವ ಸಾಧ್ಯತೆ ಇದ್ದು, ರಾಜ್ಯದ ಗಮನ ಸೆಳೆದಿರುವ ಈ ಪ್ರಕರಣದಲ್ಲಿ ಮತ್ತಷ್ಟು ಸ್ಫೋಟಕ ಮಾಹಿತಿಗಳು ಬಹಿರಂಗವಾಗುವ ನಿರೀಕ್ಷೆಯಿದೆ.

# ‘ಟಾಕ್ಸಿಕ್’ ಜಾಗತಿಕ ಮಾರುಕಟ್ಟೆ ಗುರಿ; ಅಮೆರಿಕಾಗೆ ಹಾರಿದ ರಾಕಿಂಗ್ ಸ್ಟಾರ್ ಯಶ್

**ಬೆಂಗಳೂರು:** ರಾಕಿಂಗ್ ಸ್ಟಾರ್ ಯಶ್ ಸದ್ಯ ತಮ್ಮ ಬಹುನಿರೀಕ್ಷಿತ ಟಾಕ್ಸಿಕ್ ಹಾಗೂ ರಾಮಾಯಣ ಸಿನಿಮಾಗಳ ಕೆಲಸಗಳಲ್ಲಿ ತೊಡಗಿಸಿಕೊಂಡಿದ್ದು, ಎರಡೂ ಚಿತ್ರಗಳ ಮೂಲಕ ಜಾಗತಿಕ ಮಟ್ಟದಲ್ಲಿ ಹೊಸ ದಾಖಲೆ ಬರೆಯುವತ್ತ ಹೆಜ್ಜೆ ಇಟ್ಟಿದ್ದಾರೆ. ಅಂದುಕೊಂಡಂತೆ ಆಗಿದ್ದರೆ ಟಾಕ್ಸಿಕ್ ಸಿನಿಮಾ ಈಗಾಗಲೇ ಬಿಡುಗಡೆಯಾಗಬೇಕಾಗಿತ್ತು. ಆದರೆ ಚಿತ್ರೀಕರಣ, ಪೋಸ್ಟ್ ಪ್ರೊಡಕ್ಷನ್ ಹಾಗೂ ಅಂತರರಾಷ್ಟ್ರೀಯ ಮಟ್ಟದ ಯೋಜನೆಗಳ ಕಾರಣದಿಂದ ಚಿತ್ರದ ಬಿಡುಗಡೆ ದಿನಾಂಕವನ್ನು ಹಲವು ಬಾರಿ ಮುಂದೂಡಲಾಗಿದೆ. ಇದೀಗ ಸಿನಿಮಾ ಡಿಸೆಂಬರ್‌ನಲ್ಲಿ ಬಿಡುಗಡೆಯಾಗುವ ಸಾಧ್ಯತೆ ಇದೆ ಎನ್ನಲಾಗುತ್ತಿದೆ.

ಟಾಕ್ಸಿಕ್ ಚಿತ್ರದ ಕೆಲಸಗಳ ಹಿನ್ನೆಲೆಯಲ್ಲಿ ಕಳೆದ ಕೆಲವು ತಿಂಗಳುಗಳಿಂದ ಯಶ್ ಬೆಂಗಳೂರಿಗಿಂತ ಮುಂಬೈನಲ್ಲೇ ಹೆಚ್ಚು ಸಮಯ ಕಳೆಯುತ್ತಿದ್ದರು. ಇದೀಗ ಚಿತ್ರದ ಜಾಗತಿಕ ಮಾರುಕಟ್ಟೆ ವಿಸ್ತರಣೆ ಉದ್ದೇಶದಿಂದ ಅವರು ಅಮೆರಿಕಾಗೆ ತೆರಳಿದ್ದಾರೆ. ಸುಮಾರು 20 ದಿನಗಳ ಕಾಲ ಅಮೆರಿಕಾದಲ್ಲಿ ತಂಗಲಿರುವ ಯಶ್, ಹಾಲಿವುಡ್ ವಲಯದ ವಿತರಕರು ಹಾಗೂ ನಿರ್ಮಾಣ ಸಂಸ್ಥೆಗಳೊಂದಿಗೆ ಮಹತ್ವದ ಸಭೆಗಳನ್ನು ನಡೆಸಲಿದ್ದಾರೆ ಎನ್ನಲಾಗಿದೆ.

ಮೂಲಗಳ ಪ್ರಕಾರ, ಟಾಕ್ಸಿಕ್ ಸಿನಿಮಾವನ್ನು ಕೇವಲ ಭಾರತೀಯ ಮಾರುಕಟ್ಟೆಗೆ ಸೀಮಿತಗೊಳಿಸದೇ ಜಾಗತಿಕ ಮಟ್ಟದಲ್ಲಿ ಬಿಡುಗಡೆ ಮಾಡುವ ಯೋಜನೆ ರೂಪಿಸಲಾಗಿದೆ. ಇಂಗ್ಲಿಷ್ ಹಾಗೂ ಕನ್ನಡ ಸೇರಿದಂತೆ ಬಹುಭಾಷೆಗಳಲ್ಲಿ ನಿರ್ಮಾಣವಾಗುತ್ತಿರುವ ಈ ಚಿತ್ರವನ್ನು ವಿದೇಶಿ ಮಾರುಕಟ್ಟೆಗೂ ತಲುಪಿಸುವ ಪ್ರಯತ್ನಗಳು ನಡೆಯುತ್ತಿವೆ. ವಿಶೇಷವಾಗಿ ಹಾಲಿವುಡ್ ವಿತರಣಾ ಜಾಲದ ಮೂಲಕ ಸಿನಿಮಾ ಬಿಡುಗಡೆ ಮಾಡುವ ಕುರಿತು ಚರ್ಚೆಗಳು ನಡೆಯುತ್ತಿವೆ ಎಂದು ತಿಳಿದುಬಂದಿದೆ.

ಸಾವಿರಾರು ಕೋಟಿ ರೂಪಾಯಿ ಗಳಿಕೆಯ ಗುರಿಯೊಂದಿಗೆ ನಿರ್ಮಾಣವಾಗುತ್ತಿರುವ ಟಾಕ್ಸಿಕ್ ಚಿತ್ರಕ್ಕೆ ಈಗಾಗಲೇ ವಿಶ್ವದಾದ್ಯಂತ ಕುತೂಹಲ ಸೃಷ್ಟಿಯಾಗಿದೆ. ಕೆಜಿಎಫ್ ಸರಣಿಯ ಬಳಿಕ ಯಶ್ ನಟಿಸುತ್ತಿರುವ ಸಿನಿಮಾ ಎಂಬ ಕಾರಣಕ್ಕೂ ಅಭಿಮಾನಿಗಳ ನಿರೀಕ್ಷೆ ಮತ್ತಷ್ಟು ಹೆಚ್ಚಾಗಿದೆ. ಚಿತ್ರದ ಪ್ರತಿಯೊಂದು ಅಪ್‌ಡೇಟ್ ಕೂಡ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗುತ್ತಿದ್ದು, ಜಾಗತಿಕ ಮಟ್ಟದಲ್ಲಿ ಯಶ್ ಅವರ ಜನಪ್ರಿಯತೆ ಹೆಚ್ಚುತ್ತಿರುವುದು ಚಿತ್ರದ ವ್ಯಾಪಾರಕ್ಕೂ ಸಹಕಾರಿಯಾಗಿದೆ.

ಎರಡು ಬಾರಿ ಬಿಡುಗಡೆಯ ದಿನಾಂಕ ಮುಂದೂಡಿಕೆಯಿಂದ ಅಭಿಮಾನಿಗಳು ನಿರಾಸೆಗೊಂಡಿದ್ದರೂ, ಚಿತ್ರತಂಡ ಮಾತ್ರ ಗುಣಮಟ್ಟದಲ್ಲಿ ಯಾವುದೇ ರಾಜಿ ಮಾಡಿಕೊಳ್ಳದ ಉದ್ದೇಶದಿಂದ ಸಮಯ ತೆಗೆದುಕೊಳ್ಳುತ್ತಿದೆ ಎಂದು ಹೇಳಲಾಗಿದೆ. ಅತ್ಯಾಧುನಿಕ ತಂತ್ರಜ್ಞಾನ, ಭಾರೀ ಬಜೆಟ್ ಹಾಗೂ ಅಂತರರಾಷ್ಟ್ರೀಯ ಮಟ್ಟದ ನಿರ್ಮಾಣ ಮೌಲ್ಯಗಳೊಂದಿಗೆ ಸಿನಿಮಾ ಸಿದ್ಧವಾಗುತ್ತಿದ್ದು, ಬಿಡುಗಡೆಯ ಬಳಿಕ ಈ ನಿರೀಕ್ಷೆಗಳಿಗೆ ತಕ್ಕ ಪ್ರತಿಫಲ ನೀಡಲಿದೆ ಎಂಬ ವಿಶ್ವಾಸ ಚಿತ್ರತಂಡದಲ್ಲಿದೆ.

ಇದೇ ವೇಳೆ ರಾಮಾಯಣ ಚಿತ್ರದ ಕೆಲಸಗಳಲ್ಲೂ ಯಶ್ ನಿರತರಾಗಿದ್ದು, ಭಾರತೀಯ ಚಿತ್ರರಂಗದ ಬಹುದೊಡ್ಡ ಯೋಜನೆಗಳಲ್ಲಿ ಒಂದಾಗಿರುವ ಈ ಚಿತ್ರಕ್ಕೂ ಸಾಕಷ್ಟು ನಿರೀಕ್ಷೆ ವ್ಯಕ್ತವಾಗಿದೆ. ಸದ್ಯ ಟಾಕ್ಸಿಕ್ ಚಿತ್ರದ ಜಾಗತಿಕ ವ್ಯಾಪಾರ ವಿಸ್ತರಣೆಯತ್ತ ಯಶ್ ಗಮನ ಹರಿಸಿದ್ದು, ಅಮೆರಿಕಾ ಪ್ರವಾಸದ ಬಳಿಕ ಚಿತ್ರದ ಬಿಡುಗಡೆಯ ದಿನಾಂಕದ ಬಗ್ಗೆ ಅಧಿಕೃತ ಘೋಷಣೆ ಹೊರಬರುವ ಸಾಧ್ಯತೆ ಇದೆ.

ಅಮೆರಿಕಾ ಪ್ರವಾಸದ ವೇಳೆ ಯಶ್ ಹಲವಾರು ಅಂತರರಾಷ್ಟ್ರೀಯ ಸ್ಟುಡಿಯೋಗಳು, ವಿತರಣಾ ಸಂಸ್ಥೆಗಳು ಹಾಗೂ ಸ್ಟ್ರೀಮಿಂಗ್ ವೇದಿಕೆಗಳ ಪ್ರತಿನಿಧಿಗಳೊಂದಿಗೆ ಮಾತುಕತೆ ನಡೆಸಲಿದ್ದಾರೆ ಎನ್ನಲಾಗಿದೆ. ಚಿತ್ರದ ವಿದೇಶಿ ವಿತರಣೆ ಹಕ್ಕುಗಳು, ಡಿಜಿಟಲ್ ಹಕ್ಕುಗಳು ಹಾಗೂ ಜಾಗತಿಕ ಬಿಡುಗಡೆ ತಂತ್ರದ ಬಗ್ಗೆ ಮಹತ್ವದ ಚರ್ಚೆಗಳು ನಡೆಯುವ ಸಾಧ್ಯತೆ ಇದೆ. ಇದರಿಂದ ಟಾಕ್ಸಿಕ್ ಸಿನಿಮಾ ಭಾರತೀಯ ಚಿತ್ರರಂಗದ ಅತಿ-ದೊಡ್ಡ ಜಾಗತಿಕ ಬಿಡುಗಡೆಯೊಂದಾಗಿ ಹೊರಹೊಮ್ಮುವ ನಿರೀಕ್ಷೆ ಮೂಡಿದೆ.

ಇದೀಗ ಚಿತ್ರದ ಬಿಡುಗಡೆಗಾಗಿ ಅಭಿಮಾನಿಗಳು ಕಾತರದಿಂದ ಕಾಯುತ್ತಿದ್ದು, ಯಶ್ ಅವರ ಅಮೆರಿಕಾ ಪ್ರವಾಸ ಚಿತ್ರದ ವ್ಯಾಪಾರಿಕ ಮೌಲ್ಯವನ್ನು ಮತ್ತಷ್ಟು ಹೆಚ್ಚಿಸಲಿದೆ ಎಂಬ ಮಾತುಗಳು ಕೇಳಿಬರುತ್ತಿವೆ. ಕೆಜಿಎಫ್ ಬಳಿಕ ಮತ್ತೊಂದು ಪ್ಯಾನ್-ವರ್ಲ್ಡ್ ಮಟ್ಟದ ಸಂಚಲನ ಸೃಷ್ಟಿಸುವ ಗುರಿಯೊಂದಿಗೆ ಟಾಕ್ಸಿಕ್ ಸಿದ್ಧವಾಗುತ್ತಿದ್ದು, ಬಾಕ್ಸ್ ಆಫೀಸ್‌ನಲ್ಲಿ ಹೊಸ ದಾಖಲೆಗಳನ್ನು ನಿರ್ಮಿಸುವ ವಿಶ್ವಾಸವನ್ನು ಚಿತ್ರತಂಡ ಹೊಂದಿದೆ.